ಸಂಪುಟ: 14 Volume | ಸಂಚಿಕೆ: 41 Issue | ಪುಟಗಳು 08 Pages | ಶನಿವಾರ 16 ಮೇ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ಮತ್ತೆ ಮತ್ತೆ ಯಾವ ಪುಸ್ತಕ ಓದುತ್ತೇವೆಯೋ ಅದು ಉತ್ತಮವಾದ ಪುಸ್ತಕ.

–ಜಾನ್ ರಸ್ಕಿನ್

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ



ಸಚಿವ ಜಮೀರ್ ಅಹಮದ್ ಖಾನ್ ಅವರು ಹಜ್ ಯಾತ್ರಿಕರಿಗೆ ಬೀಳ್ಕೊಟ್ಟರು. ಸಚಿವ ಆರ್. ಬಿ. ತಿಮ್ಮಾಪುರ, ಮಾಜಿ ಸಚಿವ ನಸೀರ್ ಅಹಮದ್, ಸ್ಲಂ ಬೋರ್ಡ್ ಅಧ್ಯಕ್ಷ ಅಬ್ಬಯ್ಯ ಪ್ರಸಾದ್, ಹಜ್ ಸಮಿತಿ ಅಧ್ಯಕ್ಷ ಟಿಪ್ಪು ಧರ್ಮ ಗುರುಗಳು ಉಪಸ್ಥಿತರಿದ್ದರು.

## ವಸತಿ ನಿಲಯಗಳಿಗೆ ಅರ್ಜಿ ಆಹ್ವಾನ

**ಭಾಲ್ಕಿ:** ತಾಲೂಕಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ನಡೆಯುವ ಮೆಟ್ರಿಕ್ ಪೂರ್ವ ಮತ್ತು ನಂತರದ ಬಾಲಕ ಮತ್ತು ಬಾಲಕಿಯರ ವಸತಿ ನಿಲಯಗಳಿಗೆ 2026–27ನೆಯ ಸಾಲಿನ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಶೇ.75 ಮತ್ತು ಹಿಂದುಳಿದ ಶೇ.25ರಷ್ಟು ಸ್ಥಾನಗಳಿಗೆ ಭರ್ತಿ ಮಾಡಿಕೊಳ್ಳಲಾಗುತ್ತಿದೆ. ಮೆಟ್ರಿಕ್ ಪೂರ್ವ ವಸತಿ ನಿಲಯಗಳಿಗೆ 5 ರಿಂದ 10ನೆಯ ತರಗತಿಯ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಮೆಟ್ರಿಕ್ ನಂತರದ ವಸತಿ ನಿಲಯಗಳಿಗೆ ಪಿಯುಸಿ, ಪದವಿ ಮತ್ತು ವೃತ್ತಿಪರ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಮೆಟ್ರಿಕ್ ಪೂರ್ವ ವಸತಿ ನಿಲಯಗಳಿಗೆ ಅರ್ಜಿ ಸಲ್ಲಿಸಲು ಬರುವ ಜೂನ್–30 ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳಿಗೆ ಅರ್ಜಿ ಸಲ್ಲಿಸಲು ಜುಲೈ–31 ಕೊನೆಯ ದಿನವಾಗಿದೆ. ಆಸಕ್ತ ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ (swd service Karnataka govt.com) ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬೇಕು. ಆನ್‌ಲೈನ್ ಸ್ವೀಕೃತಿ ಪ್ರತಿಯನ್ನು ಅಗತ್ಯ ದಾಖಲಾತಿಗಳೊಂದಿಗೆ ಲಗತ್ತಿಸಿ ಪ್ರವೇಶ ಬಯಸುವ ವಸತಿ ನಿಲಯಗಳಿಗೆ ನೇರವಾಗಿ ಸಲ್ಲಿಸಲು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯ ಮೂಲಕ ಕೋರಿದ್ದಾರೆ.



ಬೆಂಗಳೂರು ಪೊಲೀಸ್ ಕಮಿಷನರ್ ಸೀಮಂತ್ ಕುಮಾರ್ ಸಿಂಗ್ ಹಾಗೂ ಹಿರಿಯ ಪೊಲೀಸ್ ಅಧಿಕಾರಿಗಳಾದ ವಂಶಿ ಕೃಷ್ಣ, ಕಾರ್ತಿಕ್ ರೆಡ್ಡಿ, ರಮೇಶ್ ಬನ್ನೋತ್, ಸೈದುಲು ಅದಾವತ್ ಅವರು ಡಿಸಿಎಂ ಡಿ ಕೆ ಶಿವಕುಮಾರ್ ಅವರನ್ನು ಎಚ್ ಎ ಎಲ್ ವಿಮಾನ ನಿಲ್ದಾಣದಲ್ಲಿ ಶುಕ್ರವಾರ ಭೇಟಿ ಮಾಡಿ ಜನ್ಮದಿನದ ಶುಭಾಶಯ ಕೋರಿದರು.

## ಕೇರಳ ಸಿಎಂ ಪ್ರಮಾಣ ವಚನ ಸ್ವೀಕಾರ

ಕೇರಳ ಮುಖ್ಯಮಂತ್ರಿಯಾಗಿ ವಿ.ಡಿ. ಸತೀಶನ್ ಅವರು ಸೋಮವಾರ ಬೆಳಗ್ಗೆ ಹತ್ತು ಗಂಟೆಗೆ ಪ್ರಮಾಣ ವಚನ ಸ್ವೀಕಾರ ಮಾಡಲಿದ್ದಾರೆ. ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸುವಂತೆ ಸತೀಶನ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಆಹ್ವಾನ ನೀಡಿದ್ದಾರೆ. ದೂರವಾಣಿ ಮೂಲಕ ಮಾತನಾಡಿ ಆಹ್ವಾನ ನೀಡಿದ ಸತೀಶನ್ ಅವರನ್ನು ಸಿದ್ದರಾಮಯ್ಯ ಅವರು ಅಭಿನಂದಿಸಿ ಶುಭ ಹಾರೈಸಿದರು.

## ಆರ್ಥಿಕ ಸುಧಾರಣೆಯ ಅಧ್ಯಯನ ಮಾಡಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಗ್ರಾಮ ಪಂಚಾಯತಿಗಳನ್ನು ಆರ್ಥಿಕ ಬೆಳವಣಿಗೆಯ ಎಂಜಿನ್ ಆಗಿ ಪರಿವರ್ತಿಸಲು ಪಿಡಿಒಗಳು ಶ್ರಮಿಸಬೇಕು, ತಮ್ಮ ವ್ಯಾಪ್ತಿಯ ಗ್ರಾಮಗಳಲ್ಲಿನ ಆರ್ಥಿಕ ಸುಧಾರಣೆಯ ಸಾಧ್ಯತೆಗಳನ್ನು ಅಧ್ಯಯನ ಮಾಡಿ ಪಂಚಾಯತಿಗಳನ್ನು ಆರ್ಥಿಕವಾಗಿ ಸದೃಢವಾಗಿಸಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು. ಪಿಡಿಒ ಕ್ಷೇಮಾಭಿವೃದ್ಧಿ ಸಂಘದ ಬೇಡಿಕೆಗಳ ಕುರಿತಂತೆ ನಡೆದ ಸಭೆಯಲ್ಲಿ ಸಚಿವರು ಮಾತನಾಡುತ್ತಿದ್ದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿ ವೃಂದವರು ಸಚಿವರನ್ನು ಭೇಟಿ ಮಾಡಿ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡುತ್ತಿದ್ದು, ಇದರಲ್ಲಿ ಇಲಾಖಾ ಅಧಿಕಾರಿಗಳಿಗೆ



ಆದ್ಯತೆ ಕಲ್ಪಿಸುವುದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಯ್ಕೆ ಶ್ರೇಣಿ ಅಧಿಕಾರಿಗಳನ್ನು ಕಾರ್ಯನಿರ್ವಹಣಾಧಿಕಾರಿ ಹುದ್ದೆಗೆ ಪರಿಗಣಿಸುವುದು ಸೇರಿದಂತೆ ಹಲವು ಬೇಡಿಕೆಗಳ ಬಗ್ಗೆ ಚರ್ಚಿಸಿದರು. ಈ ಬೇಡಿಕೆಗಳ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಚರ್ಚೆ ನಡೆಸಿ ಮುಂದಿನ ಕ್ರಮ ಕೈಗೊಳ್ಳುವುದಾಗಿ ಸಚಿವರು ಹೇಳಿದರು.

ಸಭೆಯಲ್ಲಿ ಇಲಾಖೆಯ ಕಾರ್ಯದರ್ಶಿಗಳಾದ ಸಮೀರ್ ಶುಕ್ಲ, ರಣ್ದೀಪ್, ಡಾ.ಅರುಂಧತಿ ಚಂದ್ರಶೇಖರ್ ಭಾಗವಹಿಸಿದ್ದರು.

## ಹುಮನಾಬಾದ್‌ನಲ್ಲಿ ಕುಸಿದ ಆಡಳಿತ ವ್ಯವಸ್ಥೆ?

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ಒಂದು ಪ್ರದೇಶದ ಅಭಿವೃದ್ಧಿಗೆ ಜನಪ್ರತಿನಿಧಿಗಳು ಎಷ್ಟು ಮುಖ್ಯವೋ, ಅದಕ್ಕಿಂತ ಹೆಚ್ಚು ಜವಾಬ್ದಾರಿ ಆಡಳಿತ ವ್ಯವಸ್ಥೆಯ ಮೇಲಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಹುಮನಾಬಾದ್ ಪಟ್ಟಣ ಹಾಗೂ ತಾಲೂಕಿನ ಹಲವೆಡೆ ಆಡಳಿತ ವ್ಯವಸ್ಥೆ ಸಂಪೂರ್ಣ ಕುಸಿದಂತಾಗಿದೆ ಎಂಬ ಆರೋಪಗಳು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿವೆ. ಜನರು ಮೂಲಭೂತ ಸೌಲಭ್ಯಗಳಿಗಾಗಿ ಕಚೇರಿಗಳ ಸುತ್ತ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿರುವುದು ವಿಷಾದನೀಯ.

ಪಟ್ಟಣದಲ್ಲಿ ರಸ್ತೆ ಸಮಸ್ಯೆ, ಕುಡಿಯುವ ನೀರಿನ ತೊಂದರೆ, ಕಸದ ನಿರ್ವಹಣೆಯ ಕೊರತೆ, ವಿದ್ಯುತ್ ವ್ಯತ್ಯಯ, ಹಾಳಾದ ಒಳಚರಂಡಿ ವ್ಯವಸ್ಥೆ ಮುಂತಾದ ಅನೇಕ ಸಮಸ್ಯೆಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿವೆ. ಸಾರ್ವಜನಿಕರು ಹಲವು ಬಾರಿ ಮನವಿ ಸಲ್ಲಿಸಿದರೂ ಅಧಿಕಾರಿಗಳಿಂದ ಸಮರ್ಪಕ ಸ್ಪಂದನೆ ಸಿಗುತ್ತಿಲ್ಲ ಎಂಬ ಅಸಮಾಧಾನ ಹೆಚ್ಚಾಗಿದೆ. ಸಮಸ್ಯೆಗಳು ಪರಿಹಾರವಾಗಬೇಕಾದರೆ ಕಡತಗಳು ಕಚೇರಿಗಳಲ್ಲೇ ಧೂಳು ತಿನ್ನುತ್ತಿರುವ ಸ್ಥಿತಿ ಜನರಲ್ಲಿ ಆಡಳಿತದ ಮೇಲೆ ನಂಬಿಕೆ ಕುಗ್ಗುವಂತೆ ಮಾಡುತ್ತಿದೆ.

ಗ್ರಾಮೀಣ ಭಾಗದಲ್ಲೂ ಪರಿಸ್ಥಿತಿ ಭಿನ್ನವಾಗಿಲ್ಲ. ರೈತರು ವಿದ್ಯುತ್ ಸಮಸ್ಯೆ, ನೀರಾವರಿ ತೊಂದರೆ, ರಸ್ತೆ ಅವ್ಯವಸ್ಥೆಯಿಂದ ಸಂಕಷ್ಟ ಅನುಭವಿಸುತ್ತಿದ್ದಾರೆ. ಸರ್ಕಾರಿ ಯೋಜನೆಗಳ ಸೌಲಭ್ಯ ಪಡೆಯಲು ಬಡವರು ತಿಂಗಳುಗಟ್ಟಲೆ ಕಚೇರಿಗಳಿಗೆ ಅಲೆದಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿರುವುದು ಆಡಳಿತದ ವೈಫಲ್ಯವನ್ನು ತೋರಿಸುತ್ತದೆ. ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಪರಸ್ಪರ ಆರೋಪ ಮಾಡುವುದನ್ನು ಬಿಟ್ಟು ಜನರ ಸಮಸ್ಯೆಗಳ ಪರಿಹಾರಕ್ಕೆ ಆದ್ಯತೆ ನೀಡಬೇಕು. ಸಾರ್ವಜನಿಕ ಸೇವೆಗೆ ನೇಮಕವಾದ ಅಧಿಕಾರಿಗಳು ಜನರೊಂದಿಗೆ ಸೌಜನ್ಯದಿಂದ ನಡೆದು ತ್ವರಿತ ಸೇವೆ ನೀಡುವುದು ಕರ್ತವ್ಯವಾಗಿದೆ.

# ಬೆಲೆ ಏರಿಕೆಯ ಬಾಂಬ್..!

### ಪೆಟ್ರೋಲ್–ಡಿಸೇಲ್ ಪ್ರತಿ ಲೀಟರ್‌ಗೆ ತಲಾ 3 ರೂ.ಹೆಚ್ಚಳ | ಸಾರ್ವಜನಿಕರಿಗೆ ವಿಶೇಷ ಹೊರೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು


ಮಧ್ಯಪ್ರಾಚ್ಯ ಬಿಕ್ಕಟ್ಟಿನಿಂದಾಗಿ ಇದೀಗ ದೇಶದಾದ್ಯಂತ ಬೆಲೆ ಹೆಚ್ಚಳ ಬಾಂಬ್ ಸಿಡಿದಿದೆ. ರಾಜ್ಯದಲ್ಲೂ ಪೆಟ್ರೋಲ್–ಡಿಸೇಲ್ ಪ್ರತಿ ಲೀಟರ್‌ಗೆ ತಲಾ3 ರೂ.ನಂತೆ ಬೆಲೆ ಏರಿಕೆಯಾಗಿದೆ. ಬೆಂಗಳೂರು ಸೇರಿದಂತೆ ಕರ್ನಾಟಕದ ಮೇಲೂ ಪರಿಣಾಮ ಬೀರಿದೆ. ದಿನನಿತ್ಯದ ಖರ್ಚುವೆಚ್ಚದ ಮೇಲೂ ಡೊಮಿನೋ ಎಫೆಕ್ಟ್ ಸೃಷ್ಟಿಸಲಿದೆ.

**ಅಗತ್ಯವಸ್ತುಗಳೂ ದುಬಾರಿ:** ಈ ತೈಲ ಬೆಲೆ ಏರಿಕೆಯಿಂದಾಗಿ ನಮ್ಮ ತಟ್ಟೆಯಲ್ಲಿನ ಆಹಾರ ಪದಾರ್ಥಗಳಿಂದ ಹಿಡಿದು ದಿನನಿತ್ಯದ ಸರಕುಗಳ ವರೆಗೆ ಪ್ರತಿಯೊಂದರ ಮೇಲೂ ಪರಿಣಾಮ ಬೀರಲಿದೆ. ಸಂಚಾರ ಹೀಗೆ ನಾನಾ ರೀತಿಯಲ್ಲಿ ದಿನನಿತ್ಯದ ಅವಶ್ಯಕತೆಗಳನ್ನು ದುಬಾರಿಯಾಗುವಂತೆ ಮಾಡಲಿದೆ.

**ದೈನಂದಿನ ಬದುಕಿಗೂ ಸಂಚಕಾರ:** ಜನಸಾಮಾನ್ಯರ ಜೇಬಿಗೆ ಕತ್ತರಿ ಬೀಳಲಿದೆ. ಹಾಗಿದ್ರೆ, ಈ ಇಂಧನ ಬೆಲೆ ಏರಿಕೆಯಿಂದ ಪ್ರಸ್ತುತ ದಿನದ ಅಂಕಿಅಂಶಗಳ ಆಧಾರದ ಮೇಲೆ ನಮ್ಮ ದೈನಂದಿನ ಬದುಕಿನ ಮೇಲೆ ಹೇಗೆ ಪರಿಣಾಮ ಬೀರಲಿದೆ. ಇದ–ರಿಂದ ಜನಜೀವನ ಅಸ್ತವ್ಯಸ್ತವಾಲಿದೆ.

### ಕರ್ನಾಟಕದಲ್ಲಿ ಪೆಟ್ರೋಲ್, ಡಿಸೇಲ್ ಬೆಲೆ..?

ಕರ್ನಾಟಕ ಅದರಲ್ಲೂ ಪ್ರಮುಖವಾಗಿ ಬೆಂಗಳೂರಿನಲ್ಲಿ ಪೆಟ್ರೋಲ್ ಬೆಲೆ 3.26 ರೂ, ಡೀಸೆಲ್ ಬೆಲೆ 3.12 ರೂ ಹೆಚ್ಚವಾಗಿದೆ. ಈ ಮೊದಲು ಪ್ರತಿ ಲೀ.ಪೆಟ್ರೋಲ್‌ಗೆ 102.92 ರೂ.ಗಳಿಂದ 106.17 ರೂ.ಗಳಿಗೆ ಏರಿಕೆ. ಡಿಸೇಲ್ ಪ್ರತಿ ಲೀ.ಗೆ 90.99 ರೂ.ಗಳಿಂದ 94.10 ರೂ.ಗಳಿಗೆ ಏರಿಕೆ. ಜೊತೆಗೆ CNG ಬೆಲೆ ಹೆಚ್ಚಿದ್ದು, ಸದ್ಯ ಪ್ರತಿ ಕೆ.ಜಿ CNG ಬೆಲೆ 77.09 ರೂ. ಆಗಿದೆ.



### ಗೃಹ ಬಳಕೆ, ಸರಕು ದರ..!

ಮೊದಲನೆಯದಾಗಿ ತೈಲಬೆಲೆ ಏರಿಕೆಗಳು ನಮ್ಮ ಅಡುಗೆ ಮನೆಯ ಮೇಲೆ ಪರಿಣಾಮ ಬೀರಲಿದೆ. ಇದಕ್ಕೆ ಕಾರಣ ಬೆಂಗಳೂರಿಗೆ ಬರುವು ಬಹುತೇಕ ತರಕಾರಿಗಳು ಕೋಲಾರ, ಚಿಕ್ಕಬಳ್ಳಾಪುರ ಮತ್ತು ಬೆಳಗಾವಿಯಂತಹ ಜಿಲ್ಲೆಗಳಿಂದ ಡೀಸೆಲ್ ಲಾರಿಗಳ ಮೂಲಕವೇ ಸರಬರಾಜಾಗುತ್ತವೆ. ಈಗ ಡೀಸೆಲ್ ಬೆಲೆ ಏರಿಕೆಯಾಗಿದ್ದರಿದ ತರಕಾರಿಗಳ ಬೆಲೆಯ ಮೇಲೂ ಪರಿಣಾಮ ಬೀರಲಿದೆ.

### ಎಣ್ಣೆ, ಧಾನ್ಯ ದುಬಾರಿ

ಡೇರಿ ಪದಾರ್ಥಗಳು ಹಾಗೂ ಪ್ಯಾಕ್ಡ್ ಆಹಾರ ಉತ್ಪನ್ನಗಳ ಮೇಲೂ ಪರಿಣಾಮ ಬೀರಲಿದ್ದು, ನಂದಿನಿಯಂತಹ ಸರ್ಕಾರಿ ಸ್ವಾಮ್ಯದ ಬ್ರ್ಯಾಂಡ್‌ಗಳ ಬೆಲೆ ಸದ್ಯಕ್ಕೆ ಸ್ಥಿರವಾಗಿದ್ದರೂ, ಖಾಸಗಿ ಡೇರಿ, ಮನೆ ಬಾಗಿಲಿಗೆ ಹಾಲು ತಲುಪಿಸುವ ಸೇವೆಗಳ ದರ ಹೆಚ್ಚಾಗುವ ಸಾಧ್ಯತೆಯಿದೆ. ಅಡುಗೆ ಎಣ್ಣೆ, ಧಾನ್ಯಗಳು ಮತ್ತು ಸೋಪುಗಳಂತಹ ಉತ್ಪನ್ನಗಳ ಬೆಲೆ ಏರಿಕೆಯಾಗಲಿದೆ.


### ಇ–ಕಾಮರ್ಸ್ ಡೆಲಿವರಿ ಶುಲ್ಕ

ಸ್ವಿಗ್ಗಿ, ಜೊಮಾಟೋ ಅಥವಾ ಅಮೆಜಾನ್ ನಂತಹ ಇ–ಕಾಮರ್ಸ್ ಆಪ್ ಸೇವೆಯಲ್ಲಲಿನ ಆನ್‌ಲೈನ್ ಡೆಲಿವರಿಗಳು ಹಾಗೂ ಸರಕುಗಳ ಡೆಲಿವರಿಯ ದರವೂ ಹೆಚ್ಚಳವಾಗಲಿದೆ. ಇಂಧನ ಬೆಲೆ ಏರಿಕೆಯಿಂದ ತಮ್ಮ ಸಂಚಾರದ ಮೇಲಿನ ಪರಿಣಾಮವನ್ನು ಸರಿದೂಗಿಸಲು ಗ್ರಾಹಕರ ಉತ್ಪನ್ನಗಳ ಮೇಲಿನ ಡೆಲಿವರಿ ಚಾರ್ಜ್ ಅನ್ನು 2ರೂ ನಿಂದ 5 ರೂ. ಹೆಚ್ಚಾಗಬಹುದು.

## ತೋಟಗಾರಿಕೆ ವಿವಿಯಲ್ಲಿ ಮಾವು ಮೇಳ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ತೋಟಗಾರಿಕೆ ಇಲಾಖೆ, ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆ ಹಾಗೂ ಡಾ.ಎಸ್. ಬಿ. ದಂಡಿನ ಶಿಕ್ಷಣ ಮತ್ತು ಸಂಶೋಧನೆ ಪ್ರತಿಷ್ಠಾನ ಸಂಸ್ಥೆಗಳ ಸಹಯೋಗದಲ್ಲಿ ಮೇ 16 ರಿಂದ 18 ರವರೆಗೆ ಮೂರು ದಿನಗಳ ಕಾಲ ಮಾವು ಮೇಳವನ್ನು ತೋತಗಾರಿಕೆ ವಿವಿಯಲ್ಲಿ ಆಯೋಜಿಸಲಾಗಿದೆ.



ಮೇ 16 ರಂದು ಬೆಳಿಗ್ಗೆ 10 ಗಂಟೆಗೆ ಉದ್ಘಾಟನೆ ಕಾರ್ಯಕ್ರಮ ಜರುಗಲಿದ್ದು. ಕಾರ್ಯಕ್ರಮದಲ್ಲಿ ಬಾದಾಮಿ ಶಾಸಕ ಬಿ.ಬಿ.ಚಿಮ್ಮನಕಟ್ಟಿ, ವಿಧಾನ ಪರಿಷತ್ ಶಾಸಕ ಹನಮಂತ ನಿರಾಣಿ, ತೋತಗಾರಿಕೆ ವಿವಿಯ ಕುಲಪತಿ ಡಾ.ತಮ್ಮಯ್ಯ ಎನ್, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ರವೀಂದ್ರ ಹಕಾಟಿ, ಕೃಷಿಕ ಸಮಾಜದ ಅಧ್ಯಕ್ಷ ಮಹಾಂತೇಶ ಹಟ್ಟಿ, ಕಲಾದಗಿ ಹಣ್ಣು ಬೆಳೆಗಾರರ ಸಂಘದ ಅಧ್ಯಕ್ಷ ಕೆ.ಟಿ.ಪಾಟೀಲ ಭಾಗವಹಿಸಲಿದ್ದಾರೆ.

## ಮೋಟಾರ್ ಹಾಗೂ ಪೈಪ್ ಸಾಮಾಗ್ರಿ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ಬೋರವೆಲ್ ಕೊರೆಸಿದ ಭಾಲ್ಕಿ ತಾಲೂಕಿನ ವಿವಿಧ ಫಲಾನುಭವಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಈಶ್ವರ ಖಂಡ್ರೆ ಅವರು ಇಂದು ಮೋಟಾರ್ ಹಾಗೂ ಪೈಪ್ ಸಾಮಗ್ರಿಗಳನ್ನು ವಿತರಿಸಿ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ರಾಜ್ಯ ಸರ್ಕಾರ ರೈತರ ಅಭಿವೃದ್ಧಿಗೆ ಹಾಗೂ ನೀರಾವರಿ ಸೌಲಭ್ಯ ವಿಸ್ತರಣೆಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ. ಗಂಗಾ ಕಲ್ಯಾಣ



ಯೋಜನೆಯ ಮೂಲಕ ಸಣ್ಣ ರೈತರಿಗೆ ನೀರಿನ ಸೌಲಭ್ಯ ಒದಗಿಸಿ ಕೃಷಿ ಚಟುವಟಿಕೆಗಳಿಗೆ ಉತ್ತೇಜನ ನೀಡಲಾಗುತ್ತಿದೆ ಎಂದು ಹೇಳಿದರು. ಯೋಜನೆಯ ಸದುಪಯೋಗವನ್ನು ಪಡೆದುಕೊಂಡು ರೈತರು ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು ಎಂದು ಸಚಿವರು ಕರೆ ನೀಡಿದರು.

## ಸರ್ಕಾರಿ ಆಸ್ಪತ್ರೆಯ ಒಳರೋಗಿಗಳಿಗೆ ಹಣ್ಣು ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಅಖಿಲ ಕರ್ನಾಟಕ ಡಿ.ಕೆ. ಶಿವಕುಮಾರ ಅಭಿಮಾನಿ ಬಳಗ ಸಂಘ, ಬೀದರ ವತಿಯಿಂದ ರಾಜ್ಯದ ಉಪಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ ಅವರ 65ನೇ ಜನ್ಮ ದಿನಾಚರಣೆಯನ್ನು ನಗರದ ವಿವಿಧ ಭಾಗಗಳಲ್ಲಿ ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಅತ್ಯಂತ ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ನಗರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿದ ಸಂಘದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಆಸ್ಪತ್ರೆಯ ಒಳರೋಗಿಗಳಿಗೆ ಹಣ್ಣು ವಿತರಣೆ ಮಾಡಿ ಅವರ ಆರೋಗ್ಯಕ್ಷೇಮ ವಿಚಾರಿಸಿದರು. ರೋಗಿಗಳಿಗೆ ಧೈರ್ಯ ತುಂಬುವ ಉದ್ದೇಶದಿಂದ ಮಾನವೀಯ ಸೇವಾ ಕಾರ್ಯ ಕೈಗೊಳ್ಳಲಾಗಿದ್ದು, ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಯಿತು.

ಅಖಿಲ ಕರ್ನಾಟಕ ಡಿ.ಕೆ. ಶಿವಕುಮಾರ ಅಭಿಮಾನಿ ಬಳಗ ಸಂಘದ ನಗರ ಅಧ್ಯಕ್ಷರಾದ ಅಮರ ಬಾಂಗೆ ಅವರು ಮಾತನಾಡಿ ಡಿ.ಕೆ. ಶಿವಕುಮಾರ ಅವರು ರಾಜ್ಯ ರಾಜಕಾರಣದಲ್ಲಿ ಜನಪರ ನಾಯಕತ್ವದ ಮೂಲಕ ವಿಶಿಷ್ಟ ಗುರುತಿಸಿಕೊಂಡಿದ್ದು, ಅವರ ಜನಸೇವೆಯ ಕಾರ್ಯಗಳು ಯುವಜನತೆಗೆ ಪ್ರೇರಣೆಯಾಗಿವೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಎಂ.ಡಿ. ಗೌಸ್, ಅರುಣ ಕಾಂಬಳೆ, ಏರೋನ್ ಬಾಂಗೆ, ಆಡಂ ಪ್ರಿನ್ಸ್, ರೋಹಿತ್, ಲೋಕೇಶ್, ಟೋನಿ, ಮೋಜಸ್ ಎನ್., ಅಕ್ಷಯ, ಆನಂದ್, ಶಾದ್ರಕ್, ಜಾರ್ಜ್, ಸಾಮ್ಸನ್ ಜಾನ್ ಸೇರಿದಂತೆ ಅನೇಕ ಮುಖಂಡರು, ಯುವಕರು ಮತ್ತು ಅಭಿಮಾನಿಗಳು ಉಪಸ್ಥಿತರಿದ್ದರು.



### ಕೇಕ್ ಕತ್ತರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ

ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಪೌರಾಡಳಿತ ಸಚಿವರಾದ ರಹೀಂ ಖಾನ್ ಅವರು ಭಾಗವಹಿಸಿ ಕೇಕ್ ಕತ್ತರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಡಿ.ಕೆ. ಶಿವಕುಮಾರ ಅವರ ದೀರ್ಘಾಯುಷ್ಯ ಹಾಗೂ ಉತ್ತಮ ಆರೋಗ್ಯಕ್ಕಾಗಿ ಪ್ರಾರ್ಥನೆ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಅಭಿಮಾನಿಗಳು ಹಾಗೂ ಕಾರ್ಯಕರ್ತರು ಸಿಹಿ ಹಂಚಿಕೊಂಡು ಸಂಭ್ರಮಿಸಿದರು.

## ಟ್ಯಾಂಕರ್–ಟ್ರ್ಯಾಕ್ಟರ್ ಮಧ್ಯೆ ಅಪಘಾತ, 6 ಮಂದಿ ಸಾವು

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ರಾಷ್ಟ್ರೀಯ ಹೆದ್ದಾರಿ–50ರಲ್ಲಿ ಟ್ಯಾಂಕರ್ ಲಾರಿ ಮತ್ತು ಟ್ರ್ಯಾಕ್ಟರ್ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ಒಂದೇ ಕುಟುಂಬದ ಆರು ಮಂದಿ ಸ್ಥಳದಲ್ಲೇ ಮೃತಪಟ್ಟ ದಾರುಣ ಘಟನೆ ಮುನಿರಾಬಾದ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಸುಮಾರು 16 ಮಂದಿ ಪ್ರಯಾಣಿಸುತ್ತಿದ್ದ ಟ್ರ್ಯಾಕ್ಟರ್‌ಗೆ ವೇಗವಾಗಿ ಬಂದ ಟ್ಯಾಂಕರ್ ಲಾರಿ ಹಿಂಬದಿಯಿಂದ ಢಿಕ್ಕಿ ಹೊಡೆದ ಪರಿಣಾಮ ಟ್ರ್ಯಾಕ್ಟರ್ ನಿಯಂತ್ರಣ ತಪ್ಪಿ ಸೇತುವೆಯಿಂದ ಕೆಳಗೆ ಪಲ್ಟಿಯಾಗಿ ಬಿದ್ದಿದೆ. ಟ್ಯಾಂಕರ್ ಲಾರಿಯೂ ಸಹ ಕೆಳಭಾಗಕ್ಕೆ ಉರುಳಿದೆ ಎಂದು ತಿಳಿದು ಬಂದಿದೆ.

ಅಪಘಾತದಲ್ಲಿ ಕೆಂಚಪ್ಪ(35), ಮಹಾಂತೇಶ್ (18), ಭರತ್ (1), ಸವಿತಾ (12), ಮಾರೇಶ್ ಹಾಗೂ ಗೌರಮ್ಮ ಮೃತಪಟ್ಟಿದ್ದಾರೆ. ಮೃತರು ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲೂಕಿನ ಮರ್ಲಾಯನಹಳ್ಳಿ ಹಾಗೂ ಬಳ್ಳಾರಿ ಜಿಲ್ಲೆಯ ಸಂಡೂರು ತಾಲೂಕಿನ ಯಶವಂತನಗರ ನಿವಾಸಿಗಳಾಗಿದ್ದಾರೆ ಎಂದು ತಿಳಿದುಬಂದಿದೆ.



ಹತ್ತಕ್ಕೂ ಹೆಚ್ಚು ಮಂದಿ ಗಂಭೀರವಾಗಿ ಗಾಯಗೊಂಡಿದ್ದು, ಗಾಯಾಳುಗಳನ್ನು ಪೊಲೀಸರು ಹಾಗೂ ಸ್ಥಳೀಯರು ರಕ್ಷಿಸಿ ಚಿಕಿತ್ಸೆಗಾಗಿ ಹೊಸಪೇಟೆ ಮತ್ತು ಕೊಪ್ಪಳದ ಸರ್ಕಾರಿ ಆಸ್ಪತ್ರೆಗಳಿಗೆ ದಾಖಲಿಸಿದ್ದಾರೆ. ಕೆಲವರ ಸ್ಥಿತಿ ಚಿಂತಾಜನಕವಾಗಿದ್ದು, ಸಾವಿನ ಸಂಖ್ಯೆ ಮತ್ತಷ್ಟು ಏರಿಕೆಯಾಗುವ ಆತಂಕ ವ್ಯಕ್ತವಾಗಿದೆ. ಇವರು ಹುಲಿಗೆಮ್ಮ ದೇವಸ್ಥಾನಕ್ಕೆ ತೆರಳುತ್ತಿದ್ದ ವೇಳೆ ಈ ದುರ್ಘಟನೆ ಸಂಭವಿಸಿದೆ ಎನ್ನಲಾಗಿದೆ. ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಮುನಿರಾಬಾದ್ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ.

## ಪ್ರತಿಯೊಂದು ಬೆಲೆ ಏರಿಕೆಗೆ ರಾಜ್ಯ ಸರ್ಕಾರವು ಕಾರಣ: ಎಚ್.ಡಿ.ಕುಮಾರಸ್ವಾಮಿ ದೂರು

# ರೈತರಿಗೆ ಸಮರ್ಪಕ ವಿದ್ಯುತ್ ಪೂರೈಕೆ ಅಗತ್ಯ

ದೇಶದ ಬೆನ್ನೆಲುಬು ರೈತರು. ರೈತನು ಹೊಲದಲ್ಲಿ ಬೆವರು ಸುರಿಸಿದಾಗಲೇ ದೇಶದ ಜನತೆಗೆ ಅನ್ನ ಸಿಗುತ್ತದೆ. ಕೃಷಿಯೇ ಭಾರತದ ಆರ್ಥಿಕ ವ್ಯವಸ್ಥೆಯ ಪ್ರಮುಖ ಆಧಾರವಾಗಿದ್ದು, ರೈತರ ಪರಿಶ್ರಮದಿಂದಲೇ ದೇಶದ ಅಭಿವೃದ್ಧಿ ಸಾಧ್ಯವಾಗುತ್ತಿದೆ. ಆದರೆ ಇಂತಹ ರೈತರು ಇಂದಿಗೂ ಅನೇಕ ಮೂಲಭೂತ ಸಮಸ್ಯೆಗಳ ನಡುವೆ ಬದುಕು ಸಾಗಿಸುತ್ತಿದ್ದಾರೆ. ಅದರಲ್ಲಿ ಪ್ರಮುಖವಾದುದು ಸಮರ್ಪಕ ವಿದ್ಯುತ್ ಪೂರೈಕೆ ಕೊರತೆ.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ಇಂದಿನ ಕೃಷಿ ಸಂಪೂರ್ಣವಾಗಿ ವಿದ್ಯುತ್ ಅವಲಂಬಿತವಾಗಿದೆ. ಬೋರ್‌ವೆಲ್, ಪಂಪ್‌ಸೆಟ್, ನೀರಾವರಿ ವ್ಯವಸ್ಥೆ ಸೇರಿದಂತೆ ಅನೇಕ ಕೃಷಿ ಚಟುವಟಿಕೆಗಳಿಗೆ ವಿದ್ಯುತ್ ಅತ್ಯವಶ್ಯಕ. ಆದರೆ ಗ್ರಾಮೀಣ ಪ್ರದೇಶಗಳಲ್ಲಿ ನಿರಂತರ ಲೋಡ್ ಶೆಡ್ಡಿಂಗ್, ರಾತ್ರಿ ವೇಳೆ ಮಾತ್ರ ವಿದ್ಯುತ್ ಪೂರೈಕೆ, ಕಡಿಮೆ ವೋಲ್ಟೇಜ್ ಸಮಸ್ಯೆಗಳಿಂದ ರೈತರು ಸಂಕಷ್ಟ ಅನುಭವಿಸುತ್ತಿದ್ದಾರೆ. ಅನೇಕ ಬಾರಿ ಟ್ರಾನ್ಸ್‌ಫಾರ್ಮರ್‌ಗಳು ಸುಟ್ಟು ಹೋಗಿ ದಿನಗಟ್ಟಲೆ ದುರಸ್ತಿ ಆಗದೇ ಇರುವುದರಿಂದ ಬೆಳೆಗಳಿಗೆ ನೀರು ಸಿಗದೆ ರೈತರು ನಷ್ಟ ಅನುಭವಿಸುತ್ತಿದ್ದಾರೆ.

ಸರ್ಕಾರಗಳು ರೈತರ ಹಿತದೃಷ್ಟಿಯಿಂದ ಘೋಷಣೆಗಳನ್ನು ಮಾಡುವುದು ಮಾತ್ರ ಸಾಕಾಗುವುದಿಲ್ಲ. ರೈತರಿಗೆ ಸಮಯಕ್ಕೆ ಸರಿಯಾಗಿ ಮತ್ತು ಗುಣಮಟ್ಟದ ವಿದ್ಯುತ್ ಪೂರೈಕೆ ಮಾಡುವುದು ಅತ್ಯವಶ್ಯಕ. ವಿಶೇಷವಾಗಿ ಬೇಸಿಗೆ ಹಾಗೂ ಬರ ಪರಿಸ್ಥಿತಿಯಲ್ಲಿ ಕೃಷಿಗೆ ಹೆಚ್ಚು ನೀರಿನ ಅಗತ್ಯವಿರುವುದರಿಂದ ವಿದ್ಯುತ್ ವ್ಯತ್ಯಯ ರೈತರ ಬದುಕಿನ ಮೇಲೆ ದೊಡ್ಡ ಪರಿಣಾಮ ಬೀರುತ್ತದೆ.

ವಿದ್ಯುತ್ ಇಲಾಖೆ ಅಧಿಕಾರಿಗಳು ರೈತರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಬೇಕು. ಟ್ರಾನ್ಸ್‌ಫಾರ್ಮರ್ ದುರಸ್ತಿ, ಕಡಿಮೆ ವೋಲ್ಟೇಜ್ ಸಮಸ್ಯೆ, ವಿದ್ಯುತ್ ಲೈನ್ ದೋಷಗಳನ್ನು ಶೀಘ್ರ ಪರಿಹರಿಸಬೇಕು. ರೈತರು ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಬಾರದು. ರೈತರೊಂದಿಗೆ ಮಾನವೀಯತೆ ಹಾಗೂ ಸಹಾನುಭೂತಿಯಿಂದ ವರ್ತಿಸುವುದು ಅಧಿಕಾರಿಗಳ ಕರ್ತವ್ಯವಾಗಿದೆ.

ದೇಶದ ಆಹಾರ ಭದ್ರತೆಯನ್ನು ಕಾಪಾಡುವ ರೈತರನ್ನು ನಿರ್ಲಕ್ಷಿಸುವುದು ದೇಶದ ಭವಿಷ್ಯವನ್ನು ದುರ್ಬಲಗೊಳಿಸುವಂತಾಗಿದೆ. ರೈತರು ಉಳಿದರೆ ಮಾತ್ರ ದೇಶ ಉಳಿಯುತ್ತದೆ. ಆದ್ದರಿಂದ ಸರ್ಕಾರ ಹಾಗೂ ವಿದ್ಯುತ್ ಇಲಾಖೆ ರೈತರಿಗೆ ಸಮರ್ಪಕ ಮತ್ತು ನಿರಂತರ ವಿದ್ಯುತ್ ಪೂರೈಕೆ ಮಾಡಲು ಗಂಭೀರ ಕ್ರಮ ಕೈಗೊಳ್ಳಬೇಕು.

# ಅಗ್ನಿವೀರ ಸೇನಾ ಭರ್ತಿ ರ‍್ಯಾಲಿ

**ಬೀದರ:** ಬೀದರ್‌ನಲ್ಲಿ ಜನೇವರಿ–2027 ರಲ್ಲಿ ಬಹುವರ್ಷಗಳ ನಂತರ ಅಗ್ನಿವೀರ ಸೇನಾ ಭರ್ತಿ ರ‍್ಯಾಲಿ ಜರುಗಲಿದ್ದು, ಬೀದರ ಜಿಲ್ಲೆಯ ಉದ್ಯೋಗಾಕಾಂಕ್ಷಿ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಇದರ ಲಾಭ ಪಡೆಯಬೇಕೆಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದರು. ಅವರು ಶುಕ್ರವಾರ ಬೀದರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಈ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾಡನಾಡುತ್ತಾ, ಕಲ್ಯಾಣ ಕರ್ನಾಟಕದ ಆರು ಜಿಲ್ಲೆಗಳ ಯುವಕರು ಈ ಸೇನಾ ಭರ್ತಿ ರ‍್ಯಾಲಿಯಲ್ಲಿ ಪಾಲ್ಗೊಳ್ಳಲು ಅವಕಾಶ ಇದ್ದು, ಬೀದರ ಜಿಲ್ಲೆಯ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು. ಬೀದರನ ನೆಹರು ಕ್ರೀಡಾಂಗಣದಲ್ಲಿ ಸೇನಾ ಭರ್ತಿ ರ‍್ಯಾಲಿ ಜರುಗಲಿದ್ದು, ರ‍್ಯಾಲಿ ಯಶಸ್ವಿಗೊಳ್ಳಲು ಜಿಲ್ಲಾಡಳಿತದಿಂದ ಎಲ್ಲ ರೀತಿಯ ಸಹಕಾರ ನೀಡುವುದುದಾಗಿ ತಿಳಿಸಿದರು. ಅಗ್ನಿವೀರ ಸೇನಾ ಭರ್ತಿ ರ‍್ಯಾಲಿ ಬಗ್ಗೆ ಮಾತನಾಡಿದ ಕರ್ನಲ್ ಅಶ್ವಿನಿ ಅವರು ಬೀದರನಲ್ಲಿ 5 ವರ್ಷಗಳ ನಂತರ ರ‍್ಯಾಲಿ ಜರುಗಲಿದೆ. ಕಲ್ಯಾಣ ಕರ್ನಾಟಕದ ಜಿಲ್ಲೆಗಳ ಯುವಕರು ವಿಶೇಷವಾಗಿ ಬೀದರ ಜಿಲ್ಲೆಯ ಯುವಕರು ಇದರ ಪ್ರಯೋಜನ ಪಡೆದುಕೊಳ್ಳಬೇಕೆಂದು ತಿಳಿಸಿದರು. ಬೀದರ ಜಿಲ್ಲೆಯ ಅಭ್ಯರ್ಥಿಗಳು ತೀರ ಕಡಿಮೆ ಸಂಖ್ಯೆಯಲ್ಲಿ ಪಾಲ್ಗೊಳ್ಳುತ್ತಾರೆ, ಯುವರಲ್ಲಿ ಸೇನಾ ಭರ್ತಿ ಬಗ್ಗೆ ಹೆಚ್ಚಿನ ಅರಿವು ಪ್ರಚಾರ ಅಗತ್ಯವಿದೆ ಎಂದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ ಸೇರಿದಂತೆ ವಿವಿಧ ಅದಿಕಾರಿಗಲು ಉಪಸ್ಥಿತರಿದ್ದರು.

# ವಿದ್ಯುತ್ ಉಪಕೇಂದ್ರದ ಶಂಕುಸ್ಥಾಪನೆ ಕಾರ್ಯಕ್ರಮ

**ಬೀದರ:** ಕರ್ನಾಟಕ ಸರ್ಕಾರ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ವತಿಯಿಂದ ಮೇ.16 ರಂದು ಮಧ್ಯಾಹ್ನ 12.30 ಗಂಟೆಗೆ 110/11 ಕೆವ್ಹಿ ಗೋರನಳ್ಳಿ ಬಿ (ಚಿಟ್ಟಾ) ವಿದ್ಯುತ್ ಉಪಕೇಂದ್ರದ ಶಂಕುಸ್ಥಾಪನೆ ಕಾರ್ಯಕ್ರಮ ನಡೆಯಲಿದೆ.

ಶಂಕುಸ್ಥಾಪನೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ನೆರವೇರಿಸಲಿದ್ದಾರೆ. ಘನ ಉಪಸ್ಥಿತಿ ಇಂಧನ ಸಚಿವರು ಹಾಗೂ ಚಿಕ್ಕಮಂಗಳೂರು ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಜೆ.ಜಾರ್ಜ್, ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ಅವರುಗಳು ವಹಿಸಲಿದ್ದಾರೆ. ಅಧ್ಯಕ್ಷತೆ ಬೀದರ ದಕ್ಷಿಣ ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಮುಖ್ಯ ಅತಿಥಿಗಳಾಗಿ ಬೀದರ ಲೋಕಸಭಾ ಸದಸ್ಯರಾದ ಸಾಗರ ಈಶ್ವರ ಖಂಡ್ರೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ನಾರಾಯಣರಾವ್, ಕಲಬುರಗಿ ಗುವಿಸಕಂನಿ ಅಧ್ಯಕ್ಷರಾದ ಪ್ರವೀಣ ಕುಮಾರ ಪಾಟೀಲ್ ಹರವಾಳ, ವಿಧಾನ ಪರಿಷತ್ ಶಾಸಕರಾದ ಡಾ.ಚಂದ್ರಶೇಖರ ಬಿ.ಪಾಟೀಲ್, ಶಶೀಲ ಜಿ.ನಮೋಶಿ, ಭೀಮರಾವ ಬಿ.ಪಾಟೀಲ, ಡಾ.ಎಂ.ಜಿ.ಮೂಳೆ, ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕೃಷ್ಣಾ ಮೇಲ್ದಂಡೆ ಯೋಜನೆ (ಕಾಡಾ) ಅಧ್ಯಕ್ಷರಾದ ಬಾಬು ಹೊನ್ನನಾಯ್ಕ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ ಅವರುಗಳು ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಇಂಧನ ಇಲಾಖೆ ಸಕಾರದ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ, ಬೆಂಗಳೂರು ಕವಿಪ್ರನಿನಿ ವ್ಯವಸ್ಥಾಪಕ ನಿರ್ದೇಶಕರಾದ ಡಾ.ರಾಮ್ ಪ್ರಸಾತ್ ಮನೋಹರ್ ವಿ., ಕಲಬುರಗಿ ಗುವಿಸಕಮನಿ ವ್ಯವಸ್ಥಾಪಕ ನಿರ್ದೇಶಕ ಶಶಿಧರ್ ಕುರೇರ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಬೀದರ ಮಹಾನಗರ ಪಾಲಿಕೆಯ ಆಯುಕ್ತ ಮುಕುಲ್ ಜೈನ್, ಬೆಂಗಳೂರು ಕವಿಪ್ರನಿನಿ ನಿರ್ದೇಶಕರು ಯೋಜನೆಗಳು ಗಿರಿಧರ್ ಕುಲಕರ್ಣಿ, ಬೆಂಗಳೂರು ಕವಿಪ್ರನಿನಿ ನಿರ್ದೇಶಕರು ವಿಶ್ವನಾಥ ನಾಯ್ಕ ಅವರುಗಳು ಭಾಗವಹಿಸಲಿದ್ದಾರೆ.

# ಮೋದಿಯವರ ಸಲಹೆಗಳು ಪಾಲಿಸಲು ಮುಖ್ಯಮಂತ್ರಿಗಳಿಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ದೇಶದ ಪ್ರಧಾನಿ ಸನ್ಮಾನ್ಯ ಶ್ರೀ ನರೇಂದ್ರ ಮೋದಿಜೀಯವರು, ದೇಶದ ಆರ್ಥಿಕ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ದೇಶವನ್ನು ಉದ್ದೇಶಿಸಿ ನೀಡಿರುವ ಸಲಹೆಗಳಲ್ಲಿ ಒಂದಾದ ತೈಲ ಉಳಿತಾಯದ ಕುರಿತಾಗಿ ನೀಡಿರುವ ಸಲಹೆಯನ್ನು ರಾಜ್ಯದಲ್ಲಿ ತಮ್ಮನ್ನು ಒಳಗೊಂಡಂತೆ ಎಲ್ಲಾ ಸಚಿವರಿಗೆ, ಅಧಿಕಾರಿಗಳಿಗೆ ಈ ನಿಟ್ಟಿನಲ್ಲಿ ಸೂಕ್ತ ನಿರ್ದೇಶನ ನೀಡಬೇಕೆಂದು ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಪತ್ರ ಬರೆದು ಮನವಿ ಮಾಡಿಕೊಂಡಿದ್ದಾರೆ.

ಇತರೆ ರಾಷ್ಟ್ರಗಳಲ್ಲಿ ನಡೆಯುತ್ತಿರುವ ಯುದ್ಧಗಳ ಹಿನ್ನಲೆಯಲ್ಲಿ ಅನೇಕ ರಾಷ್ಟ್ರಗಳು ಈಗಾಗಲೆ ಆರ್ಥಿಕವಾಗಿ ಕಂಗೆಟ್ಟಿವೆ, ಆದರೆ ಭಾರತ ದೇಶವು ಆರ್ಥಿಕವಾಗಿ ಸಧೃಡವಾಗಿದೆ, ದೇಶದ ಜನತೆ ಸುರಕ್ಷತೆಯಿಂದ ಮತ್ತು ನೆಮ್ಮದಿಯಿಂದ ಬದುಕುತ್ತಿದ್ದಾರೆ, ಆದರೂ ಸಹ ಮುಂದಾಲೋಚನೆಯಿಂದ, ಕಳೆದ ವಾರ ಪ್ರಧಾನಿಗಳು ದೇಶದ ಜನರಿಗೆ ಕೆಲವೊಂದು ಸಲಹೆಗಳು ನೀಡಿದ್ದಾರೆ ಮತ್ತು ಪಾಲಿಸುವಂತೆ ಕೋರಿದ್ದಾರೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.



ಅದರಂತೆ ಖುದ್ದು ಪ್ರಧಾನಿಗಳು ಅವರ ಬೆಂಗಾವಲು ವಾಹನಗಳು ಕಡಿಮೆ ಮಾಡಿ ಎಲ್ಲರಿಗೂ ಮಾದರಿಯಾಗಿದ್ದಾರೆ, ಪ್ರಧಾನಿಯವರ ಸಲಹೆಯಂತೆ ಈಗಾಗಲೆ ಬಿಜೆಪಿ ಪಕ್ಷ ಆಡಳಿತದಲ್ಲಿರುವ ರಾಜ್ಯಗಳಲ್ಲಿ ಇಂಧನ ಉಳಿತಾಯದ ಸಂಕಲ್ಪ ಮಾಡಿ, ಮುಖ್ಯಮಂತ್ರಿ ಮತ್ತು ಸಚಿವರ ಬೆಂಗಾವಲು ವಾಹನಗಳ ಕಡಿತ, ಅನಗತ್ಯ ಸರ್ಕಾರಿ ವಾಹನಗಳ ಸಂಚಾರ ನಿಷೇಧ, ಕಡಿಮೆ ಬಳಕೆ ಮತ್ತು ಸಾರ್ವಜನಿಕ ಸಾರಿಗೆ ಬಳಕೆಗೆ ಒತ್ತು ನೀಡಲು ನಿರ್ಧರಿಸಿದ್ದಾರೆ.

ಮಾಜಿ ಪ್ರಧಾನಿಗಳಾದ ಜವಹಾರಲಾಲ್ ನೇಹರು, ಲಾಲ್ ಬಹಾದ್ದೂರ ಶಾಸ್ತ್ರಿ, ಶ್ರೀಮತಿ ಇಂದಿರಾಗಾಂಧಿ ಮುಂತಾದ ಪ್ರಧಾನಮಂತ್ರಿಗಳು ದೇಶದ ಜನತೆ ಅನೇಕ ಸಂದರ್ಭಗಳಲ್ಲಿ ಇಂತಹ ಮನವಿ ಮಾಡಿಕೊಂಡಿರುವ ಹಲವಾರು ನಿದರ್ಶನಗಳಿವೆ.

ಸದ್ಯ ಅಮೇರಿಕಾ, ಇಸ್ರೇಲ್ ಮತ್ತು ಇರಾನ್ ರಾಷ್ಟ್ರಗಳ ಮಧ್ಯೆಯುದ್ಧ ನಡೆಯುತ್ತಿವೆ, ಮುಂದಿನ ದಿನಗಳಲ್ಲಿ ಉಳಿದ ದೇಶಗಳಲ್ಲಿ ತೈಲ ಸಮಸ್ಯೆ ಉಂಟಾಗಬಹುದು ಮತ್ತು ವಿದೇಶದಿಂದ ಅಮದಾಗುವ ವಸ್ತುಗಳ ಬೆಲೆ ಹೆಚ್ಚಳವಾಗಬಹುದು ಎನ್ನುವ ನಿಟ್ಟಿನಲ್ಲಿ ದೇಶದ ಜನರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಪ್ರಧಾನಿಗಳು ಸಲಹೆಗಳು ನೀಡಿದ್ದಾರೆ.

ಬೀದರ ಜಿಲ್ಲೆಯ ಉಸ್ತುವಾರಿ ಮಂತ್ರಿಯವರು ಕೂಡ ತನ್ನ ಹಿಂದೆ ಮುಂದೆ ಅನಗತ್ಯ ಬೆಂಗಾವಲು ವಾಹನಗಳು ಇಟ್ಟುಕೊಂಡು ಓಡಾಡುತ್ತಿದ್ದಾರೆ, ಅಷ್ಟೇ ಅಲ್ಲದೆ ತಮ್ಮ ಶೋಕಿಗಾಗಿ ಕಡೆಗಳಲ್ಲಿ ಜಿಲ್ಲಾಧಿಕಾರಿಗಳನ್ನು ಸೇರಿದಂತೆ ಎಲ್ಲಾ ಅಧಿಕಾರಿಗಳಿಗೆ ಕರೆದುಕೊಂಡು ಹೋಗುತ್ತಿದ್ದಾರೆ, ಇಂತಹ ಬೇಜವಬ್ದಾರಿತನ ಬೀದರ ಜಿಲ್ಲೆಯಲ್ಲಿ ಅಷ್ಟೆ ಅಲ್ಲಾ, ರಾಜ್ಯದೇಲ್ಲೆಡೆ ನಡೆಯುತ್ತಿದೆ, ಇದು ಕೂಡ ಅನಗತ್ಯ ತೈಲ ಬಳಕೆಗೆ ಕಾರಣವಾಗಲಿದೆ ಎಂದು ಪತ್ರದಲ್ಲಿ ಖೂಬಾ ಉಲ್ಲೇಖಿಸಿದ್ದಾರೆ.

ಇಂದು ರಾಜ್ಯದ ಘನತೆವೆತ್ತ ರಾಜ್ಯಪಾಲರಾದ ಸನ್ಮಾನ್ಯಶ್ರೀ ಥಾವರಚಂದ್ ಗೇಹ್ಲೋಟ್‌ಜೀಯವರು ಸಹ ಅವರ ಬೆಂಗಾವಲು ವಾಹನಗಳು ಅರ್ಧದಷ್ಟು ಕಡಿಮೆ ಮಾಡಿಕೊಂಡಿದ್ದಾರೆ, ಅದರಂತೆ ತಾವುಗಳು ಸಹ ಈ ರಾಜ್ಯದ ಮುಖ್ಯಮಂತ್ರಿಯಾಗಿ ಪ್ರಧಾನಿಗಳು ನೀಡಿರುವ ಸಲಹೆಯನ್ನು ಗೌರವಿಸುವುದರೊಂದಿಗೆ ತಮ್ಮ ಬೆಂಗಾವಲು ವಾಹನಗಳನ್ನು ಕಡಿತಗೊಳಿಸಬೇಕು ಜೊತೆಗೆ ತಮ್ಮ ಎಲ್ಲಾ ಸಚಿವರ, ಅಧಿಕಾರಿಗಳ ಬೆಂಗಾವಲು ವಾಹನಗಳು ಆದಷ್ಟೂ ಜಾಸ್ತಿ ಕಡಿತಗೊಳಿಸಬೇಕು, ಜೊತೆಗೆ ಎಲ್ಲರೂ ಸಾರ್ವಜನಿಕ ಸಾರಿಗೆ ಬಳಸುವಂತೆ ನಿರ್ದೇಶನ ನೀಡಬೆಕೆಂದು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಮುಖ್ಯಮಂತ್ರಿ ಸಿದ್ದರಾಮಯ್ಯರಲ್ಲಿ ವಿನಂತಿಸಿಕೊಂಡಿದ್ದಾರೆ.

# ಮಲ್ಲಮ್ಮ, ಅಕ್ಕಮಹಾದೇವಿ ಜಯಂತಿ ಆಚರಣೆ



• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ತಾಲ್ಲೂಕಿನ ಹಳ್ಳೂರ ಗ್ರಾಮದಲ್ಲಿ ಶುಕ್ರವಾರ ಹೇಮರಡ್ಡಿ ಮಲ್ಲಮ್ಮ ಹಾಗೂ ಅಕ್ಕಮಹಾದೇವಿ ಜಯಂತಿಯನ್ನು ಶೃದ್ಧಾ ಭಕ್ತಿಯಿಂದ ಆಚರಿಸಲಾಯಿತು.

ಬೆಳಿಗ್ಗೆ ಇಬ್ಬರೂ ಶರಣೆಯರ ಮೂರ್ತಿಗೆ ಅಭಿಷೇಕ, ವಿಶೇಷ ಪೂಜೆ ನಡೆಯಿತು. ನಂತರ ತೊಟ್ಟಿಲೋತ್ಸವ ಹಾಗೂ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗಿತು. ಮಧ್ಯಾಹ್ನ ಅನ್ನ ಸಂತರ್ಪಣೆ ನೆರವೇರಿದ ನಂತರ ಹೇಮರಡ್ಡಿ ಮಲ್ಲಮ್ಮ ಭಾವಚಿತ್ರದ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ನಡೆಯಿತು. ಹಿರಿಯರಾದ ಅನ್ನಪೂರ್ಣ ದೊಡ್ಡನಗೌಡರ, ಪಾರ್ವತಮ್ಮ ಅಮರಪ್ಪಗೌಡರ ಸೇರಿದಂತೆ ನೂರಾರು ಮಹಿಳೆಯರು, ಹಿರಿಯರು, ಯುವಕರು, ಮಕ್ಕಳು ಪಾಲ್ಗೊಂಡಿದ್ದರು.

# ಕಳಪೆ ಬಿತ್ತನೆ ಬೀಜ ವಿತರಿಸಿದರೆ ಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಜಿಲ್ಲೆಯ ರೈತರಿಗೆ ವಿತರಿಸಲಾಗುವ ಬಿತ್ತನೆ ಬೀಜಗಳ ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳಬಾರದು. ಕೇವಲ ಉತ್ತಮ ಮೊಳಕೆ ಬರುವ ಗುಣಮಟ್ಟದ ಬೀಜಗಳನ್ನು ಮಾತ್ರ ವಿತರಿಸಬೇಕು ಎಂದು ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷರಾದ ಸಿದ್ರಾಮಯ್ಯ ಸ್ವಾಮಿ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಅವರು ಗುರುವಾರ ಬೀದರ ಜಂಟಿ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಕರ್ನಾಟಕ ಪ್ರದೇಶ ಕೃಷಿ ಸಮಾಜ ಜಿಲ್ಲಾ ಘಟಕ ಬೀದರ ಜಿಲ್ಲೆಯ ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರೈತ ಸಂಪರ್ಕ ಕೇಂದ್ರಗಳಿಗೆ ಬರುವ ಬಿತ್ತನೆ ಬೀಜಗಳನ್ನು ಮೊದಲಿಗೆ ಸ್ಯಾಂಪಲ್ ಡ್ರಾ ಮಾಡಿ ಪರೀಕ್ಷಿಸಬೇಕು. ಉತ್ತಮವಾಗಿ ಮೊಳಕೆ ಬರುವ ಬೀಜಗಳನ್ನು ಮಾತ್ರ ರೈತರಿಗೆ ನೀಡಬೇಕು. ಗುಣಮಟ್ಟವಿಲ್ಲದ ಅಥವಾ ಕಳಪೆ ಎಂದು ಕಂಡುಬರುವ ಬಿತ್ತನೆ ಬೀಜಗಳನ್ನು ತಕ್ಷಣವೇ ವಾಪಸ ಕಳುಹಿಸಬೇಕು. ಬೀಜ ವಿತರಣೆ ಸಮಯದಲ್ಲಿ ರೈತರಿಗೆ ಯಾವದೇ ರೀತಿಯ ತೊಂದರೆ ಅಥವಾ ಗೊಂದಲ ಉಂಟಾಗದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದು ತಿಳಿಸಿದರು.

ಬೀದರ ಜಂಟಿ ಕೃಷಿ ನಿರ್ದೇಶಕರು ಮಾತನಾಡಿ, ಜಿಲ್ಲೆಯಲ್ಲಿ ಬಿತ್ತನೆ ಬೀಜ ಮತ್ತು ರಸಗೊಬ್ಬರ ಸಂಗ್ರಹ ಪ್ರಕ್ರಿಯೆ ಶುರುವಾಗಿದೆ. ರೈತರು ಅವಸರ ಮಾಡಿ ಬಿತ್ತನೆ ಮಾಡಬಾರದು. ಕನಿಷ್ಠ 60 ರಿಂದ 70 ಮಿ.ಮೀ ಮಳೆಯಾಗಿ ಮಣ್ಣಿನಲ್ಲಿ ತೇವಾಂಶ ಹದವಾಗಿದ್ದಾಗ ಮಾತ್ರ ಬಿತ್ತನೆ ಮಾಡಬೇಕು. ಅಧಿಕೃತ ರೈತ ಸಂಪರ್ಕ ಕೇಂದ್ರಗಳಿಂದಲೇ ಬೀಜ ಮತ್ತು ರಸಗೊಬ್ಬರ ಖರೀದಿಸಿ ರಸೀದಿ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಸಾಕಷ್ಟು ರಸಗೊಬ್ಬರ ಲಭ್ಯವಿದೆ. ರೈತರು ಒಂದೇ ಬಾರಿ ದೊಡ್ಡ ಪ್ರಮಾಣದಲ್ಲಿ ಗೊಬ್ಬರ ಖರೀದಿಸಿ ಮನೆಯಲ್ಲಿ ಸಂಗ್ರಹಿಸಿಡುವ ಅಗತ್ಯವಿಲ್ಲ. ಎಫ್.ಐ.ಡಿ ಮಾಡಿದ ರೈತರು ಮಾತ್ರ ಯುರಿಯಾ ಗೊಬ್ಬರ ಖರೀದಿ ಮಾಡಬಹುದು. ರೈತರು ಮಾತ್ರ ಬಿತ್ತನೆಯ ಹಂತಕ್ಕೆ ಅನುಗುಣವಾಗಿ ಗೊಬ್ಬರ ಪಡೆಯಬೇಕು. ಡಿ.ಎ.ಪಿ ಗೊಬ್ಬರದ

# ಡಿ.ಕೆ. ಶಿವಕುಮಾರ್ ಜನ್ಮದಿನ: ಸಮಾಜಮುಖಿ ಕಾರ್ಯಕ್ರಮಗಳು

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

D.K.Shivakumar ಅವರ ಜನ್ಮದಿನದ ಅಂಗವಾಗಿ ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ಶುಕ್ರವಾರ ನಗರದಲ್ಲಿ ವಿವಿಧ ಧಾರ್ಮಿಕ ಹಾಗೂ ಸಮಾಜಮುಖಿ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ಆಯೋಜಿಸಲಾಯಿತು.

ನಗರದ ಶ್ರೀ ಕನಕ ದುರ್ಗಮ್ಮ ದೇವಸ್ಥಾನದಲ್ಲಿ ವಿಶೇಷ ಪೂಜಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಮಹಾನಗರ ಪಾಲಿಕೆಯ ಮಹಾಪೌರರಾದ ಕ. ಉಚಿಜಜಠಿಚಿ ಅವರು ಪೂಜೆ ನೆರವೇರಿಸಿ ರಾಜ್ಯದ ಅಭಿವೃದ್ಧಿ ಹಾಗೂ ಜನರ ಸುಖಶಾಂತಿಗಾಗಿ ಪ್ರಾರ್ಥಿಸಿದರು.

ನಂತರ ದೇವಸ್ಥಾನದ ಆವರಣದಲ್ಲಿ ಬಡವರು ಹಾಗೂ ಸಾರ್ವಜನಿಕ ಭಕ್ತಾದಿಗಳಿಗೆ ಅನ್ನ ಪ್ರಸಾದ ಮತ್ತು ಉಪಹಾರ ವಿತರಣೆ ಕಾರ್ಯಕ್ರಮ ನಡೆಯಿತು. ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ




ಎ. ಖ. ಂಟಿರಿಟಿಚಿಥಿಚಿಟಣ ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ನೂರಾರು ಜನರು ಭಾಗವಹಿಸಿ ಪ್ರಸಾದ ಸ್ವೀಕರಿಸಿದರು.

ಇದಾದ ಬಳಿಕ ಬಳ್ಳಾರಿ ಜಿಲ್ಲಾ ಯೂತ್ ಕಾಂಗ್ರೆಸ್ ಸಮಿತಿಯ ವತಿಯಿಂದ ಕೇಕ್ ಕತ್ತರಿಸುವ ಮೂಲಕ ಡಿ.ಕೆ. ಶಿವಕುಮಾರ್ ಅವರ ಜನ್ಮದಿನವನ್ನು ಸಂಭ್ರಮದಿಂದ ಆಚರಿಸಲಾಯಿತು. ಯುವ ಕಾಂಗ್ರೆಸ್ ಕಾರ್ಯಕರ್ತರು ಪಕ್ಷದ ಪರ ಘೋಷಣೆಗಳನ್ನು ಕೂಗಿ ನಾಯಕನಿಗೆ ಶುಭಾಶಯಗಳನ್ನು ತಿಳಿಸಿದರು.

ಅದೇ ವೇಳೆ ಕೆಪಿಸಿಸಿ ಹಾಗೂ ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಸಮಿತಿಯ ವತಿಯಿಂದ ಬಡ ಕುಟುಂಬಗಳಿಗೆ ಅಗತ್ಯ ವಸ್ತುಗಳ ಕಿಟ್‌ಗಳನ್ನು ವಿತರಿಸಲಾಯಿತು. ಸಮಾಜಸೇವೆಯ ಮೂಲಕ ಜನ್ಮದಿನವನ್ನು ಆಚರಿಸಿರುವುದು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಯಿತು.

ಈ ಸಂದರ್ಭದಲ್ಲಿ ಸಂಸದರಾದ ಇ. ತುಕಾರಾಂ, ವೆಂಕಟೇಶ್ ಪ್ರಸಾದ್, ಬುಡ ಅಧ್ಯಕ್ಷ ಆಂಜನೇಯಲು, ಅಲ್ಲಮ ಪ್ರಶಾಂತ್, ಮನಯ್ಯ, ಹುಮ್ಯೆನ್ ಖಾನ್, ಲಿಡ್ಕರ್ ಅಧ್ಯಕ್ಷ ಮುಂಡರಗಿ ನಾಗರಾಜ್, ತಿಮ್ಮನಗೌಡ,ಕುಬೇರ, ಗ್ಯಾರಂಟಿ ಅಧ್ಯಕ್ಷ ಚಿದಾನಂದಪ್ಪ, ಜಿಲ್ಲಾ ಯೂತ್ ಕಾಂಗ್ರೆಸ್ ಅಧ್ಯಕ್ಷ ಶ್ರೀಕಾಂತ್, ರೇಡಿಯೋ ಪಾರ್ಕ್ ನಗು, ಒ. ಪಾಟೀಲ್, ಬೋಯಪಟ್ಟಿ ವಿಷ್ಣುವರ್ಧನ್, ಮಾಜಿ ಉಪ ಮೇಯರ್ ಜಾನಕೀ, ಗೌಸಿಯ ಬೇಗಮ್ ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಸಾರ್ವಜನಿಕರ ಅಹವಾಲುಗಳ ತ್ವರಿತ ಇತ್ಯರ್ಥಕ್ಕೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ನಾಗರಿಕರಿಂದ ಬಂದಂತಹ ದೂರುಗಳಿಗೆ ತ್ವರಿತವಾಗಿ ಸ್ಪಂದಿಸಿ, ಸಮಸ್ಯೆಗಳನ್ನು ಬಗೆಹರಿಸಲು ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿನ ನಾಗರಿಕರ ಸಮಸ್ಯೆಗಳನ್ನು ಆಲಿಸಿ, ತ್ವರಿತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಇಂದು ಬೆಳಿಗ್ಗೆ 7 ಗಂಟೆಯಿಂದ ಅಮೃತಹಳ್ಳಿ ಮುಖ್ಯ ರಸ್ತೆಯಲ್ಲಿರುವ ನಗರ ಪಾಲಿಕೆಯ ಆಯುಕ್ತರ ಕಚೇರಿಯ ಸಭಾಂಗಣದಲ್ಲಿ ನಡೆದ "ಫೋನ್–ಇನ್ ಕಾರ್ಯಕ್ರಮ" ದಲ್ಲಿ ನಾಗರಿಕ–ರಿಂದ ನೇರವಾಗಿ ಅಹವಾಲುಗಳನ್ನು ಸ್ವೀಕರಿಸಿದ ವೇಳೆ ವಿವಿಧ ವಾರ್ಡ್‌ಗಳಿಂದ ಮುಖ್ಯವಾಗಿ ರಸ್ತೆ ನಿರ್ವಹಣೆ, ಘನತ್ಯಾಜ್ಯ ಸಮಸ್ಯೆ ಸೇರಿದಂತೆ ಇನ್ನಿತರೆ ದೂರುಗಳನ್ನು ಖುದ್ದಾಗಿ ಆಲಿಸಿದ ಆಯುಕ್ತರು, ಅವುಗಳ ತ್ವರಿತ ಪರಿಹಾರಕ್ಕಾಗಿ ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಇಂದು ನಡೆದ ಫೋನ್–ಇನ್ ಕಾರ್ಯಕ್ರಮದಲ್ಲಿ ಒಟ್ಟು 54 ಕರೆಗಳು ಸ್ವೀಕರಿಸಲ್ಪಟ್ಟು 64 ಅಹವಾಲುಗಳು ದಾಖಲಾಗಿವೆ. ರಸ್ತೆ ನಿರ್ವಹಣೆ ಹಾಗೂ ಘನತ್ಯಾಜ್ಯ ಸಂಬಂಧಿತ ಸಮಸ್ಯೆಗಳ ಕುರಿತು ಹೆಚ್ಚಿನ ದೂರುಗಳು ಬಂದಿದ್ದು, ಇವುಗಳೊಂದಿಗೆ ಅರಣ್ಯ, ಇ–ಖಾತಾ ಸೇವೆಗಳು, ವಿದ್ಯುತ್, ಉದ್ಯಾನಗಳು ಹಾಗೂ ಇತ–ರೆ ವಿಭಾಗಗಳಿಗೆ ಸಂಬಂಧಿಸಿದ ಅಹವಾಲುಗಳೂ ದಾಖಲಾಗಿವೆ. ಎಲ್ಲಾ ಅಹವಾಲುಗಳನ್ನು ಪರಿಶೀಲಿಸಿ ತಕ್ಷಣ ಸ್ಪಂದಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಯಿತು.

ಬೆಂಗಳೂರು ಉತ್ತರ ನಗರ ಪಾಲಿಕೆಯಲ್ಲಿ ಸೆಪ್ಟೆಂಬರ್ 26 ರಿಂದ ಪ್ರಾರಂಭಿಸಿರುವ ಫೋನ್–ಇನ್ ಕಾರ್ಯಕ್ರಮದಲ್ಲಿ ಕಳೆದ 33 ವಾರಗಳಲ್ಲಿ ಒಟ್ಟು 1484 ಕರೆಗಳು ಸ್ವೀಕರಿಸಲ್ಪಟ್ಟು 1905 ಅಹವಾಲುಗಳು ದಾಖಲಾಗಿದ್ದು, ಅವುಗಳಲ್ಲಿ 1389 ಅಹವಾಲುಗಳಿಗೆ ಸೂಕ್ತ ಕ್ರಮ ಕೈಗೊಂಡು ಇತ್ಯರ್ಥಪಡಿಸಲಾಗಿದೆ. ಇನ್ನು 360 ಅಹವಾಲುಗಳು ಬಾಕಿ ಇದ್ದು, ಅವುಗಳನ್ನು ಶೀಘ್ರವಾಗಿ ಬಗೆಹರಿಸಲು ನಿರ್ದೇಶನ ನೀಡಲಾಗಿದೆ. ಕೆಲವು ಅಹವಾಲುಗಳು ದೀರ್ಘಾವಧಿ ಪರಿಹಾರಕ್ಕೆ ಸಂಬಂಧಿಸಿದವಾಗಿದ್ದು, ಅವುಗಳಿಗೂ ಕ್ರಮ ಕೈಗೊಳ್ಳಲಾಗುತ್ತಿದೆ.

ನಾಗರಿಕರ ಕುಂದುಕೊರತೆಗಳನ್ನು ಖುದ್ದಾಗಿ ಆಲಿಸಿ, ಕೂಡಲೇ ಪರಿಹಾರ ನೀಡುವ ನಿಟ್ಟಿನಲ್ಲಿ ಪ್ರತಿ ಶುಕ್ರವಾರವೂ ಫೋನ್–ಇನ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಇದಕ್ಕೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ದೊರಕುತ್ತಿದೆ. ಈ ಕಾರ್ಯಕ್ರಮವನ್ನು ನಿರಂತರವಾಗಿ ಮುಂದುವರೆಸಿ ನಾಗರಿಕರ ಸಮಸ್ಯೆಗಳಿಗೆ ತ್ವರಿತ ಸ್ಪಂದಿಸುವ ಕೆಲಸ ಮಾಡಲಾಗುವುದು ಎಂದು ಆಯುಕ್ತರು ತಿಳಿಸಿದ್ದಾರೆ.

ಈ ವೇಳೆ ಶ್ರೀ ಸೋಮಶೇಖರ್ ಉಪ ಆಯುಕ್ತರು(ಆಡಳಿತ), ಮುಖ್ಯ ಅಭಿಯಂತರರಾದ ರಾಘವೇಂದ್ರ ಪ್ರಸಾದ್, ಅಧೀಕ್ಷಕ ಅಭಿಯಂತರರು, ಕಾರ್ಯಪಾಲಕ ಅಭಿಯಂತರರು ಸೇರಿದಂತೆ ಇತರೆ ಅಧಿಕಾರಿಗಳು ಹಾಜರಿದ್ದರು.

# ಕೇಂದ್ರದಿಂದ ಪೆಟ್ರೋಲ್ ಡೀಸೆಲ್ ಬೆಲೆ ಏರಿಕೆ: ಸಿಎಂ ಖಂಡನೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕೇಂದ್ರ ಸರ್ಕಾರ ಪೆಟ್ರೋಲ್ ಡೀಸೆಲ್ ಬೆಲೆ ಏರಿಸಿರುವುದನ್ನು ರಾಜ್ಯ ಸರ್ಕಾರ ಖಂಡಿಸಿ, ಬೆಲೆ ಏರಿಕೆಯನ್ನು ಹಿಂಪಡೆಯಲು ಒತ್ತಾಯಿಸುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಬೆಂಗಳೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

**ಬೆಲೆಏರಿಕೆ ನಿರ್ಣಯ ಹಿಂಪಡೆಯಲು ಕೇಂದ್ರಕ್ಕೆ ಒತ್ತಾಯ:** ವಿವಿಧ ರಾಜ್ಯಗಳ ವಿಧಾನಸಭಾ ಚುನಾವಣೆಗಳ ನಂತರ ಕೇಂದ್ರ ಸರ್ಕಾರ ಪೆಟ್ರೋಲ್ ಡೀಸೆಲ್ ದರ ಏರಿಸುವ ನಿರೀಕ್ಷೆ ಇತ್ತು. ನಿರೀಕ್ಷೆಯಂತೆಯೇ ಹೆಚ್ಚಿಸಿದ್ದಾರೆ. ಆದರೆ ಕರ್ನಾಟಕದಲ್ಲಿ ಇತರೆ ರಾಜ್ಯಗಳಿಗಿಂತ ಗಣನೀಯವಾಗಿ ಕಡಿಮೆಯಿರುವ ಪೆಟ್ರೋಲ್ ಬೆಲೆಯನ್ನು ಹೆಚ್ಚಿಸಿದ್ದರ ಬಗ್ಗೆ ಬಿಜೆಪಿಯವರು ಟೀಕೆ ಮಾಡಿದ್ದರು. ನರೇಂದ್ರ ಮೋದಿಯವರು ದೇಶದ ಪ್ರಧಾನಿಯಾದ ನಂತರ ಹಲವು ಬಾರಿ ಪೆಟ್ರೋಲ್ ಡೀಸೆಲ್ ದರಗಳನ್ನು ಹೆಚ್ಚಿಸಿದ್ದಾರೆ. ಈ ಬೆಲೆಏರಿಕೆ ಜನಸಾಮಾನ್ಯರ ಮೇಲೆ ವ್ಯತಿರಿಕ್ತ ಪರಿಣಾಮ ಬೀರಲಿದ್ದು, ವಿಶೇಷವಾಗಿ ಕಾರ್ಮಿಕರು, ರೈತರು, ಬಡವರ ಮೇಲೆ ಹೆಚ್ಚಿನ ಪರಿಣಾಮ ಬೀರಲಿದೆ. ಕೇಂದ್ರ ಸರ್ಕಾರದ ಈ ಬೆಲೆಏರಿಕೆಯ ಕ್ರಮವನ್ನು ರಾಜ್ಯ ಸರ್ಕಾರ ಖಂಡಿಸುವುದಲ್ಲದೇ, ಈ ನಿರ್ಣಯವನ್ನು ಹಿಂದಕ್ಕೆ ಪಡೆಯಬೇಕೆಂದು ಒತ್ತಾಯಿಸುತ್ತೇವೆ ಎಂದರು.

**ಬೆಲೆಏರಿಕೆಯಿಂದ ದಿನನಿತ್ಯದ ವಸ್ತುಗಳೂ ತುಟ್ಟಿ:** ಪ್ರಧಾನಿ ಮೋದಿಯವರ ಆಡಳಿತ ಪ್ರಾರಂಭವಾಗುವ ಮುಂಚೆ 413 ರೂ.ಗಳಿಂದ ಗೃಹಬಳಕೆಯ ಎಲ್ ಪಿ ಜಿ ದರ ಈಗ 1000 ರೂಗಳನ್ನು ದಾಟಿದೆ. ಈ ಬೆಲೆಏರಿಕೆ ದಿನನಿತ್ಯದ ಬೆಲೆ ಹೆಚ್ಚಳಕ್ಕೂ ಕಾರಣವಾಗಲಿದೆ. ಎಲ್ ಪಿ ಜಿ ಪೂರೈಕೆ ವ್ಯತ್ಯಯವಾಗಿರುವ ನಡುವೆಯೇ ಬೆಲೆ ಏರಿ–ಕೆಯು ಜನಜೀವನವನ್ನು ಅಸ್ತವ್ಯಸ್ತಗೊಳಿಸಲಿದೆ ಎಂದರು.

**ನೀಟ್ ಪರೀಕ್ಷೆ ನಿರ್ವಹಣೆಯಲ್ಲಿ ಕೇಂದ್ರದ ವೈಫಲ್ಯ:** ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕಾಗಿ ನೀಟ್ ಯುಜಿ ಮರು ಪರೀಕ್ಷೆಗೆ ದಿನಾಂಕ ನಿಗದಿಪಡಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಕೇಂದ್ರ ಸರ್ಕಾರವು ನೀಟ್ ಯುಜಿ ಪರೀಕ್ಷೆಯನ್ನು ಸಮರ್ಪಕವಾಗಿ ನಡೆಸಲು ವಿಫಲರಾಗಿದ್ದು, ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯಕ್ಕೆ ತೊಂದರೆಯಾಗಿದೆ ಎಂದರು.

**ಎಸ್ ಐ ಆರ್ ಪ್ರಕ್ರಿಯೆ:** ಕರ್ನಾಟಕದಲ್ಲಿ ಎಸ್ ಐ ಆರ್ ಪ್ರಕ್ರಿಯೆ ಪ್ರಾರಂಭವಾಗಲಿರುವ ಬಗ್ಗೆ ಮಾತನಾಡಿ, ರಾಜ್ಯದಲ್ಲಿ ಚುನಾವಣಾ ಆಯೋಗದಿಂದ ಎಸ್ ಐ ಆರ್ ಪ್ರಕ್ರಿಯೆಯು ಪ್ರಾರಂಭವಾಗಿದ್ದು, ಇದಕ್ಕೆ ಬೇಕಾದ ಸಿದ್ದತೆಯನ್ನು ಸರ್ಕಾರ ಮಾಡಿಕೊಳ್ಳುತ್ತಿದೆ ಎಂದರು.



ಹುಣಸೂರು :ನಗರದ ಬಿಎಂ ಬೈಪಾಸ್ ರಸ್ತೆಯಲ್ಲಿ ನೂತನವಾಗಿ ಅಪೋಲಾ ಆಸ್ಪತ್ರೆಯನ್ನು ಆರೋಗ್ಯ ಸಚಿವರು ದಿನೇಶ್ ಗುಂಡೂರಾವ್ ಟೇಪ್ ಕತ್ತರಿಸುವ ಮೂಲಕ ಉದ್ಘಾಟಿಸಿದರು ಈ ಸಂದರ್ಭದಲ್ಲಿ ಮಾಜಿ ಶಾಸಕ ಸ್ನೇಹಜೀವಿ ಎಚ್ ಪಿ ಮಂಜುನಾಥ್ ರಾಜ್ಯ ಗ್ಯಾರಂಟಿ ಯೋಜನೆಯ ಉಪಾಧ್ಯಕ್ಷರಾದ ಡಾ. ಪುಷ್ಪಾ ಅಮರ್ ನಾಥ್ ನಗರ ಯೋಜನೆ ಪ್ರಾಧಿಕಾರದ ಅಧ್ಯಕ್ಷರಾದ ಅಮರನಾಥ್ ಆಸ್ಪತ್ರೆ ಸಂಸ್ಥೆಯ ಮುಖ್ಯಸ್ಥರಾದ ಭರತ್ ರೆಡ್ಡಿ ಡಾ ಶ್ರೀನಾಥ್ ಪ್ರೇಮ್ ಕುಮಾರ್ ಹಾಗೂ ಅಶೋಕ್ ಇನ್ನಿತರ ಹಾಜರಿದ್ದರು



ಯಾದಗಿರಿ :ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಾಗಿ ಮುಂಬಡ್ತಿ ಹೊಂದಿದ ವೀರಪ್ಪ ಕನ್ನಳ್ಳಿ ರವರಿಗೆ ಸಿಬ್ಬಂದಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಹಾಗೂ ತಾಲೂಕಿನ ಎಲ್ಲಾ ಶಾಲೆಯ ಮುಖ್ಯ ಗುರುಗಳು, ಸಹ ಶಿಕ್ಷಕರು, ಕಚೇರಿಯ ಸಿಬ್ಬಂದಿ ವರ್ಗದವರು, ವಾಹನ ಚಾಲಕರು, ಕಚೇರಿಯ ಸಹಾಯಕಿಯವರು ಸೇರಿ ಗೌರವ ಸನ್ಮಾನ ಮಾಡಿ ಹರ್ಷ ವ್ಯಕ್ತಪಡಿಸಿದರು.

## ಡಿ.ಕೆ. ಶಿವಕುಮಾರ್ ಜನ್ಮದಿನ ಅಂಗವಾಗಿ ಬಳ್ಳಾರಿಯ ಇಂದಿರಾ ಕ್ಯಾಂಟೀನ್‌ಗಳಲ್ಲಿ ಅನ್ನದಾನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಡಿ.ಕೆ. ಶಿವಕುಮಾರ್ ಅವರ 64ನೇ ಜನ್ಮದಿನದ ಅಂಗವಾಗಿ ಬಳ್ಳಾರಿಯ ಎಲ್ಲಾ ಇಂದಿರಾ ಕ್ಯಾಂಟೀನ್‌ಗಳಲ್ಲಿ ಬಡವರು ಹಾಗೂ ಸಾರ್ವಜನಿಕರಿಗಾಗಿ ಉಚಿತ ಅನ್ನದಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.ಕರ್ನಾಟಕ ಪ್ರದೇಶ ಯುವಕಾಂಗ್ರೆಸ್ ರಾಜ್ಯಕಾರ್ಯದರ್ಶಿಯಾದ ಚಿನ್ನಿ ಕೃಷ್ಣ ಅವರ ನೇತೃತ್ವದಲ್ಲಿ ನಡೆದ ಈ ಸಮಾಜಮುಖಿ ಕಾರ್ಯಕ್ರಮಕ್ಕೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಯಿತು.ಬೆಳಗ್ಗೆ,ಮಧ್ಯಾಹ್ನ ಹಾಗೂ ರಾತ್ರಿ ವೇಳೆ ಬಡವರು, ಕಾರ್ಮಿಕರು ಮತ್ತು ಸಾರ್ವಜನಿಕರಿಗೆ ಉಚಿತ ಊಟದ ವ್ಯವಸ್ಥೆ ಮಾಡಲಾಗಿತ್ತು.ಬೆಳಿಗ್ಗೆ 7.30ರಿಂದ 10.30ರವರೆಗೆ ಉಪಹಾರ, ಮಧ್ಯಾಹ್ನ12.30ರಿಂದ 3 ಗಂಟೆಯವರೆಗೆ ಊಟ ಹಾಗೂ ರಾತ್ರಿ 7.30ರಿಂದ 10 ಗಂಟೆಯವರೆಗೆ ಭೋಜನ ವಿತರಣೆ



ನಡೆಯಿತು. ನಗರದ ವಿವಿಧ ಇಂದಿರಾ ಕ್ಯಾಂಟೀನ್‌ಗಳಲ್ಲಿ ನೂರಾರು ಜನರು ಭಾಗವಹಿಸಿ ಅನ್ನದಾನದ ಸೌಲಭ್ಯ ಪಡೆದು–ಕೊಂಡರು.ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಯುವ ಕಾಂಗ್ರೆಸ್ ಮುಖಂಡರು ಕೇಕ್ ಕತ್ತರಿಸುವ ಮೂಲಕ ಆ. ಏ. ಶಿವಕುಮಾರ್ ಅವರ ಜನ್ಮದಿನವನ್ನು ಸಂಭ್ರಮದಿಂದ ಆಚರಿಸಿದರು. ಪಕ್ಷದ ಪರ ಘೋಷಣೆಗಳನ್ನು ಕೂಗಿ ನಾಯಕನಿಗೆ ಶುಭಾಶಯಗಳನ್ನು ತಿಳಿಸಲಾಯಿತು.ಈ ಸಂದರ್ಭದಲ್ಲಿ ಮಾತನಾಡಿದ ಚಿನ್ನಿ ಕೃಷ್ಣ , "ಡಿ.ಕೆ. ಶಿವಕುಮಾರ್ ಅವರು ಸದಾ ಜನಪರ ಹಾಗೂ ಬಡವರ ಪರ ಕಾಳಜಿ ಹೊಂದಿರುವ ನಾಯಕರು.ಅವರ ಜನ್ಮದಿನವನ್ನು ಕೇವಲ ಆಚರಣೆಗೆ ಸೀಮಿತಗೊಳಿಸದೆ, ಸಮಾಜಮುಖಿ ಸೇವಾ ಕಾರ್ಯಗಳ ಮೂಲಕ ಆಚರಿಸುವ ಉದ್ದೇಶದಿಂದ ಅನ್ನದಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ದೇವರ ಆಶೀರ್ವಾದದಿಂದ ಮುಂದಿನ ದಿನಗಳಲ್ಲಿ ಡಿ.ಕೆ. ಶಿವಕುಮಾರ್ ಅವರು ಈ ರಾಜ್ಯದ ಮುಖ್ಯಮಂತ್ರಿಯಾಗಬೇಕು ಎಂಬುದು ನಮ್ಮೆಲ್ಲರ ಆಶಯವಾಗಿದೆ" ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಯುವ ಕಾಂಗ್ರೆಸ್ ಕಾರ್ಯಕರ್ತರು, ಕಾಂಗ್ರೆಸ್ ಮುಖಂಡರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು. ಬಡವರಿಗೆ ಉಚಿತ ಆಹಾರ ವಿತರಿಸುವ ಮೂಲಕ ಜನಸೇವೆ ಮಾಡಿರುವುದು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಯಿತು.

## ಅಂತರಾಷ್ಟ್ರೀಯ ರಾಷ್ಟ್ರೀಯ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ಟ್ರಡಿಷನಲ್ ಶೊಟೋಕಾನ್ ಅಕಾಡೆಮಿ ಭರ್ಜರಿ ಸಾಧನೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಹರಿದ್ವಾರ, ಉತ್ತರಾಖಂಡದಲ್ಲಿ ನಡೆದ "ಸೆಷನ್–4 ಸೂಪರ್ ಗೋಲ್ಡ್ ಕರಾಟೆ ಲೀಗ್" ಅಂತರಾಷ್ಟ್ರೀಯ ರಾಷ್ಟ್ರೀಯ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ಟ್ರಡಿಷನಲ್ ಶೊಟೋಕಾನ್ ಅಕಾಡೆಮಿ ವಿದ್ಯಾರ್ಥಿಗಳು ಕಾಟಾ ಮತ್ತು ಕುಮಿತೆ ವಿಭಾಗಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿ ಹಲವು ಪದಕಗಳನ್ನು ಗೆದ್ದಿದ್ದಾರೆ.ಮೇ 9 ಮತ್ತು 10ರಂದು ನಡೆದ ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳ ಸಾಧನೆ ಹೀಗಿದೆ:

ತೇಜೇಶ್ – ಕಾಟಾ ದ್ವಿತೀಯ, ಕುಮಿತೆ ಪ್ರಥಮ

ಮಣಿಚರಣ್ – ಕಾಟಾ ಪ್ರಥಮ, ಕುಮಿತೆ ದ್ವಿತೀಯ

ಮಧುಸೂದನ್ ರೆಡ್ಡಿ – ಕಾಟಾ ದ್ವಿತೀಯ, ಕುಮಿತೆ ದ್ವಿತೀಯ

ಮಹೇಂದ್ರಪ್ರಸಾದ್ – ಕಾಟಾ ಪ್ರಥಮ, ಕುಮಿತೆ ಪ್ರಥಮ



ಟಿ.ಎಸ್. ಸಾಯಿ ತೇಜ – ಕಾಟಾ ಪ್ರಥಮ, ಕುಮಿತೆ ದ್ವಿತೀಯ

ಭುವನ್ ತೇಜ್ ಎಚ್ – ಕಾಟಾ ದ್ವಿತೀಯ, ಕುಮಿತೆ ದ್ವಿತೀಯ

ಚಾರಿಕಾ – ಕಾಟಾ ದ್ವಿತೀಯ, ಕುಮಿತೆ ದ್ವಿತೀಯ

ಕೃತಿಕಾ – ಕಾಟಾ ಪ್ರಥಮ, ಕುಮಿತೆ ದ್ವಿತೀಯ

ನಿರ್ಭಾಯಿ ಎಚ್. ನಾಯ್ಡು – ಕಾಟಾ ಪ್ರಥಮ, ಕುಮಿತೆ ಪ್ರಥಮ

ಶಾನ್ವಿ – ಕಾಟಾ ಪ್ರಥಮ, ಕುಮಿತೆ ದ್ವಿತೀಯ

ಅಬಿನಾಶ್ ಪಾಲ್ – ಕಾಟಾ ದ್ವಿತೀಯ, ಕುಮಿತೆ ದ್ವಿತೀಯ

ಹರ್ಷವರ್ಧನ್ – ಕಾಟಾ ದ್ವಿತೀಯ, ಕುಮಿತೆ ತೃತೀಯ

ಸಾಯಿ ಜ್ಯೋತಿ – ಕಾಟಾ ಪ್ರಥಮ, ಕುಮಿತೆ ದ್ವಿತೀಯ

ನಿಖಿಲ್ ಕ್ರಿಶ್ – ಕಾಟಾ ಪ್ರಥಮ, ಕುಮಿತೆ ತೃತೀಯ

ದೇವಾಂಶ್ ಯೆಲ್ಲಾ – ಕಾಟಾ ಪ್ರಥಮ, ಕುಮಿತೆ ಪ್ರಥಮ

ಗೌತಮ್ – ಕಾಟಾ ದ್ವಿತೀಯ, ಕುಮಿತೆ ಪ್ರಥಮ

ತೇಜೇಶ್ ವಿ.ಪಿ – ಕಾಟಾ ದ್ವಿತೀಯ, ಕುಮಿತೆ ತೃತೀಯ

ವಿದ್ಯಾರ್ಥಿಗಳ ಈ ಸಾಧನೆಗೆ ಟ್ರಡಿಷನಲ್ ಶೊಟೋಕಾನ್ ಅಕಾಡೆಮಿಯ ಸಂಸ್ಥಾಪಕ ಅಧ್ಯಕ್ಷರಾದ ಕಟ್ಟೇಸ್ವಾಮಿ ಅಭಿನಂದನೆ ಸಲ್ಲಿಸಿದರು. ತರಬೇತುದಾರರಾದ ಹುಲುಗಣ್ಣ, ಪ್ರಸಾದ್ ಜಡೇಶ್, ಹನುಮಂತ ಹಾಗೂ ತಾಂತ್ರಿಕ ನಿರ್ದೇಶಕರಾದ ಸುಭಾಷ್ ಮುತ್ತೂರ್ ವಿದ್ಯಾರ್ಥಿಗಳಿಗೆ ಶುಭಾಶಯ ಕೋರಿದರು.

## ಎಸ್‌ಎಸ್‌ಎಲ್‌ಸಿಯಲ್ಲಿ ತಾಲೂಕಾ ಮಟ್ಟದ ಟಾಪರ್‌ಗಳಿಗೆ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ನಗರದ ಬಿ ಎಂ ರಸ್ತೆ ನೂತನ ಅಪೋಲಾ ಆಸ್ಪತ್ರೆ ಉದ್ಘಾಟನೆ ಸಮಾರಂಭದಲ್ಲಿ ಸರ್ಕಾರಿ ಹಾಗೂ ಖಾಸಗಿ ಶಾಲೆಯಲ್ಲಿ ಎಸ್ ಎಸ್ ಎಲ್ ಸಿ ಶಾಲಾ ಪರೀಕ್ಷೆಯಲ್ಲಿ . ತಾಲೂಕಿನ ಮಟ್ಟದ ಟಾಪರ್ ವಿದ್ಯಾರ್ಥಿಗಳಿಗೆ ಮಾಜಿ ಶಾಸಕ ಎಚ್ ಪಿ ಮಂಜುನಾಥ್ ತಮ್ಮ ರತ್ನ ಪ್ರೇಮ್ ಕುಮಾರ್ ಹೆಸರಿನಲ್ಲಿ ಕೂಡ ಬಡವರು ಗುರುತಿಸಿ ನಗದು ಪುರಸ್ಕಾರವನ್ನು ಆರೋಗ್ಯ ಸಚಿವರು ದಿನೇಶ್ ಗುಂಡೂರಾವ್ ನೆರೆವರಿಸಿದರು ನಂತರ ಕಾರ್ಯಕ್ರಮದಲ್ಲಿ ಮಾತನಾಡಿ ಮಾಜಿ ಶಾಸಕ ಸ್ನೇಹಜೀವಿ ಎಚ್ ಪಿ ಮಂಜುನಾಥ್ ಅಧಿಕಾರ ಇರಲಿ ಬಿಡಲಿ ಸದಾ ತಾಲೂಕಿನ ಜನತೆಗೆ ಹಾಗೂ ಅಭಿವೃದ್ಧಿಯ ಕಡೆಗೆ ಮುಂದೆ ಸಾಗುತ್ತಾರೆ ಅವರು ಇಂದು ತಾಲೂಕಿನ ಶಾಸಕರಾಗುತ್ತಿದ್ದರೆ ಸಚಿವರು ಆಗುತ್ತಿದ್ದರು ಆದರೆ ಮುಂದಿನ ದಿನಗಳಲ್ಲಿ ತಾಲೂಕಿನ ಜನತೆ ಅವರಿಗೆ ಸಂಪೂರ್ಣವಾಗಿ ಆಶೀರ್ವಾದ ಮಾಡುತ್ತಾರೆ ಅವರಿಗೆ ಈ ತಾಲೂಕಿನ ಜನತೆ ಕೈ



ಹಿಡಿಯುತ್ತಾರೆ ಮುಂದೆ ದಿನಗಳಲ್ಲಿ ಸಂಪೂರ್ಣ ಆಶೀರ್ವಾದ ಮಾಡುತ್ತಾರೆ ಎಚ್ ಪಿ ಮಂಜುನಾಥ್ ಶಾಸಕರು ಇಲ್ಲದೆ ಹೋದರು ಕೂಡ ಶಾಸಕರಂತೆ ತಾಲೂಕಿನ ಜನತೆಗೆ ಅಭಿವೃದ್ಧಿ ಕಾರ್ಯಗಳಿಗೆ ಕಷ್ಟ ಸುಖಗಳಿಗೆ ಜೊತೆಯಲ್ಲಿ ಸ್ಪಂದಿಸುತ್ತಾರೆ ಎಂದು ತಿಳಿಸಿದರು ಹಿಜಾಬ್ಬಾ ಬಗ್ಗೆ ಪ್ರತಿಪಕ್ಷದ ನಾಯಕ ಆಶೋಕ್ ಬಾಯಿಗೆ ಬಂದಂತೆ ಮಾತನಾಡುತ್ತಿರುವುದು ಆದರೆ ಸಿಐಟಿ ಪರೀಕ್ಷೆಯಲ್ಲಿ ಅವಾಂತರದಿಂದ ಲಕ್ಷಾಂತರ ಮಕ್ಕಳಿಗೆ ಸಂಕಷ್ಟದಲ್ಲಿ ಸಿಲುಕಿದ್ದಾರೆ ಇದರ ಬಗ್ಗೆ ಚಕ್ಕರ್ ಎತ್ತುವಂತಿಲ್ಲ ಎಂದು ಟೀಕಿಸಿದರು ಬಿಜೆಪಿಯವರಿಗೆ ಮಕ್ಕಳ ಭವಿಷ್ಯದ ಬಗ್ಗೆ ಕಾಳಜಿ ಇಲ್ಲ ಎಲ್ಲದಕ್ಕೂ ಕೋಮುವಾದ ಸೃಷ್ಟಿಸಿ ಅಶಾಂತಿ ಉಂಟು ಮಾಡುವುದು ಅವರ ಕೆಲಸವಾಗಿದೆ ಇನ್ನು ನೀಟ್ ಪರೀಕ್ಷೆ ಎಲ್ಲವನ್ನು ನಾವೇ ನಿಭಾಯಿಸುತ್ತೇವೆ ಎಂದು ತಿಳಿಸುತ್ತಾರೆ

ನಂತರ ಮಾಜಿ ಶಾಸಕ ಎಚ್ ಪಿ ಮಂಜುನಾಥ್ ಮಾತನಾಡಿ ಅಪೊಲೊ ಆಸ್ಪತ್ರೆ ನನಗೂ ಯಾವುದೇ ಸಂಬಂಧವಿಲ್ಲ ನಾನು ಏನು ಪಾಲ್ದಾರಲ್ಲ ನಮ್ಮ ತಾಲೂಕಿನ ಬರುವ ತೀರು ಬಡವರು ಆಸ್ಪತ್ರೆಗೆ ಹೆಚ್ಚಿನ ಶುಲ್ಕ ತೆಗೆದುಕೊಳ್ಳದೆ ಗುಣಮಟ್ಟ ಚಿಕಿತ್ಸೆ ನೀಡಿ ರೋಗಿಗಳು ಆರೋಗ್ಯಕರವಾಗಿ ಹೋಗಲಿ ಎಂದು ನಾನು ತಾಲೂಕಿನ ಜೊತೆಯಲ್ಲಿ ಆಶಿಸುತ್ತೇನೆ ಎಂದು ತಿಳಿಸಿದರು ಈ ಸಂದರ್ಭದಲ್ಲಿ ಸಾಂಬಾ ಸದಾಶಿವ ಸ್ವಾಮೀಜಿ ಕಾಂಗ್ರೆಸ್ಸಿನ ವಕ್ತಾರಾದ ಲಕ್ಷ್ಮಣ್ ಗ್ಯಾರೆಂಟಿ ಯೋಜನೆಯ ಗ್ಯಾರಂಟಿ ಯೋಜನೆಯ ರಾಜ್ಯ ಉಪಾಧ್ಯಕ್ಷರಾದ ಡಾ. ಪುಷ್ಪ ಅಮರನಾಥ್ ನಗರ ಯೋಜನೆ ಪ್ರಾಧಿಕಾರದ ಅಧ್ಯಕ್ಷರಾದ ಅಮರ್ ನಾಥ್ ನಗರಸಭೆ ಆಯುಕ್ತರಾದ ಮಾನಸ ಅಪೊಲೊ ಆಸ್ಪತ್ರೆಯ ಉಪಾಧ್ಯಕ್ಷರಾದ ಭರತ್ ರೆಡ್ಡಿ ಡಾ ಶ್ರೀನಾಥ್ ಉದ್ಯಮಿ ಅಶೋಕ್ ಸ್ನೇಹಜೀವಿ ಸಂಸ್ಥೆಯ ಅಧ್ಯಕ್ಷರಾದ ಆನಂದ್ ಡಿಹೆ ಕುಮಾರಸ್ವಾಮಿ ಫೈಸಲ್ ಕುಮಾರ್ ರೋಷನ್ ಹಾಗೂ ಇನ್ನಿತರ ಹಾಜರಿದ್ದರು

## ಹುಣಸೂರಿನ ಗ್ರಾಮಾಂತರ ಬಸ್ ನಿಲ್ದಾಣದ ಶೌಚಾಲಯದಲ್ಲಿ ನೀರಿಲ್ಲದೆ ಸಾರ್ವಜನಿಕರ ಪರದಾಟ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ಹುಣಸೂರಿನ ಗ್ರಾಮಾಂತರ ಬಸ್ ನಿಲ್ದಾಣದ ಶೌಚಾಲಯದಲ್ಲಿ ನೀರಿಲ್ಲದೆ ಸಾರ್ವಜನಿಕರು ಪರದಾಡುತ್ತಿದ್ದು,ನಗರದ ಅಭಿವೃದ್ಧಿಯನ್ನು ಸಂಪೂರ್ಣ ನಿರ್ಲಕ್ಷಿಸಿರುವ ಚುನಾಯಿತಿ ಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಬಗ್ಗೆ ಆಕ್ರೋಶವನ್ನು ಸತ್ಯ ಎಂ ಎ ಎಸ್ ಫೌಂಡೇಶನ್ ಅಧ್ಯಕ್ಷ ಸತ್ಯಪ್ಪ ವ್ಯಕ್ತಪಡಿಸಿದ್ದಾರೆ.ಅವರು ಈ ಬಗ್ಗೆ ಮಾತನಾಡಿ ಹುಣಸೂರು ಆರು ತಾಲೂಕುಗಳನ್ನು ಒಳಗೊಂಡ ಉಪವಿಭಾಗ ಕೇಂದ್ರವಾಗಿದ್ದು ಸಾರ್ವಜನಿಕರು ಪ್ರತಿಯೊಂದು ಕೆಲಸ ಕಾರ್ಯಗಳಿಗೆ ಆಗಮಿಸುತ್ತಿದ್ದು ಗ್ರಾಮಾಂತರ ಬಸ್ ನಿಲ್ದಾಣದ ಶೌಚಾಲಯವನ್ನು ಅತಿ ಹೆಚ್ಚು ಜನರು ಬಳಸಿಕೊಳ್ಳುತ್ತಿದ್ದಾರೆ.ಆದರೆ ಕಳೆದ ನಾಲ್ಕು ದಿನಗಳಿಂದ ನೀರಿಲ್ಲದೆ ಶೌಚಾಲಯ ಗಬ್ಬುನಾರುತಿದ್ದು ಸಾರ್ವಜನಿಕರು ಈ




ಶೌಚಾಲಯವನ್ನು ಬಳಸಲು ಸಾಧ್ಯವಿಲ್ಲದೆ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ.ಈ ರೀತಿಯ ಅವ್ಯವಸ್ಥೆಗೆ ಮುಖ್ಯ ಕಾರಣ ಜನಪ್ರತಿನಿಧಿಗಳ ಆಡಳಿತ ವೈಫಲ್ಯವಾಗಿದೆ. ಚುನಾಯಿತಿ ಪ್ರತಿನಿಧಿಗಳು ತಾಲೂಕಿನ ಸಮಸ್ಯೆಗಳನ್ನು ಪರಿಹರಿಸುವ ಬದಲು ಪಕ್ಕದ ರಾಜ್ಯಗಳಿಗೆ ಹೋಗಿ ಪ್ರಚಾರ ಕಾರ್ಯದಲ್ಲಿ ತೊಡಗಿಕೊಂಡಿರೋದು ನಗರದ ಸಮಸ್ಯೆಗಳ ಬಗ್ಗೆ ಅರಿವಿನ ಕೊರತೆಯೂ ಇದೆ.ಇತ್ತೀಚಿನ ದಿನಗಳಲ್ಲಿ ಅತಿ ಹೆಚ್ಚು ಜನ ಮಧುಮೇಹ ರೋಗದಿಂದ ಬಳಲುತ್ತಿದ್ದು ನಗರದ ಮಧ್ಯಭಾಗದಲ್ಲಿರುವ ಗ್ರಾಮಾಂತರ ಬಸ್ ನಿಲ್ದಾಣದ ಶೌಚಾಲಯವನ್ನೇ ಅವಲಂಬಿಸಿದ್ದಾರೆ.ನಗರ ಸಭೆಯ ಅಧಿಕಾರಿಗಳು ತಮಗೆ ಸಂಬಂಧವೇ ಇಲ್ಲ ಎನ್ನುವಂತೆ ವರ್ತಿಸುತ್ತಿದ್ದಾರೆ. ಜನರ ತೆರಿಗೆ ಹಣ ಕಂದಾಯ ರೂಪದಲ್ಲಿ ಸರ್ಕಾರದ ಬೊಕ್ಕಸಕ್ಕೆ ಸೇರುತ್ತಿದ್ದು ಆದರೆ ನಗರದ ಅಭಿವೃದ್ಧಿ ಮಾತ್ರ ಸಂಪೂರ್ಣ ಕುಂಠಿತಗೊಂಡಿದೆ.ಕೂಡಲೇ ಚುನಾಯಿತಿ ಪ್ರತಿನಿಧಿಗಳು ಇತ್ತ ಗಮನಹರಿಸಿ ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಈ ಕೂಡಲೇ ಸರ್ಕಾರಿ ಸಾರ್ವಜನಿಕ ಬಸ್ ನಿಲ್ದಾಣದಲ್ಲಿ ಇರುವ ಶೌಚಾಲಯಕ್ಕೆ ನೀರು ಸರಬರಾಜು ಮಾಡಬೇಕು . ತಪ್ಪಿದಲ್ಲಿ ಶಾಸಕರ ಆಡಳಿತ ಕಾರ್ಯವೈಖರಿಯ ಬಗ್ಗೆ ಖಂಡಿಸಿ ಸಾರ್ವಜನಿಕರೊಡಗೂಡಿ ಹುಣಸೂರು ನಗರಸಭೆ ಮುಂಭಾಗದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರ

## ಗೃಹಲಕ್ಷ್ಮಿ ಯೋಜನೆಯ ಮೃತ ಫಲಾನುಭವಿಗಳ ರೂ.12.37 ಲಕ್ಷ ಸರ್ಕಾರಕ್ಕೆ ಮರು ಭರಣ : ಸತೀಶ್ ನಾಯ್ಕ್



• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಮೇ.15– ಉತ್ತರ ಕನ್ನಡ ಜಿಲ್ಲೆಯಲ್ಲಿ ಗೃಹಲಕ್ಷ್ಮಿ ಯೋಜನೆಯ ಮೃತ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮೆ ಆಗಿದ್ದ ರೂ. 12.37 ಲಕ್ಷಗಳನ್ನು ಸರ್ಕಾರಕ್ಕೆ ಮರು ಭರಣ ಮಾಡಲಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಸತೀಶ್ ಪಿ ನಾಯ್ಕ್ ತಿಳಿಸಿದರು.

ಅವರು ಶುಕ್ರವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಗತಿ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಗೃಹಲಕ್ಷ್ಮಿ ಯೋಜನೆಯ ಮೃತ ಫಲಾನುಭವಿಗಳಿಗೆ ಜಮೆ ಆಗಿರುವ ಮೊತ್ತವನ್ನು ಈಗಾಗಲೇ ಸರ್ಕಾರಕೆ ಜಮೆ ಮಾಡಲಾಗಿದ್ದು, ಈ ಮೊತ್ತವು ಇನ್ನೂ ಹೆಚ್ಚಿರುವ ಸಾಧ್ಯತೆಗಳಿದೆ. ಆದ್ದರಿಂದ ಮೃತ ಫಲಾನುಭವಿಗಳ ಕುರಿತು ಮಾಹಿತಿ ದೊರೆತಲ್ಲಿ, ಗ್ಯಾರಂಟಿ ಸಮಿತಿಯ ಸದಸ್ಯರುಗಳು ತಮ್ಮ ವ್ಯಾಪ್ತಿಯ ಅಂಗನವಾಡಿ ಕಾರ್ಯಕರ್ತೆಯರು ಅಥವಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಒದಗಿಸುವ ಮೂಲಕ ಮೃತರ ಖಾತೆಗಳಿಗೆ ಯೋಜನೆಯ ಹಣ ಜಮೆಯಾಗುವುದನ್ನು ತಡೆಯಲು ಪ್ರಯತ್ನಿಸಬೇಕು ಎಂದರು.

ಗೃಹಲಕ್ಷ್ಮಿ ಯೋಜನೆಯ ಮೃತ ಫಲಾನುಭವಿಯ ಪಡಿತರ ಚೀಟಿಯಲ್ಲಿನ ಬೇರೆ ಕುಟುಂಬದ ಸದಸ್ಯರು ಹೊಸದಾಗಿ ಯೋಜನೆಗೆ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಮೃತ ಫಲಾನುಭವಿಗೆ ಜಮೆ ಆಗಿರುವ ಮೊತ್ತ ಸಂಪೂರ್ಣವಾಗಿ ಸರ್ಕಾರಕ್ಕೆ ಮರುಭರಣ ಗೊಂಡಿರುವುದನ್ನು ಪರಿಶೀಲಿಸಿ, ಹೊಸದಾಗಿ ಸೇರ್ಪಡೆಗೆ ಮುಂದಿನ ಕ್ರಮ ಕೈಗೊಳ್ಳುವಂತೆ ಮತ್ತು ತಾಂತ್ರಿಕ ಕಾರಣಗಳಿಂದ ಯೋಜನೆಯ ಹಣ ಸಂದಾಯವಾಗದಿರುವ ಪ್ರಕರಣಗಳಲ್ಲಿರುವ ಸಮಸ್ಯೆಗಳನ್ನು ತ್ವರಿತಗತಿಯಲ್ಲಿ ಇತ್ಯರ್ಥಪಡಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.ಹೆಸ್ಕಾಂನಿಂದ ಜಿಲ್ಲೆಯಲ್ಲಿ ಅನಿಯಮಿತವಾಗಿ ವಿದ್ಯುತ್ ಕಡಿತಗೊಳಿಸುತ್ತಿರುವ ಬಗ್ಗೆ ಅಸಮಧಾನ ವ್ಯಕ್ತಪಡಿಸಿದ ಗ್ಯಾರಂಟಿ ಸಮಿತಿಯ ಎಲ್ಲಾ ಸದಸ್ಯರು, ನಿರಂತರವಾಗಿ ವಿದ್ಯುತ್ ಪೂರೈಕೆ ಮಾಡಲು ಅಗತ್ಯವಿರುವ ಕಾರ್ಯಗಳನ್ನು ಶೀಘ್ರದಲ್ಲಿ ಮುಕ್ತಾಯಗೊಳಿಸುವಂತೆ ಮತ್ತು ವಿದ್ಯುತ್ ತಂತಿಗಳ ಮೇಲಿರುವ ಮರದ ಕೊಂಬೆಗಳು ಮತ್ತು ಅಪಾಯಕಾರಿ ಮರಗಳನ್ನು ತೆರವುಗೊಳಿಸುವ ಮೂಲಕ ಈ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಒದಗಿಸುವಂತೆ ತಿಳಿಸಿದರು.ಯುವನಿಧಿ ಯೋಜನೆಯ ಫಲಾನುಭವಿಗಳಿಗೆ ಸ್ವ ಉದ್ಯೋಗ ಕೈಗೊಳ್ಳಲು ಅನುಕೂಲವಾಗುವಂತಹ ತರಬೇತಿ ಕಾರ್ಯಕ್ರಮಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಯೋಜಿಸಿ ಅವರನ್ನು ಆರ್ಥಿಕ ಸ್ವಾವಲಂಬಿಗಳನ್ನಾಗಿ ಮಾಡುವಂತೆ ಕೌಶಲ್ಯಾಭಿವೃದ್ಧಿ ಇಲಾಖೆಯ ಅಧಿಕಾರಿಗಳಿಗೆ ಅಧ್ಯಕ್ಷರು ಸೂಚಿಸಿದರು.

ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಹೊಸದಾಗಿ ನೇಮಕಗೊಂಡಿರುವ ಚಾಲಕರಿಗೆ ಸುರಕ್ಷಿತ ಚಾಲನೆ ಕುರಿತಂತೆ ಇನ್ನೂ ಹೆಚ್ಚಿನ ತರಬೇತಿಯನ್ನು ನೀಡುವಂತೆ ತಿಳಿಸಿದ ಅವರು ನಿಗಧಿತ ನಿಲುಗಡೆ ಸ್ಥಳಗಳಲ್ಲಿ ಕಡ್ಡಾಯವಾಗಿ ಬಸ್ ನಿಲುಗಡೆ ಮಾಡುವ ಮೂಲಕ ಪ್ರಯಾಣಿಕರೊಂದಿಗೆ ಸೌಹಾರ್ದಯುತವಾಗಿ ವರ್ತಿಸಬೇಕು ಎಂದರು.

ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳನ್ನು ಒದಗಿಸುತ್ತಿರುವ ಎಲ್ಲಾ ಇಲಾಖೆಗಳು ತಮ್ಮ ವ್ಯಾಪ್ತಿಯ ಕಚೇರಿಗಳಲ್ಲಿ ತಮ್ಮ ಗ್ಯಾರಂಟಿ ಯೋಜನೆಯ ಕುರಿತ ಫಲಕ/ಬ್ಯಾನರ್ ಗಳನ್ನು ತಪ್ಪದೇ ಅಳವಡಿಸುವ ಮೂಲಕ ಯೋಜನೆಯ ಸೌಲಭ್ಯಗಳ ಬಗ್ಗೆ ಸಾರ್ವಜನಿಕರಿಗೆ ಹೆಚ್ಚಿನ ಪ್ರಚಾರ ನೀಡುವಂತೆ ತಿಳಿಸಿದರು. ಗ್ಯಾರಂಟಿ ಯೋಜನೆಗಳ ಮೂಲಕ ಜಿಲ್ಲೆಯಲ್ಲಿ ಇದುವರೆಗೆ, ಗೃಹಜ್ಯೋತಿ ಯೋಜನೆಯಡಿ ರೂ.582.92 ಕೋಟಿ, ಗೃಹಲಕ್ಷ್ಮಿ ಯೋಜನೆಯಡಿ ರೂ.1828.28 ಕೋಟಿ, ಅನ್ನಭಾಗ್ಯ ಯೋಜನೆಯಡಿ ರೂ.152.51 ಕೋಟಿ, ಯುವನಿಧಿ ಯೋಜನೆಯಡಿ ರೂ.22 ಕೋಟಿ ಮತ್ತು ಶಕ್ತಿ ಯೋಜನೆಯಡಿ ರೂ.559.93 ಕೋಟಿಯ ನೆರವನ್ನು ಒದಗಿಸಲಾಗಿದ್ದು, ಗೃಹಲಕ್ಷ್ಮಿ ಯೋಜನೆಯ ಮಾರ್ಚ್ ತಿಂಗಳ ಮೊತ್ತ ಈಗಾಗಲೇ ಬಿಡುಗಡೆಯಾಗಿದ್ದು, ಇನ್ನೂ 3 ದಿನಗಳಲ್ಲಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮೆ ಆಗಲಿದೆ ಎಂದರು.ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ನಾಗರಾಜ ಮುರ್ಡೇಶ್ವರ, ಜನಾರ್ಧನ ಕುಪ್ಪ ದೇವಾಡಿಗ, ಪುರುಷೋತ್ತಮ ದೇವಪ್ಪ ನಾಯ್ಕ, ಕಾರವಾರ ತಾಲೂಕು ಅಧ್ಯಕ್ಷ ರಾಜೇಂದ್ರ ರಾಣೆ, ಜಿ.ಪಂ. ಉಪ ಕಾರ್ಯದರ್ಶಿ ಪ್ರಕಾಶ್ ಹಾಲಮ್ಮ ನವರ್, ಪ್ರಾಧಿಕಾರದ ಸದಸ್ಯರಾದ ಪಾಂಡುರಂಗ ಕೆ ಗೌಡ, ರಿಯಾಜ್ ಅಹಮದ್ ಬಾಬುಸಾಬ್, ಸುಮಾ ರಾಜು ಉಗ್ರಾಣಕರ್, ರಾಜಶೇಖರ್ ರುದ್ರಗೌಡ ಹಿರೇಮಠ, ದೇವಿದಾಸ ನಾಗೇಶ ಶಾನುಭಾಗ, ಅಣ್ಣಪ್ಪ ಮಹಾಬಲೇಶ್ವರ ನಾಯ್ಕ, ರಾಜು ಮಂಜಪ್ಪ ನಾಯ್ಕ, ಅಶೋಕ ಕೃಷ್ಣಗೌಡ ಹಾಗೂ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಇಲಾಖೆಯ ಅಧಿಕಾರಿಗಳು ಇದ್ದರು.

## ಆಕಾಶವಾಣಿ ವಾಕಥಾನ್




• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಮೇ.15–ಆಕಾಶವಾಣಿ 90ರ ವರ್ಷಾಚರಣೆಯ ಅಂಗವಾಗಿ ಕಾರವಾರ ಆಕಾಶವಾಣಿ ಕೇಂದ್ರವು ರವೀಂದ್ರ ಠಾಗೋರ್ ಕಡಲ ತೀರದಲ್ಲಿ ಹಮ್ಮಿಕೊಂಡಿದ್ದ ಸಮೂಹ ನಡಿಗೆಗೆ ಕಾರವಾರದ ಅವರ್ ಸೋಷಿಯಲ್ ಗುಡ್ ಸಂಸ್ಥೆಯ ಪವನ್ ಸಾವಂತ್, ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಜಿಲ್ಲಾ ಸಂಯೋಜಕಿ ಬಿ.ಕೆ.ಕವಿತಾ ಹಾಗೂ ಆಕಾಶವಾಣಿ ಕಾರವಾರ ಕೇಂದ್ರದ ಕಾರ್ಯಕ್ರಮ ಮುಖ್ಯಸ್ಥ ಟಿ.ಶ್ಯಾಮ ಪ್ರಸಾದ್ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಶುಕ್ರವಾರ ಚಾಲನೆ ನೀಡಿದರು.

ನಡಿಗೆಯು ಠಾಗೋರ್ ಕಡಲ ತೀರದಿಂದ ಆರಂಭಗೊಂಡು ಹೆಂಜಾ ನಾಯ್ಕ ವೃತ್ತ, ಕೋಡಿಭಾಗ್ ರಸ್ತೆಯ ಮೂಲಕ ಸಾಗಿ ಬಂದ ಮೆರವಣಿಗೆ ಆಕಾಶವಾಣಿ ಕಾರವಾರ ಕಚೇರಿ ಆವರಣದಲ್ಲಿ ಸಮಾಪನಗೊಂಡಿತು. ದಾರಿಯುದ್ದಕ್ಕೂ ಆಕಾಶವಾಣಿ–ಮಧುರವಾಣಿ,ಉಲಿ–ಬಾನುಲಿ, ಆಕಾಶವಾಣಿ–ನಮ್ಮ ವಾಣಿ ಮೊದಲಾದ ಉದ್ಘೋಷಗಳು ಮೊಳಗಿದವು. ಕಾರ್ಯಕಮದಲ್ಲಿ ಕಾರವಾರದ ಆಕಾಶವಾಣಿ ಸಿಬ್ಬಂದಿ, ಕಾರ್ಯಕ್ರಮ ಸಹಾಯಕರು, ರೋಟರಿ ಕಾರವಾರ,ಅವರ್ ಸೋಷಿಯಲ್ ಗುಡ್ ಸಂಸ್ಥೆ ಹಾಗೂ ಇನ್ನಿತರರು ಸೇರಿದಂತೆ 100ಕ್ಕೂ ಹೆಚ್ಚು ಜನರು ನಡಿಗೆಯಲ್ಲಿ ಭಾಗವಹಿಸಿದರು.ಎಲ್ಲರಿಗೂ ಪ್ರಮಾಣ ಪತ್ರ ವಿತರಿಸಲಾಯಿತು.

## ಭಟ್ಕಳ : ಆಸ್ತಿ ತೆರಿಗೆಯಲ್ಲಿ ರಿಯಾಯತಿ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಮೇ.15–ಭಟ್ಕಳ ನಗರಸಭೆ ವ್ಯಾಪ್ತಿಯಲ್ಲಿ ಬರುವ ಆಸ್ತಿ ಮಾಲೀಕರು/ಅಧಿಭೋಗದಾರರು 202627 ನೇ ಸಾಲಿನ ಆಸ್ತಿ ತೆರಿಗೆಯನ್ನು ಜೂನ್ 30 ರೊಳಗೆ ಪಾವತಿಸಿ, ಶೇ.5 ರಷ್ಟು ರಿಯಾಯತಿ ಪ್ರಯೋಜನ ಪಡೆಯುವಂತೆ

ಭಟ್ಕಳ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನರೇಗಾ ಕಾಮಗಾರಿ ಸ್ಥಳದಲ್ಲಿ ಮಾಹಿತಿ ವಿನಿಮಯ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಮೇ.15– ಸಿದ್ದಾಪುರ ತಾಲೂಕಿನ ಕಾನಗೋಡ ಗ್ರಾಮ ಪಂಚಾಯತ್ ನ ಮಂಕೋಡ್ ಗ್ರಾಮದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕೈಗೊಳ್ಳಲಾದ ಹೊರಗಾಲುವೆ ಕಾಮಗಾರಿ ಸ್ಥಳದಲ್ಲಿ ಕೂಲಿಕಾರರರಿಗೆ ನರೇಗಾ ಯೋಜನೆ ಕುರಿತಾದ "ಮಾಹಿತಿ ವಿನಿಮಯ ಕಾರ್ಯಕ್ರಮ"ಶುಕ್ರವಾರ ನಡೆಸಲಾಯಿತು. ಕೂಲಿಕಾರರಿಗೆ ಯೋಜನೆಯಡಿ ಸಿಗುವ ಸೌಲಭ್ಯಗಳು ಹಾಗೂ ದಿನಕ್ಕೆ ನೀಡುವ ಕೂಲಿ ಮೊತ್ತ, ಕೆಲಸದ ಅವಧಿ, ವಿಕಲಚೇತನರು, ವಯಸ್ಕರು ಹಾಗೂ ಗರ್ಭಿಣಿಯರು ಮತ್ತು ಬಾಣಂತಿಯರಿಗೆ ಇರುವ ಕೆಲಸದಲ್ಲಿನ ರಿಯಾಯಿತಿ, ಸಾರ್ವಜನಿಕ ಕಾಮಗಾರಿಗಳಿಂದಾಗುವ ಪ್ರಯೋಜನಗಳ ಕುರಿತು ಸಂಕ್ಷಿಪ್ತ ಮಾಹಿತಿ ನೀಡಲಾಯಿತು.ಈ ಸಂದರ್ಭದಲ್ಲಿ ಮಾತನಾಡಿದ, ನರೇಗಾ ಸಹಾಯಕ ನಿರ್ದೇಶಕಭೀಮಾ ನಾಯ್ಕ್ ಎಮ್. ಬಿ., ಎಲ್ಲಾ ಕೂಲಿಕಾರರು ಕಡ್ಡಾಯವಾಗಿ ಇ–



ಕೆವೈಸಿ ಮಾಡಿಸಿಕೊಳ್ಳಬೇಕು. ಜೊತೆಗೆ ನಿಮ್ಮ ಬೇಡಿಕೆಗೆ ಅನುಗುಣವಾಗಿ ಕೆಲಸ ನೀಡಲು ನಾವು ಸದಾ ಸಿದ್ಧರಾಗಿದ್ದು,ಎನ್ಎಂ.ಎಂ.ಎಸ್ ಫೋಟೋ ಕಡ್ಡಾಯವಾಗಿರುವುದರಿಂದ ಕೂಲಿಕಾರರು ಸಹಕರಿಸಬೇಕು ಎಂದರು.

ತಾಂತ್ರಿಕ ಸಂಯೋಜಕ ಮಂಜುನಾಥ್, ಐಇಸಿ ಸಂಯೋಜಕ ಪೂರ್ಣಿಮಾ ಗೌಡ ಪಂಚಾಯತ್ ಸಿಬ್ಬಂದಿಗಳು ಹಾಜರಿದ್ದರು.

ಕಾಮಗಾರಿ ಸ್ಥಳದಲ್ಲಿ ಮಹಿಳಾ ಕೂಲಿಕಾರರೇ ಹೆಚ್ಚಿನ ಸಂಖ್ಯೆಯಲ್ಲಿದ್ದು, ಈ ಗ್ರಾಮ ಪಂಚಾಯತ್ ನ ಸಮುದಾಯ ಕಾಮಗಾರಿಗಳಲ್ಲಿ ಶೇ.98 ರಷ್ಟು ಹೆಣ್ಣುಮಕ್ಕಳು ಪಾಲ್ಗೊಂಡಿದ್ದು, ತಮ್ಮ ಗ್ರಾಮದ ಕಾಲುವೆ, ರಸ್ತೆ, ಕೆರೆ ಇತ್ಯಾದಿ ಸಾರ್ವಜನಿಕ ಆಸ್ತಿಗಳ ಅಭಿವೃದ್ಧಿ ಕಾಮಗಾರಿಗಳನ್ನು ಮಾಡುತ್ತಿರುವುದು

ಮೆಚ್ಚುಗೆಗೆ ಕಾರಣವಾಗಿದೆ.ಪ್ಯಾನಲ್ ಅಡ್ವೋಕೇಟ್ ಹುದ್ದೆಗೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆಕಾರವಾರ. ಮೇ.15– ಉತ್ತರ ಕನ್ನಡ ಜಿಲ್ಲಾ ಪಂಚಾಯತಿಗೆ ಸಂಬಂಧಿಸಿದಂತೆ ವಿವಿಧ ನ್ಯಾಯಾಲಯಗಳಲ್ಲಿ ಮತ್ತು ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಳಗಾವಿ/ಬೆಂಗಳೂರು ಇಲ್ಲಿ ದಾಖಲಾಗುವ ರಿಟ್ ಅರ್ಜಿ, ದಾವೆ ಇತ್ಯಾದಿ ಮೊಕದ್ದಮೆಗಳಲ್ಲಿ ಸಮರ್ಥವಾದ ಮಂಡಿಸಲು Panelog Advocater ನ್ಯಾಯಾವಾದಿಗಳನ್ನು ನೇಮಕ ಮಾಡುವ ಕುರಿತು ಅರ್ಹ ವಕೀಲರಿಂದ ಅರ್ಜಿಯನ್ನು ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಅವಧಿಯನ್ನು ಮೇ 30 ರ ವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್‌ಎಸ್‌ಎಲ್‌ಸಿ ಪರೀಕ್ಷೆ-2; ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ನಿಷೇಧಿತ ಪ್ರದೇಶ ಘೋಷಣೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಮೇ 15:ಜಿಲ್ಲೆಯಲ್ಲಿ ಮೇ 18 ರಿಂದಮೇ 25 ರವರೆಗೆ ನಡೆಯಲಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ರ ಸುಗಮ ಮತ್ತು ಪಾರದರ್ಶಕ ನಿರ್ವಹಣೆಗಾಗಿ, ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟಲು ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ, ಜಿಲ್ಲೆಯ ಆಯ್ದ 10 ಪರೀಕ್ಷಾಕೇಂದ್ರಗಳ ಸುತ್ತಲಿನ 200 ಮೀ.ವ್ಯಾಪ್ತಿಯ ಪ್ರದೇಶವನ್ನು ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023 ರ ಕಲಂ 163 ರ ಅಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ನಿಷೇಧಿತ ವಲಯ ಎಂದು ಜಿಲ್ಲಾ ದಂಡಾಧಿಕಾರಿಯೂ ಆದ ಜಿಲ್ಲಾಧಿಕಾರಿ ನಾಗೇಂದ್ರಪ್ರಸಾದ್.ಕೆ ಅವರು ಘೋಷಿಸಿದ್ದಾರೆ.ಪರೀಕ್ಷಾ ಸಮಯದಲ್ಲಿ ಈ ವ್ಯಾಪ್ತಿಯಲ್ಲಿರುವ ಜೆರಾಕ್ಸ್ ಅಂಗಡಿಗಳು ಮತ್ತು ಇಂಟರ್ನೆಟ್ ಸೆಂಟರ್ ಗಳನ್ನು ಕಡ್ಡಾಯವಾಗಿ ಮುಚ್ಚುವಂತೆ, ಅನಧಿಕೃತ ವ್ಯಕ್ತಿಗಳು ಮತ್ತು ಗುಂಪುಗಳು ಪರೀಕ್ಷಾ ಕೇಂದ್ರದ ಹತ್ತಿರ ಸುಳಿಯುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.ಈ ನಿಷೇಧಾಜ್ಞೆಯು ಪರೀಕ್ಷಾ ಕಾರ್ಯದಲ್ಲಿ ತೊಡಗಿರುವ ಸಿಬ್ಬಂದಿ, ಅಧಿಕಾರಿಗಳಿಗೆ ಅನ್ವಯಿಸುವುದಿಲ್ಲ ಎಂದು ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.

# ಪೂರಕ ಮಾಹಿತಿಯೊಂದಿಗೆ ಹಾಜರಾಗಲು ಅಧಿಕಾರಿಗಳಿಗೆ ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ 15:ಕರ್ನಾಟಕ ರಾಜ್ಯ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷರು ಜಿಲ್ಲಾ ಪ್ರವಾಸ ಹಾಗೂ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದು, ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಎಲ್ಲಾ ಇಲಾಖಾ ಅಧಿಕಾರಿಗಳು ಕಡ್ಡಾಯವಾಗಿ ಪೂರಕ ಮಾಹಿತಿ ಮತ್ತು ಅಂಕಿಅಂಶಗಳೊಂದಿಗೆ ಸಭೆಗೆ ಹಾಜರಾಗಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಮೇ 18 ರಂದು ಕರ್ನಾಟಕ ಅನುಸೂಚಿತ ಜಾತಿ ಮತ್ತು ಬುಡಕಟ್ಟುಗಳ ಆಯೋಗದ ಅಧ್ಯಕ್ಷರ ಭೇಟಿ ಹಿನ್ನಲೆ ಅಂಗವಾಗಿ ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಪೂರ್ವಭಾವಿ ಸಭೆ ನಡೆಸಿ ಅವರು ಮಾತನಾಡಿದರು.ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯಗಳ ಅಭಿವೃದ್ಧಿಗಾಗಿ ಮೀಸಲಿಟ್ಟ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಅನುದಾನದ ಕಳೆದ ಮೂರು ವರ್ಷಗಳ ಪ್ರಗತಿ ವರದಿ ಹಾಗೂ



ಪ್ರಸ್ತುತ ಚಾಲ್ತಿಯಲ್ಲಿರುವ ಕಾಮಗಾರಿಗಳ ವಿವರಗಳನ್ನು ಸಿದ್ಧವಾಗಿಟ್ಟುಕೊಳ್ಳಬೇಕು ಎಂದು ತಿಳಿಸಿದರು.ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ಮೀಸಲಿಟ್ಟಿರುವ ಎಸ್ಸಿಎಸ್ಪಿ–ಟಿಎಸ್ಪಿ ಅನುದಾನವನ್ನು ಯಾವುದೇ ಕಾರಣಕ್ಕೂ ವಿಳಂಬ ಮಾಡದೆ, ನಿಗದಿತ ಅವಧಿಯೊಳಗೆ ಸಮರ್ಪಕವಾಗಿ ಬಳಕೆ ಮಾಡಬೇಕು. ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಮತ್ತು ವಿತರಿಸಲಾದ ಸೌಲಭ್ಯಗಳ ಬಗ್ಗೆ ನಿಖರವಾದ ಅಂಕಿಅಂಶಗಳನ್ನು ಒದಗಿಸಬೇಕು ಎಂದು ಹೇಳಿದರು.ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯಗಳ ಫಲಾನುಭವಿಗಳಿಗೆ ಯಾವುದೇ ಸೌಲಭ್ಯ ನೀಡುವಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಬೇಕು. ಇದಕ್ಕಾಗಿ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡುವಲ್ಲಿ ಆನ್ ಲೈನ್ ಮೂಲಕವೇ ಅರ್ಜಿ ಆಹ್ವಾನಿಸಬೇಕು. ಇದಕ್ಕಾಗಿ 'ಎನ್ಐಸಿ' ಯುನಿಟ್ ಇದ್ದು, ಆನ್ ಲೈನ್ ಪ್ರಕ್ರಿಯೆಗೆ ಅನುವು ಮಾಡಿಕೊಡಲಿದ್ದಾರೆ ಎಂದು ತಿಳಿಸಿದರು.ಜಿಲ್ಲೆಯ ವಿವಿಧ ನಗರ–ಸ್ಥಳೀಯ ಸಂಸ್ಥೆಗಳಲ್ಲಿ ಎಸ್ಸಿಎಸ್ಪಿ–ಟಿಎಸ್ಪಿ ಅನುದಾನ ಬಳಕೆಯಾಗದೇ ಇರುವುದು ಕಂಡುಬಂದಿದ್ದು, ಸಂಬಂಧಿಸಿದ ಮುಖ್ಯಾಧಿಕಾರಿಗಳಿಗೆ ಹಾಗೂ ಜಿಲ್ಲಾ ನಗರಾಭಿವೃದ್ಧಿ ಇಲಾಖೆಯ ಯೋಜನಾ ನಿರ್ದೇಶಕರಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡಬೇಕು ಎಂದು ನಿರ್ದೇಶನ ನೀಡಿದರು.ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಮಾತನಾಡಿ, ಆಯೋಗದ ಅಧ್ಯಕ್ಷರ ಭೇಟಿಯ ಸಂದರ್ಭದಲ್ಲಿ ಸ್ಥಳೀಯ ಅನುಸೂಚಿತ ಜಾತಿ ಮತ್ತು ಬುಡಕಟ್ಟುಗಳ ಸಂಘಟನೆಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಭೇಟಿ ಮಾಡಿ ತಮ್ಮ ಕುಂದುಕೊರತೆಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಈ ಕುರಿತು ಸಾಕಷ್ಟು ಪ್ರಚಾರ ಕೈಗೊಳ್ಳಬೇಕು. ಆಯೋಗದ ಅಧ್ಯಕ್ಷರ ಭೇಟಿ ಮಾಹಿತಿ ಕುರಿತು ಜನಪ್ರತಿನಿಧಿಗಳಿಗೆ ಗಮನಕ್ಕೆ ತರಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಿಗೆ ಸೂಚಿಸಿದರು.

ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಾಷುಮೋದ್ದಿನ್, ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರಾಜು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯಕ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಏಳುಬೆಂಚಿಯಲ್ಲಿ ಗ್ರಾಮೀಣ ಸಂಜೆ ಸಾಂಸ್ಕೃತಿಕೋತ್ಸವ-2026



• ಮಲ್ಲಮ್ಮ ನುಡಿ ವಾರ್ತೆಕುರುಗೋಡು

ತಾಲೂಕಿನ ಏಳುಬೆಂಚಿ ಗ್ರಾಮದಲ್ಲಿ ಮೇ 13 ನೇ ತಾರೀಖು 2026ರಲ್ಲಿ ಶ್ರೀ ಸಿದ್ದೇಶ್ವರ ರಂಗ ಸಂಸ ಕಲ್ಚರಲ್ ಟ್ರಸ್ಟ್ (ರಿ) ಮಾವಿನಹಳ್ಳಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಸಹಯೋಗದಲ್ಲಿ ಏಳುಬೆಂಚಿ ಗ್ರಾಮೀಣ ಸಂಜೆ ಸಾಂಸ್ಕೃತಿಕೋತ್ಸವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

ಗ್ರಾಮೀಣ ಭಾಗದಲ್ಲಿ ಜನಪದ ಕಲೆಗಳನ್ನು ಉಳಿಸಿ ಬೆಳಿಸುವ ಕೆಲಸ ಸತತವಾಗಿ ನಡೆಸುತ್ತ ಕಲೆ,ಸಾಹಿತ್ಯ, ಸಂಸ್ಕೃತಿ ಬಗ್ಗೆ ಅರಿವು ಮೂಡಿಸುತ್ತಾ ಜನರಿಗೆ ಮನರಂಜನೆ ನೀಡುವ ಸಾಂಸ್ಕೃತಿಕ ಕಾರ್ಯಕ್ರಮಗಳು ಗ್ರಾಮೀಣ ಭಾಗದಲ್ಲಿ ನಡೆಸುವ ಕೆಲಸ ಇಲಾಖೆಗಳು ಮಾಡುತ್ತಿವೆ ಎಂದು ಜ್ಯೋತಿ ಬೆಳಗಿಸಿಸುವ ಮುಖಾಂತರ ಉದ್ಘಾಟನಾ ಕಾರ್ಯಕ್ರಮ ನೇರವೇರಿಸಿ ಪುರಾಣಿಕರು ಮತ್ತು ಸಂಗೀತಗಾರರಾದ ಶ್ರೀ ಡಿ.ಎಂ.ಎರ್ರಿಸ್ವಾಮಿ ಉದ್ಘಾಟಕರ ನುಡಿಯನ್ನು ಪ್ರಸ್ತಾಪಿಸಿದರು.

ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಗ್ರಾಮೀಣ ಜನರಿಗೆ ತಿಳಿಸುವ ನಿಟ್ಟಿನಲ್ಲಿ ಸರ್ಕಾರ ಇಲಾಖೆಗಳ ಧನಸಹಾಯ ನೀಡುವುದರ ಮುಖಾಂತರ ಬೆಂಬಲಿಸುವ ಕೆಲಸ ಮಾಡುತ್ತಿದೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಶ್ರೀ ಬಿ.ನಾಗರಾಜ ಹೇಳಿದರು.

ಕಲೆಗಳು ಬಹಳಷ್ಟು ಅಭಿವೃದ್ಧಿ ಸ್ಥಳವಾಗಿರುವುದು ಹಳ್ಳಿಗಳಲ್ಲಿ ಆದ್ದರಿಂದ ಹಳ್ಳಿಗಳ ಕಲೆಗಳನ್ನು ಮುಂದಿನ ತಲೆಮಾರಿಗೆ ಕೊಂಡೊಯ್ಯುವ ಮಕ್ಕಳಿಗೆ ತಿಳಿಸುವ ಸರ್ಕಾರ ಮಿಡುತ್ತಿದೆ ಎಂದು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ತಬಲಾ ವಾದಕರಾದ ಶ್ರೀ ಚಾಗೆವರಬಸಪ್ಪರವರು ಹೇಳಿದರು.

ಇಂದಿನ ಶಾಲಾ ಹಂತದಲ್ಲಿ ಮಕ್ಕಳಿಗೆ ಸಂಗೀತ, ನಾಟಕ,ನೃತ್ಯ ಬೆಳೆಸುವ ಕೆಲಸ ಸರ್ಕಾರ ಮಾಡಬೇಕು ಮತ್ತು ಶಾಲಾ ಶಿಕ್ಷಕರಾಗಿ ಸಂಗೀತ ಶಿಕ್ಷಕರ, ನಾಟಕ ಅಥವಾ ರಂಗ ಶಿಕ್ಷಕರು ಮತ್ತು ನೃತ್ಯ ಶಿಕ್ಷಕರ ನೇಮಕಾತಿ ಶಾಲೆಗಳಲ್ಲಿ ಮಾಡಬೇಕು ಜನಪದ ಕಲೆಗಳು ಬೆಳೆದು ಬಂದ ಹಾದಿಯನ್ನು ಗ್ರಾಮೀಣ ಜನಗಳಿಂದ ಗ್ರಾಮೀಣ ಭಾಗಕ್ಕೆ ನಾನ ಕಲೆಗಳನ್ನು ಈಗಲೂ ಕಂಡುಬರುತ್ತದೆ ಬರುವುದನ್ನು ನೋಡುತ್ತೇವೆ ಗ್ರಾಮೀಣ ಜನಗಳು ಅದರ ಬಗ್ಗೆ ಅರಿವು ಮೂಡಿಸುವ ಕೆಲಸ ಆಗಬೇಕು ಎಂದು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಬಯಲಾಟ ಹಾರ್ಮೂನಿಯಂ ಮಾಸ್ಟರ್ ಶ್ರೀ ಡಿ.ಎಂ.ಮಂಜುನಾಥ ಹೇಳಿದರು.

ಇಂದಿನ ಮಕ್ಕಳಿಗೆ ನನ್ನ ಮಗ ಶಿಕ್ಷಣ ಓದುತ್ತಿಲ್ಲ ಎಂದು ಸ್ವಾಮಿಗಳ ,ಸಾಹೇಬರು ಹತ್ತಿರ ಬಂದು ತಾಯತ ಕಟ್ಟಿಸುವುದರಿಂದ ಮಕ್ಕಳು ವಿದ್ಯಾಭ್ಯಾಸ ಆಗುವುದಿಲ್ಲ ಮಕ್ಕಳಿಗೆ ಯಾವುದರ ಮೇಲೆ ಇಚ್ಛಾಶಕ್ತಿ ಇರುತ್ತದೆ ಆದರ ಕಡೆ ಗಮನಹರಿಸಲು ಬಿಡುವುದು ತಂದೆ ತಾಯಿ ಕಲಿಯಬೇಕು ಅವರು ಕಲೆಗಳಾದ ಸಂಗೀತ ಕಲೆಯುತ್ತಾರೆ,ನಾಟಕ ಕಲೆಯುತ್ತಾರೆ, ನೃತ್ಯ ಕಲೆಯುತ್ತಾರೆ ಅವರವರ ವೈಯುಕ್ತಿಕ ನಾವು ಅವರಿಗೆ ಬೆಳೆಯಲು ಪ್ರೋತ್ಸಾಹ ನೀಡಬೇಕು ನಮ್ಮ ಸಪ್ತ ಸ್ವರಗಳು ಒಳಗೊಂಡ ನಮ್ಮ ಏಳುಬೆಂಚಿ ಗ್ರಾಮೀಣ ಪ್ರದೇಶವಾಗಿದೆ ನಮ್ಮ ಗ್ರಾಮದಲ್ಲಿ ಬಡೀಗರ್ ಕೊಟ್ರೇಶ್ ಒಳ್ಳೆಯ ಕಲಾವಿದರು ನಮ್ಮ ಏಳುಬೆಂಚಿ ಗ್ರಾಮ ಕಲೆಗಳ ತವರೂರು ಎಂದು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪುರಾಣಿಕರು ಮತ್ತು ಕಲಾವಿದರಾದ ಶ್ರೀ ಕರುಣಾಮೂರ್ತಿ ಶಾಸ್ತ್ರಿಗಳು ಅಧ್ಯಕ್ಷರು ನುಡಿಯನ್ನು ಪ್ರಸ್ತಾಪಿಸಿದರು.

ಸಾಂಸ್ಕೃತಿಕ ಕಾರ್ಯಕ್ರಮಗಳು :–ಸುಗಮ ಸಂಗೀತ:– ಶ್ರೀ ಡಿ.ಎಂ.ಮಂಜುನಾಥ ಮತ್ತು ತಂಡದವರು ಸಮೂಹ ನೃತ್ಯ:–ಕೆ.ಸಿ.ಸುಂಕಣ್ಣ ಮತ್ತು ತಂಡದವರು ನೇರವೇರಿಸಿದರು.

ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿದವರು :–ಶ್ರೀ ಕೆ.ಎಂ.ಶರಭಯ್ಯ ಸ್ವಾಮಿ, ಶ್ರೀ ಆರ್ .ಲಿಂಗಪ್ಪಶ್ರೀ ಎನ್ ಮಾರೆಣ್ಣ,ಮಾವಿನಹಳ್ಳಿ ಬಯಲಾಟ ಕಲಾವಿದರು ಬಿ.ಸಿದ್ದಪ್ಪ ಧರ್ಮಪ್ಪ ,ಶ್ರೀ ಜಿ.ಎ.ದೊಡ್ಡಬಸವನಗೌಡ, ಊರಿನ ಗುರು ಹಿರಿಯರು,ರೈತ ಬಾಂಧವರು ಮತ್ತು ಶ್ರೀ ಸಿದ್ದೇಶ್ವರ ರಂಗ ಸಂಸ ಕಲ್ಚರಲ್ ಟ್ರಸ್ಟ್ ಅಧ್ಯಕ್ಷರು ಗುರುಮಹಾಂತೇಶ. ಬಿ ಮತ್ತು ಕಾರ್ಯದರ್ಶಿ ಕುರುಬರ ಹೇಮೇಶ್ವರ ಭಾಗವಹಿಸಿದ್ದರು. ಕಾರ್ಯಕ್ರಮದ ನಿರೂಪಣೆ ಮತ್ತು ಸ್ವಾಗತ ಸ್ವಾಮಿ ವಿವೇಕಾನಂದ ಹಿರಿಯ ಪ್ರಾಥಮಿಕ ಶಾಲಾ ಮುಖ್ಯ ಗುರುಗಳು ಶ್ರೀ ಎಸ್. ಎರ್ರಿಸ್ವಾಮಿ, ಪಿಎಂಶ್ರೀ ಸರಕಾರಿ ಪ್ರೌಢ ಶಾಲಾ ಕನ್ನಡ ಶಿಕ್ಷಕರಾದ ಶ್ರೀ ಮುದಿಯಪ್ಪ ವಂದಿಸಿದರು.

# ಎಐ ಕಣ್ಗಾವಲಿನಲ್ಲಿಯೂ 12 ದಿನಗಳಲ್ಲಿ 3.66 ಲಕ್ಷಕ್ಕೂ ಅಧಿಕ ಬಾರಿ ಸಂಚಾರಿ ನಿಯಮ ಉಲ್ಲಂಘನೆ


• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.15– ಎಐ ಕಣ್ಗಾವಲುನಲ್ಲಿಯೂ ಸಂಚಾರಿ ನಿಯಮಗಳನ್ನು ಉಲ್ಲಂಘನೆ ಮಾಡಲಾಗುತ್ತಿದೆ. ಕಳೆದ 12 ದಿನಗಳಲ್ಲಿ 3.66 ಲಕ್ಷಕ್ಕೂ ಅಧಿಕ ಬಾರಿ ಸಂಚಾರಿ ನಿಯಮಗಳನ್ನು ಉಲ್ಲಂಘಿಸಲಾಗಿದೆ ಎಂದು ನಗರ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಅವರು ತೀವ್ರ ಅಸಮಾಧಾನವ್ಯಕ್ತಪಡಿಸಿದ್ದಾರೆ.ಸಾರ್ವಜನಿಕರು ಕಡ್ಡಾಯವಾಗಿ ಸಂಚಾರಿ ನಿಯಮ



ಪಾಲನೆ ಮಾಡುತ್ತಿಲ್ಲ. ನೆಪ ಹೇಳಿ ನಿಯಮಗಳನ್ನು ಗಾಳಿಗೆ ತೂರುತ್ತಿದ್ದಾರೆ. ಈಗೇನೂ ಉಲ್ಲಂಘನೆಯಾಗಿದೆ. ಅದರಲ್ಲಿ ನಿಧಾನವಾಗಿ ಚಲನ್ ಜನರೇಟ್ ಮಾಡ್ತಾ ಇದ್ದೀವಿ. ಮುಂದಿನ ದಿನಗಳಲ್ಲಿ ಕಂಪ್ಲೇಟ್ ಸ್ವಯಂಚಾಲಿತ ಆಗಲಿದೆ ಎಂದು ಎಚ್ಚರಿಸಿರುವ ಅವರು, ಸಾರ್ವಜನಿಕರು ಯಾರು ಸಹ ದಂಡ ಕಟ್ಟಬಾರದು. ಬದಲಾಗಿ ಸಂಚಾರಿ ನಿಯಮ ಪಾಲಿಸಬೇಕು ಎಂದು ಸಲಹೆ ನೀಡಿದ್ದಾರೆ.ನಿರ್ಲಕ್ಷ್ಯ ತೋರಿದರೆ ದಂಡ ಅನಿವಾರ್ಯ. ಜೂನ್ ತಿಂಗಳಿಂದ ನಿಯಮ ಮತ್ತಷ್ಟು ಬಿಗಿಗೊಳ್ಳಲಿವೆ ಎಂದು ಅವರು ತಿಳಿಸಿದ್ದಾರೆ. ಬೈಕ್ ಮೇಲೆ ತ್ರಿಬಲ್ ರೈಡಿಂಗ್ ಮುಂದುವರೆದಿದೆ. ಹೆಲ್ಮೆಟ್‌ಂತೂ ಸಾಕಷ್ಟು ಪ್ರಮಾಣದಲ್ಲಿ ಸವಾರರು ಹಾಕುತ್ತಿಲ್ಲ. ವಾಹನಗಳ ಸವಾರರು ಸೀಟ್ ಬೆಲ್ಟ್ ಹಾಕುತ್ತಿಲ್ಲ. ಎಐ ಕಣ್ಗಾವಲು ಇದೆ ಎಂದು ಗೊತ್ತಿದ್ದರೂ ಸವಾರರು ಸಂಚಾರಿ ನಿಯಮಗಳನ್ನು ಪಾಲಿಸದೇ ನಿರ್ಲಕ್ಷ್ಯ ವಹಿಸುತ್ತಿದ್ದು, ಜೂನ್ 1ರಿಂದ ಕಟ್ಟುನಿಟ್ಟಿನ ನಿಯಮ ಜಾರಿಗೆ ಬರುವುದರಿಂದ ಸವಾರರು ಈಗಲೇ ಎಚ್ಚೆತ್ತುಕೊಳ್ಳುವುದು ಅಗತ್ಯವಾಗಿದೆ.

# ಸರ್ಕಾರಿ ನ್ಯಾಯಬೆಲೆ ಅಂಗಡಿ' ಚಲನಚಿತ್ರದ ಪೋಸ್ಟರ್ ಬಿಡುಗಡೆ




• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನ್ಯಾಯಬೆಲೆ ಅಂಗಡಿ ಮಾಲೀಕರ ಸಮಸ್ಯೆಗಳು, ಕರ್ತವ್ಯಗಳು, ಎದುರಾದ ಸಮಸ್ಯೆಗಳ ಕುರಿತು ಸಿದ್ಧಪಡಿಸಿದ ಚಲನಚಿತ್ರವಿದು. ಸರ್ಕಾರದ ವಿರುದ್ಧ ನಿರ್ಮಿಸಿದ ಚಲನಚಿತ್ರವಲ್ಲ, ಅಂಗಡಿ ಮಾಲೀಕರ ಪರವಾಗಿರುವ ಚಿತ್ರವಿದು, ನ್ಯಾಯಬೆಲೆ ಅಂಗಡಿ ಮಾಲೀಕರು, ಕುಟುಂಬಸ್ಥರು, ಪ್ರತಿಯೊಬ್ಬರೂ ಚಿತ್ರವನ್ನು ವೀಕ್ಷಿಸಿ ಪ್ರೋತ್ಸಾಹಿಸಬೇಕು ಎಂದು ಕರ್ನಾಟಕ ರಾಜ್ಯ ಸರ್ಕಾರಿ ಪಡಿತರ ವಿತರಕರ ಸಂಘದ ರಾಜ್ಯಾಧ್ಯಕ್ಷ ಹಾಗೂ ರಾಷ್ಟ್ರೀಯ ಕಾರ್ಯಾಧ್ಯಕ್ಷ ಟಿ.ಕೃಷ್ಣಪ್ಪ ಅವರು ಹೇಳಿದರು. ನಗರದ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ 'ಸರ್ಕಾರಿ ನ್ಯಾಯಬೆಲೆ ಅಂಗಡಿ'ಚಲನಚಿತ್ರದ ಪೋಸ್ಟರ್ ಬಿಡುಗಡೆಗೊಳಿಸಿ ಮಾತನಾಡಿದರು.ನಿರ್ಮಾಪಕರಾದ ತೇಜು ಮೂರ್ತಿ,ಬಾಮ ಹರೀಶ್, ಪದ್ಮಾವತಿ, ಚಂದ್ರು ಅವರ ನೇತೃತ್ವದಲ್ಲಿ ಅತ್ಯುತ್ತಮವಾಗಿ ನಿರ್ಮಿಸಿದ,ಸರ್ಕಾರಿ ನ್ಯಾಯಬೆಲೆ ಅಂಗಡಿ'ಚಲನಚಿತ್ರದಲ್ಲಿ,ನಾನು ಪಾತ್ರವಹಿಸಿದ್ದೇನೆ, ಜೊತೆಗೆ ಹೆಸರಾಂತ ಕಲಾವಿಧಾರದ ಕುಮಾರ ಬಂಗಾರಪ್ಪ, ರಾಗಿಣಿ, ದೊಡ್ಡಣ್ಣ ಸೇರಿದಂತೆ ಸಾಕಷ್ಟು ಕಲಾವಿದರು ಅಭಿನಯಿಸಿದ್ದಾರೆ. ಜೂ.1 ರಂದು ಚಲನಚಿತ್ರ ಬಿಡುಗಡೆಯಾಗಲಿದ್ದು, ಇದರ ಭಾಗವಾಗಿ ಪೋಸ್ಟರ್ ಗಳನ್ನು ಬಿಡುಗಡೆಗೊಳಿಸಲಾಗಿದೆ. ಪ್ರತಿಯೊಬ್ಬ ನ್ಯಾಯಬೆಲೆ ಅಂಗಡಿ ಮಾಲೀಕರು ನ್ಯಾಯಬೆಲೆ ಅಂಗಡಿ ಮುಂದೆ ಪೋಸ್ಟರ್ ಗಳನ್ನು ಅಂಟಿಸಬೇಕು, ಅಂದು ಕುಟುಂಬದ ಎಲ್ಲ ಸದಸ್ಯರೊಂದಿಗೆ ಕುಳಿತು ಚಿತ್ರವನ್ನು ವೀಕ್ಷಿಸಿ ಪ್ರೋತ್ಸಾಹಿಸಬೇಕು. ಜೂ.1 ರಂದು ಶಿವಮೊಗ್ಗ, ಬಳ್ಳಾರಿ, ಹಾಸನ ಜಿಲ್ಲೆಗಳಲ್ಲಿ ಆಹಾರ ಇಲಾಖೆ ಸಚಿವ ಮುನಿಯಪ್ಪ ಅವರೊಂದಿಗೆ ಒಂದೇ ದಿನ ಏಕಕಾಲಕ್ಕೆ ಉದ್ಘಾಟಿಸುವ ವ್ಯವಸ್ಥೆ ಮಾಡಲು ಚಿಂತನೆಯಿದೆ ಎಂದರು. ಚಲನಚಿತ್ರದ ನಿರ್ಮಾಪಕರಾದ ತೇಜು ಮೂರ್ತಿ,ಬಾಮಾ ಹರೀಶ್ ಅವರು ಮಾತನಾಡಿ, ಪಡಿತರ ವ್ಯವಸ್ಥೆಯಲ್ಲಿ ಸಾಕಷ್ಟು ಸಮಸ್ಯೆಗಳಿದ್ದು, ಅಂಗಡಿ ಮಾಲೀಕರು ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ,ಈ ಹಿನ್ನೆಲೆಯಲ್ಲಿ ಸರ್ಕಾರಿ ನ್ಯಾಯಬೆಲೆ ಅಂಗಡಿ ಟೈಟಲ್ ಅಡಿ ಚಿತ್ರವನ್ನು ಅತ್ಯಂತ ಅರ್ಥಪೂರ್ಣವಾಗಿ ಚಿತ್ರೀಕರಿಸಲಾಗಿದೆ. ಚಿತ್ರ ಸರ್ಕಾರದ ವಿರುದ್ಧ ಅಲ್ಲ, ಮಾಲೀಕರ ಪರವಾಗಿರುವ ಚಿತ್ರವಿದು ಎಂದರು. ಚಲನಚಿತ್ರದ ಪ್ರಚಾರ ಸಮಿತಿ ಅಧ್ಯಕ್ಷ ಚಂದ್ರು ಅವರು ಮಾತನಾಡಿ, ಸರ್ಕಾರಿ ನ್ಯಾಯಬೆಲೆ ಅಂಗಡಿ ಚಲನಚಿತ್ರ ಜುಲೈ ತಿಂಗಳಲ್ಲಿ ಬಿಡುಗಡೆಯಾಗಲಿದೆ. ಚಿತ್ರವನ್ನು ಬಿಡುಗಡೆಗೊಳಿಸುವ ಮುನ್ನ ಟ್ರೈಲರ್‌ಅಂತ ವಿವಿಐಪಿ ಗಳಿಗೆ ತೋರಿಸುವ ಹಾಗೆ ಚಿತ್ರ ವೀಕ್ಷಣೆಗೆ ವ್ಯವಸ್ಥೆ ಕಲ್ಪಿಸಲಾಗಿದೆ. ಚಲನಚಿತ್ರದ ವಿವಿಐಪಿಗಳು ನಮ್ಮೆಲ್ಲ ನ್ಯಾಯಬೆಲೆ ಅಂಗಡಿ ಮಾಲೀಕರೇ, ಈ ಹಿನ್ನೆಲೆಯಲ್ಲಿ ಅವರು ಮೊದಲು ಕುಟುಂಬದ ಸದಸ್ಯರೊಂದಿಗೆ ಕುಳಿತು ಚಿತ್ರವನ್ನು ವೀಕ್ಷಿಸಿ ದಾಖಲೆ ನಿರ್ಮಿಸಬೇಕು ಎಂದು ಕರೆನೀಡಿದರು. ಸಂಘದ ಜಿಲ್ಲಾಧ್ಯಕ್ಷ ಹಾಗೂ ರಾಜ್ಯ ಕಾರ್ಯಾಧ್ಯಕ್ಷ ಮೀನಳ್ಳಿ ತಾಯಣ್ಣ ಅವರು ಮಾತನಾಡಿ, ನ್ಯಾಯಬೆಲೆ ಅಂಗಡಿ ಮಾಲೀಕರು ಈ ಚಿತ್ರವನ್ನು ಸಾಕಷ್ಟು ಕಷ್ಟಪಟ್ಟು ಚಿತ್ರೀಕರಣ ಮಾಡಿದ್ದಾರೆ, ಇದರಲ್ಲಿ ನಮ್ಮ ರಾಜ್ಯಾಧ್ಯಕ್ಷರಾದ ಟಿ.ಕೃಷ್ಣಪ್ಪ ಅವರು ಅಭಿನಯಿಸಿದ್ದಾರೆ. ಇದು ನಮ್ಮ ಕಷ್ಟ ಸುಖಗಳ ಬಗ್ಗೆ ತಯಾರಿಸಿದ ಚಿತ್ರವಿದು. ಪ್ರತಿಯೊಬ್ಬ ಅಂಗಡಿ ಮಾಲೀಕರು 25ಕ್ಕೂ ಹೆಚ್ಚು ಟಿಕೆಟ್ ಗಳನ್ನು ಪಡೆದು ಜೂ.1 ರಂದು ನಿಗಧಿತ ಚಿತ್ರಮಂದಿರಗಳಲ್ಲಿ ಚಿತ್ರವನ್ನು ವೀಕ್ಷಿಸಿ ಪ್ರೋತ್ಸಾಹಿಸಬೇಕು.

ನಮ್ಮ ಮನೆ ಚಿತ್ರವಿದು, ನಾವೆಲ್ಲರೂ ಸಹಕಾರ ಮಾಡಬೇಕು ಎಂದು ಮನವಿ ಮಾಡಿದರು.ಈ ಸಂದರ್ಭದಲ್ಲಿ ಚಿತ್ರತಂಡದ ಪದ್ಮಾವತಿ, ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ವೆಂಕಟೇಶ್ ಹೆಗಡೆ, ರಾಜ್ಯ ಸಮಿತಿ ಸದಸ್ಯ ವೇಮಣ್ಣ, ಜಿಲ್ಲಾ ಉಪಾಧ್ಯಕ್ಷರಾದ ಹುಂಡೇಕರ್ ಪ್ರಕಾಶ್, ಹುಸೇನಪ್ಪ, ತಾಲೂಕು ಅಧ್ಯಕ್ಷರಾದ ಮಲ್ಲಿಕಾರ್ಜುನ ಕೊಡ್ಲಿ, ಜಗದೀಶ್ ಸ್ವಾಮಿ, ವೆಂಕಟೇಶ್, ಪಂಪಾಪತಿ, ಜಗನ್ನಾಥ ಗೌಡ್ರು, ಪಾಲಾಕ್ಷಿ ರೆಡ್ಡಿ, ಕೌಲ್ ಬಜಾರ್ ಮಾರುತಿ ಸೇರಿದಂತೆ ನ್ಯಾಯಬೆಲೆ ಅಂಗಡಿ ಮಾಲೀಕರು ಇತರರಿದ್ದರು.

# ವರ್ಗಾವಣೆಗೊಂಡ ಮುಖ್ಯಶಿಕ್ಷಕರಿಗೆ ಬೀಳ್ಕೊಡುಗೆ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಸಮೀಪದ ಜನತಾಪುರ ಸರಕಾರಿ ಹಿರಿಯ ಪ್ರಾಥಮಿಕ ಶಾಲಾ ಮುಖ್ಯಶಿಕ್ಷಕರಾಗಿ ಕರ್ತವ್ಯ ನಿರ್ವಹಿಸಿ ಭೊಪುರ ರಾಂಪುರ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಗೆ ವರ್ಗಾವಣೆಗೊಂಡ ಮುಖ್ಯ ಶಿಕ್ಷಕ ಗುರುಬಸ್ಸಪ್ಪ ಅವರಿಗೆ ಅಭಿನಂದನೆ ಹಾಗೂ ಬೀಳ್ಕೊಡುಗೆ ಕಾರ್ಯಕ್ರಮ ಶಾಲಾ ಕೊಠಡಿಯಲ್ಲಿ ಜರುಗಿತು.

ಪ್ರಭಾರ ಮುಖ್ಯ ಶಿಕ್ಷಕ ಮೌನೇಶ ವಿಶ್ವಕರ್ಮ ಮಾತನಾಡಿದ ಅವರು ಶಾಲೆಯ ಭೌತಿ ಸೌಲಭ್ಯಗಳ ಸುಧಾರಣೆ ಮತ್ತು ಕಲಿಕಾ ಪ್ರಗತಿಯಲ್ಲಿ ಮುಖ್ಯಶಿಕ್ಷಕರ ಪಾತ್ರ ಅಪಾರ. ಅವರ ಕ್ರಿಯಾ ಶೀಲತೆಯ ಜೊತೆಗೆ ದಕ್ಷತೆ ಮತ್ತು ಸಾಮರಸ್ಯ ಮನೋಭಾವದಿಂದ ಕರ್ತವ್ಯ ನಿರ್ವಹಿಸಿದಾಗ ಶೈಕ್ಷಣಿಕ ಅಭಿವೃದ್ಧಿ ಸಾಧ್ಯವಾಗುತ್ತದೆ. 14 ವರ್ಷ ಸೇವೆ ಸಲ್ಲಿಸಿ, ಮುಂದಿನ ವೃತ್ತಿ ಜೀವನ ಶುಭಮಯವಾಗಿರಲಿ ಎಂದು ಹೇಳಿದರು.

ಗುರುಬಸ್ಸಪ್ಪ ಮಾತನಾಡಿ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರು ತೆರದ ಮನಸ್ಸಿನಿಂದ, ಪರಸ್ಪರ ನಂಬಿಕೆ ಮತ್ತು ಗೌರವ ಭಾವದಿಂದ ಕಾರ್ಯನಿರ್ವಹಿಸಿದರೆ ಕಲಿಕೆಯ ಗುಣಮಟ್ಟ ಹೆಚ್ಚಸಬಹುದು ಎಂದರು.

ಸಹ ಶಿಕ್ಷಕ ರವಿಕುಮಾರ, ಎಸ್ಡಿಎಂಸಿ ಅಧ್ಯಕ್ಷ ಅಮರೇಗೌಡ, ನೀಲಪ್ಪ ಓಲೆಕಾರ ಸೇರಿದಂತೆ ಇತರರಿದ್ದರು.

# ಪ್ರಧಾನಮಂತ್ರಿ ಮತ್ಸ್ಯ ಸಂಪದ ಯೋಜನೆ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಮೇ.15– ಉತ್ತರ ಕನ್ನಡ ಜಿಲ್ಲೆಯ ಮೀನುಗಾರಿಕೆ ಇಲಾಖೆಯ ವತಿಯಿಂದ 2026–27 ನೇ ಸಾಲಿನ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ವಿವಿಧ ಘಟಕಗಳಿಗೆ ಸಹಾಯಧನಕ್ಕಾಗಿ ಜಿಲ್ಲೆಯ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಯಡಿ 50 ಟನ್ ಸಾಮರ್ಥ್ಯದ ಮಂಜುಗಡ್ಡೆ ಸ್ಥಾವರ ನಿರ್ಮಾಣ, ಅಕ್ವೇರಿಯಂ ಮತ್ತು ಅಲಂಕಾರಿಕ ಮೀನುಗಳ ಕಿಯೋಸ್ಕ್‌ಗಳು ಸೇರಿದಂತೆ ಮೀನು ಕಿಯೋಸ್ಕ್‌ಗಳ ನಿರ್ಮಾಣ, 10 ಟನ್ ಸಾಮರ್ಥ್ಯದ ಶಾಖ ನಿರೋಧಕ ವಾಹನ ಖರೀದಿಗೆ ಸಹಾಯಧನ, ಮಂಜುಗಡ್ಡೆ ಸ್ಥಾವರ ನವೀಕರಣಕ್ಕೆ ಸಹಾಯಧನ, ದ್ವಿಚಕ್ರ ವಾಹನಕ್ಕೆ ಮತ್ತು ಐಸ್ ಬಾಕ್ಸ್ ಖರೀದಿಗೆ ಸಹಾಯಧನ, ಆಳ ಸಮುದ್ರ ಮೀನುಗಾರಿಕೆ ದೋಣಿ ನಿರ್ಮಾಣಕ್ಕಾಗಿ ಸಹಾಯಧನ ಪಡೆಯಲು ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಶೇ.40 ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಮಹಿಳಾ ಫಲಾನುಭಾವಿಗಳಿಗೆ ಶೇ.60 ರಷ್ಟು ಸಹಾಯಧನ ನೀಡಲಾಗುತ್ತದೆ.

ಆಸಕ್ತ ಅರ್ಹ ಫಲಾನುಭವಿಗಳು ಮೇ.30 ರೊಳಗಾಗಿ ಸಂಬಂಧಪಟ್ಟ ತಾಲ್ಲೂಕು ಮಟ್ಟದ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸುವಂತೆ ಎಂದು ಕಾರವಾರ ಮೀನುಗಾರಿಕೆ ಉಪ ನಿರ್ದೇಶಕರುಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾಲ್ಕಿ ತಾಲೂಕಿನ ಗಂಗಾ ಕಲ್ಯಾಣ ಯೋಜನೆ ಫಲಾನುಭವಿಗಳಿಗೆ ಮೋಟಾರ್, ಪಂಪ್‌ಸೆಟ್ ವಿತರಣೆ ನೀರಾವರಿ ಸೌಲಭ್ಯ ವಿಸ್ತರಿಸಲು ಆದ್ಯತೆ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಮೇ.15:ರೈತರ ಆರ್ಥಿಕ ಪರಿಸ್ಥಿತಿ ಸುಧಾರಿಸಲು ನೀರಾವರಿ ಸೌಲಭ್ಯ ವಿಸ್ತರಿಸಲು ಆದ್ಯತೆ ನೀಡಲಾಗುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು. ಪಟ್ಟಣದಲ್ಲಿ ಗಂಗಾ ಕಲ್ಯಾಣ ಯೋಜನೆಯ ಫಲಾನುಭವಿಗಳಿಗೆ ಶುಕ್ರವಾರ ಮೋಟಾರ್ ಮತ್ತು ಪಂಪಸೆಟ್ ವಿತರಿಸಿ ಅವರು ಮಾತನಾಡಿದರು. ರಾಜ್ಯ ಸರಕಾರ ರೈತರ ಅಭಿವೃದ್ಧಿಗೆ ಹಾಗೂ ನೀರಾವರಿ ಸೌಲಭ್ಯ ವಿಸ್ತರಣೆಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ. ಗಂಗಾ ಕಲ್ಯಾಣ ಯೋಜನೆಯ ಮೂಲಕ ಸಣ್ಣ ರೈತರಿಗೆ ನೀರಿನ ಸೌಲಭ್ಯ ಒದಗಿಸಿ ಕೃಷಿ ಚಟುವಟಿಕೆಗಳಿಗೆ ಉತ್ತೇಜನ ನೀಡಲಾಗುತ್ತಿದೆ. ಫಲಾನುಭವಿಗಳು ಈ ಸೌಲಭ್ಯವನ್ನು ಪಡೆದು ಉತ್ತಮ ಕೃಷಿ ಪದ್ಧತಿ ಅಳವಡಿಸಿಕೊಳ್ಳಬೇಕು. ನೀರಾವರಿ ಸೌಲಭ್ಯವನ್ನು ಸಮರ್ಥವಾಗಿ ಬಳಸಿಕೊಂಡು ರೈತರು ವಿವಿಧ ಬೆಳೆಗಳನ್ನು ಬೆಳೆದು ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ನಿಗಮದ ಅಧಿಕಾರಿಗಳು, ಪ್ರಮುಖರು, ಫಲಾನುಭವಿಗಳು ಹಾಜರಿದ್ದರು.

## ವೈದ್ಯಕೀಯ ಶಿಕ್ಷಣ ಹರಾಜು ಖಂಡಿಸಿ ವಿದ್ಯಾರ್ಥಿಗಳ ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.15– ವೈದ್ಯಕೀಯ ಶಿಕ್ಷಣ ಹರಾಜು ನಿಲ್ಲಿಸಬೇಕು ಎಂದು ಒತ್ತಾಯಿಸಿ ಆಲ್ ಇಂಡಿಯಾ ಡೆಮಾಕ್ರಟಿಕ್ ಸ್ಟೂಡೆಂಟ್ಸ್ ಆರ್ಗನೈಸೇಷನ್ ಕಾರ್ಯಕರ್ತರು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನಾ ಪ್ರದರ್ಶನ ಮಾಡಿದರು.




ಈ ಸಂದರ್ಭದಲ್ಲಿ ಎಐಡಿಎಸ್‌ಓ ಜಿಲ್ಲಾ ಕೌನ್ಸಿಲ್ ಉಪಾಧ್ಯಕ್ಷ ಗೋವಿಂದ್ ಯಾಳವಾರ್ ಅವರು ಮಾತನಾಡಿ, ವೈದ್ಯಕೀಯ ಸೀಟಿಗಾಗಿ ಹಲವಾರು ವಿದ್ಯಾರ್ಥಿಗಳು ಲಕ್ಷಾಂತರ ದುಡ್ಡು ಸುರಿದು ವರ್ಷಗಟ್ಟಲೇ ಎಡೆಬಿಡದೆ ಹಗಲು ರಾತ್ರಿ ಕನಸು ಕಟ್ಟಿಕೊಂಡು ನೀಟ್ ಪರೀಕ್ಷೆಯ ತಯಾರಿ ನಡೆಸುತ್ತಾರೆ. ನೀಟ್ ಯುಜಿ ಪರೀಕ್ಷೆ ಪ್ರಶ್ನೆ ಪತ್ರಿಕೆ ಕಳೆದ ಮೂರು ವರ್ಷಗಳಲ್ಲಿ ಎರಡು ಬಾರಿ ಸೋರಿಕೆ ಆಗಿದೆ. ಇದು ಹಲವಾರು ಬಡ ವಿದ್ಯಾರ್ಥಿಗಳ ಆಸೆ ಕನಸುಗಳಿಗೆ ಕೊಡಲಿ ಪೆಟ್ಟು ಬಿದ್ದಂತಾಗಿದೆ. ಎನ್‌ಟಿಎ ಸಂಸ್ಥೆಯು ದೊಡ್ಡ ದೊಡ್ಡ ಕೋಚಿಂಗ್ ಮಾಫಿಯಾದ ಕೈಗೊಂಬೆಯಾಗಿ ದೊಡ್ಡ ದಂಧೆನಡೆಸುತ್ತಿದೆ. ದುಡ್ಡಿಗಾಗಿ ಲಕ್ಷಾಂತರ ವಿದ್ಯಾರ್ಥಿಗಳ ಆಸೆ ಕನಸುಗಳಿಗೆ ಮಣ್ಣೆರೆಚಿದೆ. ಎನ್ ಟಿ ಎ ಸಂಸ್ಥೆಯ ವಿರುದ್ಧ ಸರ್ಕಾರ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಜಿಲ್ಲಾ ಕೌನ್ಸಿಲ್ ಉಪಾಧ್ಯಕ್ಷೆ ಪ್ರೀತಿ ದೊಡ್ಡಮನಿ ಅವರು ಮಾತನಾಡಿ, ವೈದ್ಯಕೀಯ ಸೀಟ್ ಗೋಸ್ಕರ ಲಕ್ಷಾಂತರ ಬಡ ವಿದ್ಯಾರ್ಥಿಗಳು ಹಗಲು ರಾತ್ರಿ ಕಷ್ಟ ಪಟ್ಟು ತಯಾರಿ ನಡೆಸುತ್ತಾರೆ. ಇಂತಹ ವೈದ್ಯಕೀಯ ಶಿಕ್ಷಣದ ಕನಸು ಹೊತ್ತವರ ಆಶೋತ್ತರಗಳನ್ನು ಎನ್ ಟಿಎ ಸಂಸ್ಥೆಯು ಅತಿ ಹೆಚ್ಚು ಹಣ ನೀಡುವವರಿಗೆ ಹರಾಜು ಹಾಕಿದೆ. ಕೇವಲ ಕೆಲವರ ಲಾಭಕ್ಕಾಗಿ ಸಾರ್ವಜನಿಕ ಶಿಕ್ಷಣದ ವ್ಯವಸ್ಥೆಯನ್ನು ವ್ಯವಸ್ಥಿತವಾಗಿ ನಾಶಪಡಿಸುತ್ತಿರುವುದು ಸ್ಪಷ್ಟವಾಗಿ ಗೋಚರಿಸುತ್ತಿದೆ ಎಂದು ಖಂಡಿಸಿದರು.

ನಮ್ಮ ವಿದ್ಯಾರ್ಥಿಗಳ ಭವಿಷ್ಯದ ಅಡಿಪಾಯವನ್ನೇ ಭ್ರಷ್ಟಾಚಾರ ಮತ್ತು ಆಡಳಿತಾತ್ಮಕ ನಿರ್ಲಕ್ಷ್ಯಕ್ಕೆ ಬಲಿ ನೀಡಲಾಗುತ್ತಿದೆ. ಶಿಕ್ಷಣ ವ್ಯವಸ್ಥೆಯನ್ನು ಮಾರುಕಟ್ಟೆಯನ್ನಾಗಿ ಮಾಡಿಕೊಂಡಿರುವವರಿಂದ ಇಂಥ ಸಮಸ್ಯೆಗಳು ಪದೇ ಪದೇ ಹಲವು ಕೇಂದ್ರೀಕೃತ ಪರೀಕ್ಷೆಗಳಲ್ಲಿ ಮರುಕಳಿಸುತ್ತವೆ. ಇದು ವಿದ್ಯಾರ್ಥಿಗಳಲ್ಲಿ ತೀವ್ರ ಆತಂಕ ಹತಾಶೆ ಮೂಡಿಸಿದೆ.

ಸರ್ಕಾರ ಕೂಡಲೇ ಎನ್‌ಟಿಎ ಸಂಸ್ಥೆಯನ್ನು ವಜಾಗೊಳಿಸಿ ಕಠಿಣ ಶಿಕ್ಷೆ ನೀಡಬೇಕು. ಕೂಡಲೇ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಬೃಹತ್ ಪ್ರತಿಭಟನೆಗೆ ವಿದ್ಯಾರ್ಥಿಗಳು ಸಜ್ಜಾಗಬೇಕು ಎಂದು ಅವರು ಕರೆ ನೀಡಿದರು. ಪ್ರತಿಭಟನೆಯಲ್ಲಿ ವೆಂಕಟೇಶ್ ದೇವದುರ್ಗ, ಜಿಲ್ಲಾ ಖಜಾಂಚಿ ಸ್ಫೂರ್ತಿ ಗುರಜಾಲಕರ್, ಜಿಲ್ಲಾ ಸಮಿತಿ ಸದಸ್ಯ ಯುವರಾಜ್ ರಾಠೋಡ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಬೀದಿ ವ್ಯಾಪಾರಿಗಳು ಪಿ.ಎಂ.ಸ್ವ-ನಿಧಿ ಯೋಜನೆಯಡಿ ಸಾಲ ಸೌಲಭ್ಯಕ್ಕೆ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 15 : ಜಿಲ್ಲೆಯ ಬೀದಿ ವ್ಯಾಪಾರಿಗಳು ಪಿ.ಎಂ.ಸ್ವ–ನಿಧಿ ಯೋಜನೆಯಡಿ ಸಾಲ ಸೌಲಭ್ಯಕ್ಕೆ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಕೌಶಲ್ಯ ಮಿಷನ್ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಹಾಗೂ ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ ಅವರು ತಿಳಿಸಿದ್ದಾರೆ.

ಕೋವಿಡ್–19ರ ಸಂದರ್ಭದಲ್ಲಿ ಪ್ರಧಾನ ಮಂತ್ರಿಗಳ ಆತ್ಮ ನಿರ್ಭರ್ ನಿಧಿ ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳಿಗೆ ವ್ಯಾಪಾರವನ್ನು ವಿಸ್ತರಿಸಿಕೊಳ್ಳಲು ಬ್ಯಾಂಕುಗಳ ಮೂಲಕ ಕಡಿಮೆ ಬಡ್ಡಿ ದರದಲ್ಲಿ ಕಿರು ಸಾಲ ಸೌಲಭ್ಯವನ್ನು ಕಲ್ಪಿಸಿಕೊಡಲಾಗಿದ್ದು, ಈ ಸೌಲಭ್ಯವನ್ನು ಜಿಲ್ಲೆಯ ಎಲ್ಲಾ ನಗರ ಪ್ರದೇಶಗಳು ಹಾಗೂ ಸೈದಾಪುರ ಮತ್ತು ಗೋಗಿ (ಪಿ) ದಲ್ಲಿನ ಬೀದಿ ಬದಿ ವ್ಯಾಪಾರಿಗಳು ತಮ್ಮ ವ್ಯಾಪಾರ ವಿಸ್ತರಣೆಗಾಗಿ ಬ್ಯಾಂಕುಗಳ ಮುಖಾಂತರ ಸಾಲ ಸೌಲಭ್ಯವನ್ನು ಪಡೆದುಕೊಳ್ಳಬೇಕು.

ಪ್ರಧಾನ ಮಂತ್ರಿ ಆತ್ಮ ನಿರ್ಭರ್ ನಿಧಿ ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳ ಆರ್ಥಿಕ ಸುಭದ್ರತೆಗಾಗಿ 3 ಕಂತುಗಳಲ್ಲಿ ಸಾಲ ಸೌಲಭ್ಯವನ್ನು ಕಲ್ಪಿಸಲಾಗುವುದು. ಮೊದಲ ಕಂತಿನಲ್ಲಿ 15,000 ರೂ.ಗಳ ರಷ್ಟು ಸಾಲ ನೀಡಿ, 12 ತಿಂಗಳ ಅವಧಿಯಲ್ಲಿ ಸಾಲ ಮರು ಪಾವತಿ ಮಾಡಿದಲ್ಲಿ 25,000 ರೂ.ಗಳ ರಷ್ಟು ಸಾಲ ನೀಡಲಾಗುವುದು, ಈ ಸಾಲವನ್ನು 18 ತಿಂಗಳ ಅವಧಿಯಲ್ಲಿ ಮರು ಪಾವತಿ ಮಾಡಿದಲ್ಲಿ 50,000 ರೂ.ಗಳ ರಷ್ಟು ಸಾಲ ಸೌಲಭ್ಯವನ್ನು ನೀಡಲಾಗುವುದು. ಜಿಲ್ಲೆಯ ಎಲ್ಲಾ ಬೀದಿ ವ್ಯಾಪಾರಿಗಳು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅರ್ಜಿ ಸಲ್ಲಿಸುವುದರೊಂದಿಗೆ ಸಾಲ ಸೌಲಭ್ಯವನ್ನು ಪಡೆದುಕೊಳ್ಳಬೇಕು. ಈಗಾಗಲೇ ಸಾಲಕ್ಕಾಗಿ ಅರ್ಜಿ ಸಲ್ಲಿಸಿದ ಫಲಾನುಭವಿಗಳು ತಾವು ಅರ್ಜಿ ಸಲ್ಲಿಸಿದ ಬ್ಯಾಂಕುಗಳಿಗೆ ಭೇಟಿ ನೀಡಿ ಅಗತ್ಯ ದಾಖಲಾತಿಗಳನ್ನು ನೀಡಿ ಸಾಲ ಪಡೆದುಕೊಳ್ಳಬೇಕು. ಅದರ ಜೊತೆಗೆ ಡಿಜಿಟಲ್ ವಹಿವಾಟಿಗಾಗಿ ಕ್ಯೂಆರ್ ಕೋಡ್ ಮಾಡಿಸಿಕೊಳ್ಳಬೇಕು. ಹಾಗೂ ನಗರ ಸ್ಥಳೀಯ ಸಂಸ್ಥೆಗಳಿಂದ ಕೈಗೊಳ್ಳಲಾಗುವ ಸಮೀಕ್ಷೆಗೊಳಗಾಗಿ ಸಾಮಾಜಿಕ ಭದ್ರತಾ ಯೋಜನೆಗಳ ಸೌಲಭ್ಯವನ್ನು ಪಡೆದುಕೊಳ್ಳಬೇಕು. ಮತ್ತು ಜಿಲ್ಲೆಯ ಎಲ್ಲಾ ಬ್ಯಾಂಕಿನ ವ್ಯವಸ್ಥಾಪಕರುಗಳು ಸದರಿ ಯೋಜನೆಯಡಿ ಅರ್ಜಿ ಸಲ್ಲಿಸಿದ ಫಲಾನುಭವಿಗಳಿಗೆ ಯಾವುದೇ ವಿಳಂಭವಿಲ್ಲದೆ ಸಾಲ ಸೌಲಭ್ಯ ಕಲ್ಪಿಸಿಕೊಟ್ಟು ಯೋಜನೆಯ ಪ್ರಗತಿಗೆ ಸಹಕರಿಸಬೇಕು. ಪಿಎಂ ಸ್ವ–ನಿಧಿ ಯೋಜನೆಯಡಿ ಸಾಲ ಸೌಲಭ್ಯ ಪಡೆದುಕೊಂಡ ಬೀದಿ ವ್ಯಾಪಾರಿಗಳು ಸ್ವ–ನಿಧಿ ಸಮೃದ್ಧಿಯಡಿ ಸಮೀಕ್ಷೆಗೆ ಒಳಗಾಗಿ ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್–ಧನ್ ಯೋಜನೆಯಡಿ ಹೆಸರು ನೋಂದಾಯಿಸಿಕೊಳ್ಳುವುದರ ಮುಖಾಂತರ ಮಾಸಿಕ ಪಿಂಚಣಿ ಸೌಲಭ್ಯವನ್ನು ಪಡೆದುಕೊಳ್ಳಬೇಕು. ಶ್ರಮಯೋಗಿ ಮಾನ್–ಧನ್ ಯೋಜನೆಯ ಹೆಚ್ಚಿನ ಮಾಹಿತಿಗಾಗಿ ಯಾದಗಿರಿ ಜಿಲ್ಲಾ ಕಾರ್ಮಿಕ ಇಲಾಖೆ ಹಾಗೂ ಆಯಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಮುದಾಯ ಸಂಘಟನಾಧಿಕಾರಿ, ಸಮುದಾಯ ಸಂಘಟಕರನ್ನು ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಂಕಾಂ ಪದವೀಧರ ಯುವಕನ ಕಾಡು ಕೃಷಿ ಕ್ರಾಂತಿ ಸ್ವಾವಲಂಬಿ ಬದುಕಿಗೆ ಮಾದರಿಯಾದ ಮಂಜುನಾಥ ಕುರಿ

ವಿಶೇಷ ವರದಿ: ವೀರಯ್ಯ ವಿ ಹಿರೇಮಠ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಪದವಿ ಮುಗಿದ ಕೂಡಲೇ ನೌಕರಿ ಹುಡುಕುವ ಯುವಕರ ಮಧ್ಯೆ, ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲೂಕಿನ ಬಳೂಟಗಿ ಗ್ರಾಮದ ಎಂಕಾಂ ಪದವೀಧರ ಮಂಜುನಾಥ ಅಂದಪ್ಪ ಕುರಿ ಅವರು ಕಾಡು ಕೃಷಿ ಮೂಲಕ ಸ್ವಾವಲಂಬಿ ಬದುಕು ಕಟ್ಟಿ–ಕೊಂಡು ಎಲ್ಲರ ಗಮನ ಸೆಳೆದಿದ್ದಾರೆ.



ಮೊದಲು ನಾಡ ಕಚೇರಿಯಲ್ಲಿ ಕಂಪ್ಯೂಟರ್ ಆಪರೇಟರ್ ಆಗಿ ಕೆಲಸ ನಿರ್ವಹಿಸುತ್ತಿದ್ದ ಮಂಜುನಾಥ ಅವರು, ಕೃಷಿಯ ಮೇಲಿನ ಆಸಕ್ತಿಯಿಂದ 2016ರಲ್ಲಿ ಪೂರ್ಣ ಪ್ರಮಾಣದಲ್ಲಿ ಕೃಷಿಗೆ ಇಳಿದರು. ಅರಣ್ಯ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ತಂದೆ ಅಂದಪ್ಪ ಕುರಿ ಅವರ ಪ್ರೋತ್ಸಾಹ ಇವರಿಗೆ ದಾರಿದೀಪವಾಯಿತು. ಕಾಡು ಕೃಷಿಯಲ್ಲಿ ಯಶೋಗಾಥೆ: ಒಟ್ಟು 4 ಎಕರೆ ಸಾಗುವಳಿ ಭೂಮಿಯಲ್ಲಿ 2 ಎಕರೆ ಸಾಂಪ್ರದಾಯಿಕ ಕೃಷಿ ಮಾಡುತ್ತಾ, ಉಳಿದ 2 ಎಕರೆಯಲ್ಲಿ ಕಾಡು ಕೃಷಿ ಮಾದರಿ ಅಳವಡಿಸಿಕೊಂಡಿದ್ದಾರೆ. ಮೆತಗಲ್ ಹೈವೇ ಪಕ್ಕದ ಈ ಜಮೀನಿನಲ್ಲಿ 180 ಮಾವು, 200 ನೇರಳೆ, 200 ಹೆಬ್ಬೇವು, 50 ಮಹಾಗನಿ, 40 ಲಿಂಬೆ, 20 ತೆಂಗು, 20 ಗೋಡಂಬಿ ಗಿಡಗಳನ್ನು ಹನಿ ನೀರಾವರಿ ಮೂಲಕ ಬೆಳೆಸಿದ್ದಾರೆ. ಮಣ್ಣಿನ ಸವಕಳಿ ತಡೆಗೆ ಜಮೀನಿನ ಸುತ್ತ ರಕ್ಕಸಬಳ್ಳಿಯ ಜೀವಂತ ಬೇಲಿ ನಿರ್ಮಿಸಿದ್ದಾರೆ.

ಸಂಪೂರ್ಣ ಸಾವಯವ ಪದ್ಧತಿ ಅನುಸರಿಸುವ ಇವರು ಜೀವಾಮೃತ, ಎರೆಹುಳು ಗೊಬ್ಬರ, ಹಸಿರೆಲೆ ಗೊಬ್ಬರ ಬಳಸುತ್ತಾರೆ. ಕಳೆ ನಿರ್ವಹಣೆಗೆ ಮಿನಿ ಟ್ರ್ಯಾಕ್ಟರ್ ಬಳಕೆ ಮಾಡುತ್ತಿದ್ದಾರೆ. ಪ್ರಸ್ತುತ ಮಾವು, ನೇರಳೆ, ಗೋಡಂಬಿ ಫಲ ನೀಡುತ್ತಿದ್ದು, ಸ್ಥಳೀಯ ಮಾರುಕಟ್ಟೆಯಲ್ಲಿ ನೇರವಾಗಿ ಮಾರಾಟ ಮಾಡುವ ಮೂಲಕ ವರ್ಷಕ್ಕೆ 5–6 ಲಕ್ಷ ರೂ. ಆದಾಯ ಗಳಿಸುತ್ತಿದ್ದಾರೆ.

ಶ್ರೀ ಅಭಿನವ ನರ್ಸರಿ – ರೈತರಿಂದ ರೈತರಿಗೆ: ಕೇವಲ ಕೃಷಿಕನಾಗಿ ಉಳಿಯದೆ, ಮಂಜುನಾಥ ಅವರು 'ಶ್ರೀ ಅಭಿನವ ನರ್ಸರಿ' ಸ್ಥಾಪಿಸಿ ಮಾವು, ಸಪೋಟ, ತೆಂಗು, ನೇರಳೆ, ಹೆಬ್ಬೇವು, ಲಿಂಬೆ, ಗೋಡಂಬಿ, ನುಗ್ಗೆ, ದಾಳಿಂಬೆ ಸೇರಿದಂತೆ ಉತ್ತಮ ಗುಣಮಟ್ಟದ ತೋಟಗಾರಿಕಾ ಸಸಿಗಳನ್ನು ರೈತರಿಗೆ ಒದಗಿಸುತ್ತಿದ್ದಾರೆ. ಸಸಿ ವಿತರಣೆಯ ಜೊತೆಗೆ ಸಂಪೂರ್ಣ ತಾಂತ್ರಿಕ ಮಾರ್ಗದರ್ಶನ ನೀಡಿ 'ರೈತ ವಿಜ್ಞಾನಿ' ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ಯುವ ರೈತ ಮಂಜುನಾಥ ಕುರಿ ಅವರ ಮಾತು:

"ಪದವಿ ಎನ್ನುವುದು ನಮ್ಮ ಜ್ಞಾನಕ್ಕಾಗಿ, ನೌಕರಿಯೇ ಮುಖ್ಯವಲ್ಲ. ಉದ್ಯೋಗಿಯಾಗುವುದಕ್ಕಿಂತ ಉದ್ಯಮಿಯಾದರೆ ನಾಲ್ಕಾರು ಜನರಿಗೆ ಕೆಲಸ ನೀಡಬಹುದು. ನನ್ನ ಕೃಷಿ ಜೀವನ ನನಗೆ ತೃಪ್ತಿ ನೀಡಿದೆ. ಸಾಂಪ್ರದಾಯಿಕ ಕೃಷಿಯನ್ನು ಕಡಿಮೆ ಮಾಡಿ ತೋಟಗಾರಿಕೆ ಮತ್ತು ಅರಣ್ಯ ಕೃಷಿ ಮಾಡಿದಾಗ ರೈತರು ಸುಸ್ಥಿರ ಆದಾಯ ಪಡೆಯಬಹುದು. ಇನ್ನೊಬ್ಬರ ಕೈ ಕೆಳಗೆ ಕೆಲಸ ಮಾಡುವುದಕ್ಕಿಂತ ಸ್ವಯಂ ಕೃಷಿ ಮಾಡುವುದು ಉತ್ತಮ."

ಕೃಷಿಯಲ್ಲಿ ಹೊಸತನ ಮತ್ತು ಪ್ರಯೋಗಶೀಲತೆಯನ್ನು ಮೈಗೂಡಿಸಿಕೊಂಡರೆ ಯಶಸ್ಸು ಖಚಿತ ಎಂಬುದಕ್ಕೆ ಮಂಜುನಾಥ ಅವರ ಸಾಧನೆ ಸಾಕ್ಷಿಯಾಗಿದೆ. ಇವರ ಮಾದರಿ ತೋಟ ವೀಕ್ಷಿಸಲು ಸುತ್ತಮುತ್ತಲಿನ ಗ್ರಾಮಗಳ ರೈತರು ಹಾಗೂ ಕೃಷಿ ಆಸಕ್ತರು ನಿತ್ಯ ಭೇಟಿ ನೀಡುತ್ತಿದ್ದಾರೆ.

## ನೀಡಿದ ಗುರಿಗೆ ಅನುಸಾರ ಕಾರ್ಮಿಕರಿಗೆ ಕೆಲಸ ಕೊಡಿ:ಯೋಜನಾ ನಿರ್ದೇಶಕ ದೇವರಮನಿ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ :15; ಬೇಸಿಗೆಯಲ್ಲಿ ಗ್ರಾಮೀಣ ಪ್ರದೇಶದ ರೈತರ ಕೃಷಿ ಚಟುವಟಿ ಕಡಿಮೆಯಾಗಿ, ಕೃಷಿ ಕೂಲಿಕಾರರಿಗೆ ಕೆಲಸ ಸಿಗದೆ, ತಮ್ಮ ಕುಟುಂಬ ನಿರ್ವಹಣೆ ಮಾಡಲು ಕೂಲಿ ಕೆಲಸಕ್ಕಾಗಿ ದೂರದ ನಗರಗಳಿಗೆ ವಲಸೆ ಹೋಗುವುದನ್ನು ತಡೆಯಲು ಏಪ್ರಿಲ್ ತಿಂಗಳಲ್ಲಿ ಹೆಚ್ಚು ಮಾನವ ದಿನ ಸೃಜನೆ ಮಾಡಲು ಪ್ರತಿ ಗ್ರಾಮ ಪಂಚಾಯಿತಿಗೆ ನೀಡಿದ ಗುರಿಗೆ ಅನುಸಾರ ಕೂಲಿಕಾರರಿಗೆ ಕೆಲಸ ಕೊಡಿ ಎಂದು ಯಾದಗಿರಿ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಶ್ರೀ ಸಿಬಿ ದೇವರಮನಿ ಅವರು ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು. ಅವರು ಮೇ.15ರಂದು ಯಾದಗಿರಿ ತಾಲೂಕಿನ ಮುಂಡರಗಿ, ರಾಮಸಮುದ್ರ ಗ್ರಾಮದಲ್ಲಿ ಮನರೇಗಾ ಯೋಜನೆಯಡಿ ಪ್ರಗತಿಯಲ್ಲಿದ್ದ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ, ಕಾಮಗಾರಿ ಪ್ರಗತಿ, ಗುಣಮಟ್ಟ ಹಾಗೂ ಭೌತಿಕ ಸ್ಥಿತಿ ವೀಕ್ಷಿಸಿ, ಕಾಮಗಾರಿಯಲ್ಲಿ ಕೆಲಸ ಮಾಡುತ್ತಿದ್ದ ಕೂಲಿಕಾರ್ಮಿಕರ ಸಮಸ್ಯೆಗಳನ್ನು ಆಲಿಸಿ, ಮಾತನಾಡಿದರು.

ಗ್ರಾಮ ಪಂಚಾಯಿತಿಗಳಲ್ಲಿ ಹಿಂದಿನ ವರ್ಷದಲ್ಲಿ ನರೇಗಾ ಯೋಜನೆಯಡಿ ಅನುಷ್ಟಾನಗೊಳಿಸಿ ಅಪೂರ್ಣ ಮಾಡಿದ ಕಾಮಗಾರಿಗಳಲ್ಲಿ ಬಾಕಿ ಉಳಿದ ಕೂಲಿ ಹಣಕ್ಕೆ ಲೆಕ್ಕ ಹಾಕಿ ಕಾರ್ಮಿಕರಿಗೆ ಕೆಲಸ ಕೊಡಬೇಕು. ನರೇಗಾ ಯೋಜನೆಯಡಿ ಕೆಲಸ ಇಲ್ಲ ಎಂದು ಹೇಳಬೇಡಿ, ಕೆಲಸಕ್ಕಾಗಿ ಬೇಡಿಕೆ ಸಲ್ಲಿಸುವ ಕೂಲಿ ಕಾರ್ಮಿಕರಿಗೆ ಕೆಲಸ ಕೊಡಿ ಎಂದು ಸೂಚಿಸಿದರು.

ಗ್ರಾಮೀಣ ಪ್ರದೇಶದ ದುಡಿಯುವ ಕೈಗಳಿಗೆ ಕೂಲಿ ಕೆಲಸ ಕೊಡುವುದರ ಜತೆಗೆ ನೈಸರ್ಗಿಕ ಸಂಪನ್ಮೂಲ ಸಂರಕ್ಷಿಸುವ ಬಹುಕಾಲ ಬಾಳಿಕೆ ಬರುವ ಗ್ರಾಮೀಣ ಆಸ್ತಿ ಸೃಜನೆ ಮಾಡುವುದು ನರೇಗಾ ಯೋಜನೆ ಮೂಲ ಉದ್ದೇಶ ಎಂದು ತಿಳಿಸಿದರು.

ನರೇಗಾ ಯೋಜನೆಯಡಿ ಕೆಲಸ ಮಾಡಿದ ಕೂಲಿಕಾರರ ದಿನದ ಕೂಲಿ ಹಣ ನೇರವಾಗಿ ಅವರ ಆಧಾರ ಸಂಖ್ಯೆ ಲಿಂಕ್ ಮಾಡಿದ ಬ್ಯಾಂಕ್ ಖಾತೆಗೆ ಜಮೆಯಾಗುತ್ತದೆ. ಜಾಬ್ ಕಾಡ9 ಪಡೆದ ಪ್ರತಿಯೊಬ್ಬ ಫಲಾನುಭವಿಗಳು ತಪ್ಪದೇ ತಮ್ಮ ಜಾಬ್ ಕಾಡ9ಗೆ ಇ–ಕೆವೈಸಿ ಮಾಡಿಕೊಳ್ಳುವುದು ಕಡ್ಡಾಯವಾಗಿದೆ ಎಂದರು.

ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಜಾಬ್ ಕಾಡ9ಗೆ ಇ–ಕೆವೈಸಿ ಮಾಡಿಸುವುದು ಸರಕಾರ ಕಡ್ಡಾಯಗೊಳಿಸಿದೆ. ಇ–ಕೆವೈಸಿ ಆದ ನಂತರ ಆಧಾರ್ ಆಧಾರಿತ ವ್ಯವಸ್ಥೆ ಮೂಲಕ ಕೂಲಿ ಹಣ ನೇರವಾಗಿ ಕಾರ್ಮಿಕರ ಬ್ಯಾಂಕ್ ಖಾತೆಗೆ ಜಮೆ ಆಗುತ್ತದೆ. ಇ–ಕೆವೈಸಿ ಮಾಡಿಸದ ಕಾರ್ಮಿಕರ ಜಾಬ್ ಕಾಡ9ಗಳನ್ನು ರದ್ದುಪಡಿಸಲಾಗುತ್ತದೆ ಎಂದು ಮಾಹಿತಿ ನೀಡಿದರು.

ಈ ವೇಳೆ ಮುಂಡರಗಿ, ರಾಮಸಮುದ್ರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಪಂಚಾಯತ ನರೇಗಾ ಯೋಜನೆ ಎಡಿಪಿಸಿ ಬನ್ನಪ್ಪ ಬೈಟಪುಲ್ಲಿ, ನರೇಗಾ ಯೋಜನೆ ಜಿಲ್ಲಾ ಐಇಸಿ ಸಂಯೋಜಕ ಪರಶುರಾಮ ಜೀನಕೇರಾ, ಗ್ರಾಮ ಪಂಚಾಯತಿ ಸಿಬ್ಬಂದಿ, ಕಾಯಕ ಬಂದುಗಳು ಹಾಗೂ ನರೇಗಾ ಕೂಲಿಕಾರ್ಮಿಕರು ಇದ್ದರು.

## 197ನೇ ದಿನದ ಬಲ್ಡೋಟ ತೊಲಗಿಸಿ ಹೋರಾಟಕ್ಕೆ ಗವಿಶ್ರೀ ನಗರದ ನಾಗರಿಕರಿಂದ ಬೆಂಬಲ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ




ನಗರಸಭೆ ಮುಂದೆ ನಡೆಯುತ್ತಿರುವ 197ನೇ ದಿನದ ಧರಣಿಗೆ ಗವಿಶ್ರೀನಗರ ನಾಗರಿಕ ಅಭಿವೃದ್ಧಿ ಸಮಿತಿಯಿಂದ ಧರಣಿಗೆ ಬಂಬಲ ನೀಡಿದರು. ಸಮಿತಿ ಮುಖಂಡ ಎಚ್ಚರೇಶ ಹೊಸಮನಿ ಇವರು ಮಾತನಾಡಿ, ಅಭಿವೃದ್ಧಿ ಹೆಸರಿನಲ್ಲಿ ಕಾರ್ಖಾನೆ ಸ್ಥಾಪನೆ ಮಾಡಿದರೆ ಮೊದಲು ಪರಿಸರ ಹಾಳಾಗದಂತೆ ನೋಡಿಕೊಂಡರಷ್ಟೇ ಆರೋಗ್ಯ ಸುರಕ್ಷತೆ ಇರುತ್ತದೆ. ಬದಲಾಗಿ ಇಲ್ಲಿ ಈಗೇನಾಗುತ್ತಿದೆ ಎನ್ನುವುದನ್ನು ನಾವು ಅನುಭವಿಸುತ್ತಿರುವ ಎಂ.ಎಸ್.ಪಿ.ಎಲ್ ಪೆಲ್ಲೆಟ್ ಘಟಕ ಅದರ ಕಂದು ಧೂಳು, ಹಾರುಬೂದಿ, ಹೊಗೆಯಿಂದ ಹೊರ ಚೆಲ್ಲುವುದರಿಂದ ಗವಿಶ್ರೀನಗರ, ಡಾಲರ್ಸ್ ಕಾಲೊನಿ, ಕವಲೂರು ಬಡಾವಣೆ, ಶ್ರೀಗವಿಮಠ ಮುಂತಾದ ಬಡಾವಣೆಗಳು ಅತೀವ ಮಾಲಿನ್ಯಕ್ಕೆ ಒಳಗಾಗಿ ಜನರು ಆರೋಗ್ಯದ ದುಷ್ಪರಿಣಾಮ ಎದುರಿಸುತ್ತಿದ್ದಾರೆ. ಅಭಿವೃದ್ಧಿ ಅಂದರೆ ಅದು ಆರೋಗ್ಯ, ಜೀವ ರಕ್ಷಣೆಯೊಂದಿಗೆ ಸರ್ವೋತೊಮುಖ ಅಭಿವೃದ್ಧಿಗೆ ಆದ್ಯತೆ ಇರಬೇಕು. ನಗರಕ್ಕಷ್ಟೇ ಈ ಸಮಸ್ಯೆ ಸೀಮಿತವಾಗಿಲ್ಲ. 22 ಹಳ್ಳಿಗಳು ಈ ಸಮಸ್ಯೆಯಿಂದ ವಿಲವಿಲ ಒದ್ದಾಡುತ್ತಿವೆ. ನಗರದ ಜನತೆ ಈ ವಿಷಯದಲ್ಲಿ ಮೌನವಹಿಸಿದರೆ ಭವಿಷ್ಯದಲ್ಲಿ ಕೊಪ್ಪಳ ಅಪಾಯಕ್ಕೆ ಸಿಲುಕುತ್ತದೆ. ಬಾಧಿತರಾದ ಈ ಭಾಗದ ಜನರು ಅಷ್ಟೇ ಅಲ್ಲದೆ ದೆಹಲಿಯಿಂದ ಗುಣ ಪಾಠ ಕಲಿತು ಹೋರಾಡೋಣ ಎಂದರು.

ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ಇದರ ಜಂಟಿ ಕ್ರಿಯಾ ವೇದಿಕೆ ಪ್ರಧಾನ ಸಂಚಾಲಕ ಅಲ್ಲಮಪ್ರಭು ಬೆಟ್ಟದೂರು ಹೇಳಿಕೆ ನೀಡಿ, ದಿ:18.05.2026ರಂದು ಸೋಮವಾರ ಹೋರಾಟ 200 ದಿನದಲ್ಲಿ ಮಹಾಸಭೆ ಏರ್ಪಡಿಸಿದೆ. ಅಂದು ಧರಣಿ ವೇದಿಕೆಯಲ್ಲಿ ಬಹಿರಂಗ ಸಭೆ ನಡೆಸಲಾಗುತ್ತದೆ. ಆರ್ಥಿಕ ತಜ್ಞ, ಹಂಪಿ ವಿವಿ ನಿವೃತ್ತ ಪ್ರಾಧ್ಯಾಪಕ ಟಿ.ಆರ್.ಚಂದ್ರಶೇಖರ, ನಿರ್ಮಲ ತುಂಗಭದ್ರಾ ಆಂದೋಲನದ ಗಂಗಾವತಿ ನಿವಾಸಿ ಡಾ. ಶಿವಕುಮಾರ ಮಾಲಿಪಾಟೀಲ್ ಅತಿಥಿಗಳಾಗಿ ಆಗಮಿಸಿ ಹೋರಾಟ ಬೆಂಬಲಿಸಿ ಮಾತನಾಡುತ್ತಾರೆ. ಕೊಪ್ಪಳ ನಗರ ಮತ್ತು ಕಾರ್ಖಾನೆ ಬಾಧಿತ ಗ್ರಾಮಗಳ ರೈತರು, ಗ್ರಾಮೀಣ ಜನರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ಈ ವಿಶೇಷ ಧರಣಿ ಹೋರಾಟದಲ್ಲಿ ಭಾಗವಹಿಸಬೇಕೆಂದು ವೇದಿಕೆಯಲ್ಲಿ ಮನವಿ ಮಾಡಿದರು. ಕೊಪ್ಪಳ ಭಾಗ್ಯನಗರದ ಒಂದೂವರೆ ಲಕ್ಷ ಜನರ ಆರೋಗ್ಯ ಹಾನಿ ಮಾಡಲು ಬರುತ್ತಿರುವ ಬಲ್ಡೋಟ ಕಾರ್ಖಾನೆ ಕುರಿತು ಗವಿಶ್ರೀಗಳು ಧರ್ಮಾದೇಶ ಮಾಡಿರುವಂತೆ ವಿಸ್ತರಣೆಯನ್ನು ತಡೆದ ಆದೇಶ ಪತ್ರವನ್ನು ಜನಪ್ರತಿನಿಧಿಗಳು ತರಬೇಕು. ಜಿಲ್ಲಾ ಕೇಂದ್ರಕ್ಕೆ ಹೊಂದಿಕೊಂಡು 2011ರಿಂದ ಬಲ್ಡೋಟ ಎಂಎಸ್ಪಿಎಲ್ ಪೆಲ್ಲೆಟ್ ಘಟಕದಿಂದ ನಗರದ ಅರ್ಧ ವಾರ್ಡಗಳು ಮಾಲಿನ್ಯ ಬಾಧಿವಾಗುತ್ತಿದ್ದು, ಆರೋಗ್ಯದ ದುಷ್ಪರಿಣಾಮ ತಡೆಯಲು ಈ ಘಟಕ ಬಂದ್ ಮಾಡಿ, ನಗರದ ಜನರ ಆರೋಗ್ಯ ಉಳಿಸಬೇಕು. ಬಲ್ಡೋಟ ಕಂಪನಿಯು ಬಸಾಪುರ ಕೆರೆಯನ್ನು ಅನಧಿಕೃತವಾಗಿ ಮಂಜೂರಿ ಪಡೆದಿದ್ದು ಸುತ್ತಲಿನ ಸಾವಿರಾರು ಜಾನುವಾರು ನೀರು ಕುಡಿಯಲು ಕಾಂಪೌಂಡ್ ತೆರವು ಮಾಡಿ ಅವಕಾಶ ಮಾಡಿಕೊಡಬೇಕು. ತುಂಗಭದ್ರಾ ನೀರು ವಿಷಗೊಳಿಸುವ ಮಾಲಿನ್ಯಕಾರಿ ಕಾರ್ಖಾನೆಗಳನ್ನು ಮುಚ್ಚಬೇಕು. ಹಿರೇಬಗನಾಳ, ಅಲ್ಲಾನಗರ ಪಕ್ಕದ ಸ್ಪಾಂಜ್ ಐರನ್ ಕಾರ್ಖಾನೆಗಳನ್ನು ಕೇಂದ್ರ ಪರಿಸರ ಇಲಾಖೆ ವರದಿಯ ಶಿಫಾರಸಿನಂತೆ ನಿರ್ಜನ ಪ್ರದೇಶಕ್ಕೆ ಸ್ಥಳಾಂತರಿಸಬೇಕು. ಸರ್ಕಾರ ಕಾರ್ಖಾನೆ ಧೂಳು ಬಾಧಿತ 22 ಹಳ್ಳಿಗಳ ಪುನರುಜ್ಜೀವನ ಮಾಡಲು ವಿಶೇಷ ಪ್ಯಾಕೇಜ್ ಘೋಷಿಸಬೇಕು. ಎ.ಐ.ಐ.ಎಂ.ಎಸ್ ಸಂಸ್ಥೆ ಮತ್ತು ಐ.ಐ.ಎಸ್.ಸಿ ಸಂಸ್ಥೆಯಿಂದ ಜನರ ಆರೋಗ್ಯ ಮತ್ತು ಪರಿಸರ ಹಾನಿಯ ಸಮೀಕ್ಷೆ ನಡೆಸಬೇಕು ಎಂದು ಧರಣಿ ನಡೆಯುತ್ತಿದೆ. ಧರಣಿಯಲ್ಲಿ ಗವಿಶ್ರೀನಗರದ ಅಮರೇಶ ಕಮ್ಮಾರ, ಮಹೇಶ ಅಣ್ಣಿಗೇರಿ, ಎಂ.ಟೆಕ್ ವಿದ್ಯಾರ್ಥಿ ಪ್ರೀತಂ ಹೊಸಮನಿ, ರಾಜಶೇಖರ ಏಳುಬಾವಿ, ಹೋರಾಟ ವೇದಿಕೆ ಸಂಚಾಲಕರಾದ ಮಲ್ಲಿಕಾರ್ಜುನ ಬಿ. ಗೋನಾಳ ಮತ್ತು ಮಂಜುನಾಥ ಜಿ. ಗೊಂಡಬಾಳ, ಪ್ರಕಾಶಕ ಡಿ ಎಂ. ಬಡಿಗೇರ, ಶಂಭುಲಿಂಗಪ್ಪ ಹರಗೇರಿ, ಕಳಕಪ್ಪ ಗಂಗಾವತಿ, ಮಹಾದೇವಪ್ಪ ಮಾವಿನಮಡು, ಶರಣು ಶೆಟ್ಟರು, ನಾಗರಾಜ ಕುಷ್ಟಗಿ ಲಾಚನಕೇರಿ, ಬಸವರಾಜಪ್ಪ ಶೆಟ್ಟರ್, ವಿಜಯಮಹಾಂತೇಶ ಹಟ್ಟಿ, ಗಂಗಮ್ಮ ಕುರುಗೋಡು, ಶಿವಪ್ಪ ಜಲ್ಲಿ, ಪಂಪಣ್ಣ ಚಿಂತಪಲ್ಲಿ, ಕಾಶಪ್ಪ ಚಲವಾದಿ, ಶಿವರಾಜ ಸಿ. ಇದ್ದರು.

## ಮೇ.16ರಂದು ಗ್ರಾಹಕರ ಸಂವಾದ ಸಭೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.15 : ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ 01ರ ಕಚೇರಿಯಲ್ಲಿ ಮೇ.16ರ ಬೆಳಿಗ್ಗೆ 11ಗಂಟೆಯಿಂದ ಮಧ್ಯಾಹ್ನ 1ರವರೆಗೆ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ವಿದ್ಯುತ್ ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು

ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ 01ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ವಯಂ ಘೋಷಿತ ಪ್ರಮಾಣ ಪತ್ರ ಸಲ್ಲಿಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.15: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸಾಹಿತಿ, ಕಲಾವಿದರ ಮಾಶಾಸನ ಹಾಗೂ ವಿಧವಾ ಮಾಶಾಸನ ಪಡೆಯುತ್ತಿರುವ ರಾಯಚೂರು ಜಿಲ್ಲೆಯ ಕಲಾವಿದರು ಪ್ರತಿ 06 ತಿಂಗಳಿಗೊಮ್ಮೆ ಆರ್ಥಿಕ ವರ್ಷದ ಮಾರ್ಚ್ ಹಾಗೂ ಸೆಪ್ಟೆಂಬರ್ ಮಾಹೆಯಲ್ಲಿ ಸ್ವಯಂಘೋಷಿತ ಪ್ರಮಾಣ ಪತ್ರವನ್ನು

(ಜೀವಿತಾವಧಿ ಪ್ರಮಾಣಪತ್ರ) ಈ ಕಚೇರಿಗೆ ಸಲ್ಲಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೆಸ್ಕಾಂ-2: ಮೇ.16ರಂದು ಗ್ರಾಹಕರ ಸಂವಾದ ಸಭೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.15 : ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗ 02ರ ಕಚೇರಿಯಲ್ಲಿ ಮೇ.16ರ ಬೆಳಿಗ್ಗೆ 11ಗಂಟೆಯಿಂದ ಮಧ್ಯಾಹ್ನ 1ರವರೆಗೆ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ವಿದ್ಯುತ್ ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗ 02ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಅಂತಿಮ ವರ್ಷದ ವಿದ್ಯಾರ್ಥಿನಿಯರಿಗೆ ಬೀಳ್ಕೊಡುಗೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಕಾಲೇಜು ಶಿಕ್ಷಣ ಇಲಾಖೆ ಅಧೀನದ ಸರಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ವತಿಯಿಂದ 2025–26ನೇ ಶೈಕ್ಷಣಿಕ ಸಾಲಿನ ಸಾಂಸ್ಕೃತಿಕ, ಕ್ರೀಡಾ, ಎನ್‌ಎಸ್‌ಎಸ್, ರೇಡ್ ಕ್ರಾಸ್, ಸೌಟ್ಸ್ ಮತ್ತು ಗೈಡ್ಸ್ ಹಾಗೂ ಬುದ್ಧ ಬಸವ ಅಂಬೇಡ್ಕರ್ ವೇದಿಕೆಯ ವಾರ್ಷಿಕೋತ್ಸವ ಮತ್ತು ಬಿಎ, ಬಿಕಾಂ, ಬಿಎಸ್ಸಿ, ಬಿಬಿಎ ಪದವಿ ಹಾಗೂ ಎಂಎ ಕನ್ನಡ, ಇತಿಹಾಸ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ, ಎಂಎಸ್ಸಿ, ಎಂಕಾಂ ಅಂತಿಮ ವರ್ಷದ ವಿದ್ಯಾರ್ಥಿನಿಯರ ಬೀಳ್ಕೊಡುಗೆ ಸಮಾರಂಭವು ಶುಕ್ರವಾರ ಜೇವರ್ಗಿ ಕಾಲೋನಿಯ ಕಾಲೇಜು ಆವರಣದಲ್ಲಿ ಅದ್ದೂರಿಯಾಗಿ ನಡೆಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಸರಕಾರಿ ಮಹಾವಿದ್ಯಾಲಯ (ಸ್ವಾಯತ)ದ ಪ್ರಾಂಶುಪಾಲೆ ಡಾ. ಸವಿತಾ ತಿವಾರಿ ಅವರು, ವಿದ್ಯಾರ್ಥಿನಿಯರು ವಿದ್ಯಾಭ್ಯಾಸದೊಂದಿಗೆ ಸಂಸ್ಕಾರ, ಶಿಸ್ತು ಹಾಗೂ ಸಾಮಾಜಿಕ ಹೊಣೆಗಾರಿಕೆಯನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು. ಕಾಲೇಜು ಜೀವನವು ಭವಿಷ್ಯದ ಬಲವಾದ ಅಡಿಪಾಯವಾಗಿದ್ದು, ವಿದ್ಯಾರ್ಥಿನಿಯರು ತಮ್ಮ ಗುರಿ ಸಾಧನೆಗೆ ಆತ್ಮವಿಶ್ವಾಸದಿಂದ ಮುಂದುವರಿಯಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ. ಮೋರಗೆ ಪ್ರಕಾಶ ವಿ ವಹಿಸಿದ್ದರು. ವಿದ್ಯಾರ್ಥಿನಿಯರ ಸಾಧನೆಗೆ ಕಾಲೇಜಿನ ಎಲ್ಲಾ ವಿಭಾಗಗಳ ಸಹಕಾರ ಮಹತ್ವದ್ದಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಸಿ.ಡಿ.ಸಿ ಸದಸ್ಯ ಕಿಶೋರಸಿಂಗ್, ಬಿ.ಎಸ್. ಬಿರಾದಾರ, ಹುಲಿಕಂಠರಾಯ ಗೌಡ, ರಾಘು ಮೈಲಾಪೂರ, ಲಾಲ ಅಹ್ಮದ ಬಾಂಬೆ ಸೇಠ್, ವಾಣಿ ಸಾಗರಕರ್, ಧರ್ಮರಾಜ ಹೇರೂರ, ವಿದ್ಯಾ ಜೋಶಿ, ಡಾ. ಜ್ಯೋತಿ ಕೆ.ಎಸ್, ಡಾ. ಪದ್ಮಣ್ಣಾ ರಾಸಣಗಿ, ಡಾ. ರೂಪಾಲಿ ರಾಠೋಡ, ಡಾ. ಜ್ಯೋತಿ ರೆಡ್ಡಿ, ಡಾ. ಪದ್ಮಾವತಿ ಧನ್ನಿ, ಡಾ. ಸಂತೋಷ ಹುಂಪಳಿ, ಡಾ. ಮೀನಾಕ್ಷಿ ವಿಜಯಕುಮಾರ, ಡಾ. ಶರಣಬಸಪ್ಪ ಚಿಕ್ಕಳ್ಳಿ ಹಾಗೂ ಡಾ. ವಿನೋದಕುಮಾರ ಸೇರಿದಂತೆ ಬೋಧಕ, ಬೋಧಕೇತರ ಸಿಬ್ಬಂದಿ, ಅತಿಥಿ ಉಪನ್ಯಾಸಕರು ಮತ್ತು ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

# ಕುಡಾ ಸಾಮಾನ್ಯ ಸಭೆ : ನಗರಾಭಿವೃದ್ಧಿ ಕಾಮಗಾರಿಗಳ ಕುರಿತು ಚರ್ಚೆ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ನಗರದ ಕುಡಾ ಸಭಾಂಗಣದಲ್ಲಿ ಶುಕ್ರವಾರ ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರ (ಕುಡಾ) ಅಧ್ಯಕ್ಷ ಮಜರ್ ಅಲಂಖಾನ್ ಅವರ ಅಧ್ಯಕ್ಷತೆಯಲ್ಲಿ ಸಾಮಾನ್ಯ ಸಭೆ ಜರುಗಿತು. ಸಭೆಯಲ್ಲಿ ನಗರಾಭಿವೃದ್ಧಿಗೆ ಸಂಬಂಧಿಸಿದ ವಿವಿಧ ಕಾಮಗಾರಿಗಳು, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಸಾರ್ವಜನಿಕ ಸಮಸ್ಯೆಗಳ ಕುರಿತು ಚರ್ಚೆ ನಡೆಯಿತು.

ಸಭೆಯಲ್ಲಿ ಶಾಸಕರಾದ ಅಲ್ಲಮಪ್ರಭು ಪಾಟೀಲ, ಕನೀಜ್ ಫಾತಿಮಾ, ಜಗದೇವ ಗುತ್ತೇದಾರ ಸೇರಿದಂತೆ ಹಲವು ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಭಾಗವಹಿಸಿದ್ದರು. ನಗರಾಭಿವೃದ್ಧಿ ಯೋಜನೆಗಳನ್ನು ಶೀಘ್ರಗತಿಯಲ್ಲಿ ಪೂರ್ಣಗೊಳಿಸುವಂತೆ ಸದಸ್ಯರು ಅಧಿಕಾರಿಗಳಿಗೆ ಸೂಚಿಸಿದರು.

# ಗವಿಮಠದಲ್ಲಿ ಮಕ್ಕಳಿಗೆ ಲಿಂಗದೀಕ್ಷೆ, ಅಕ್ಷರಾಭ್ಯಾಸ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ನಗರದ ಸಂಸ್ಥಾನ ಶ್ರೀಗವಿಮಠದಲ್ಲಿ ಶುಕ್ರವಾರ ಜಂಗಮ ವಟುಗಳಿಗೆ ಲಿಂಗದೀಕ್ಷೆ ಹಾಗೂ ಮಕ್ಕಳಿಗೆ ಅಕ್ಷರಾಭ್ಯಾಸ ಕಾರ್ಯಕ್ರಮ ಭಕ್ತಿಭಾವದಿಂದ ನಡೆಯಿತು.

ಮಠದ ಆವರಣದಲ್ಲಿ ಬೆಳಗಿನ ಜಾವ ಅಯ್ಯಾಚಾರ (ಲಿಂಗದೀಕ್ಷೆ) ಕಾರ್ಯಕ್ರಮ ನೆರವೇರಿದರೆ, ಬೆಳಿಗ್ಗೆ 9 ಗಂಟೆಯಿಂದ ಅಕ್ಷರಾಭ್ಯಾಸ ಕಾರ್ಯಕ್ರಮ ಜರುಗಿತು. ಸಾವಿರಾರು ಭಕ್ತರು ತಮ್ಮ ಮಕ್ಕಳೊಂದಿಗೆ ಮಠಕ್ಕೆ ಆಗಮಿಸಿ ಕರ್ತೃ ಗದ್ದುಗೆಯ ದರ್ಶನ ಪಡೆದರು.

ಅಭಿನವ ಗವಿಸಿದ್ಧೇಶ್ವರ ಮಹಾಸ್ವಾಮಿಗಳು ಅಕ್ಷರಾಭ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸಿದ ಮಕ್ಕಳಿಗೆ ತಮ್ಮ ಅಮೃತಹಸ್ತದಿಂದ ಪಾಟಿ ಹಾಗೂ ನೋಟಬುಕ್ ಮೇಲೆ ಅಕ್ಷರ ಬರೆಸಿ ಆಶೀರ್ವದಿಸಿದರು.

ವಿವಿಧ ಜಿಲ್ಲೆಗಳಿಂದಲೂ ಸಹಸ್ರಾರು ಭಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಅಕ್ಷರಾಭ್ಯಾಸದ ಬಳಿಕ ಭಕ್ತರು ಮಠದ ದಾಸೋಹ ಪ್ರಸಾದ ಸ್ವೀಕರಿಸಿದರು ಎಂದು ಗವಿಮಠದ ಪ್ರಕಟಣೆ ತಿಳಿಸಿದೆ.

# ವಿದ್ಯಾರ್ಥಿಗಳ ಅಧ್ಯಯನ ದೇಶಕ್ಕೆ ಸಹಾಯವಾಗಬೇಕು:ಡಾ. ಶರಣಪ್ಪ ಎಸ್. ಡಿ.




• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.15: ವಿದ್ಯಾರ್ಥಿಗಳೇ ನೀವು ನಿಮ್ಮ ವೈಯಕ್ತಿಕ ಉನ್ನತಿಗಾಗಿ ಅಧ್ಯಯನ ಮಾಡಬೇಡಿ, ನಿಮ್ಮ ಅಧ್ಯಯನ ನಿಮ್ಮ ಕುಟುಂಬಕ್ಕಾಗಿ ಅಥವಾ ಸಮಾಜಕ್ಕಾಗಿ ಸೀಮಿತವಾಗಿರಬಾರದು, ನಿಮ್ಮ ಅಧ್ಯಯನವು ನಮ್ಮ ದೇಶಕ್ಕೆ ಸಹಾಯಕವಾಗಬೇಕು ಎಂಬುದು ನನ್ನ ಪ್ರಾಮಾಣಿಕ ವಿನಂತಿ ಎಂದು ಕಲಬುರಗಿ ನಗರದ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್. ಡಿ. ವಿದ್ಯಾರ್ಥಿಗಳಿಗೆ ಕರೆನೀಡಿದರು.

ನಗರದ ಶರಣಬಸವ ವಿಶ್ವವಿದ್ಯಾಲಯದ ಆವರಣದಲ್ಲಿ ಶುಕ್ರವಾರದಂದು ಎರಡು ದಿನಗಳ ಜ್ಞಾನೋತ್ಸವ–2026ರಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದರು. ಈ ಉತ್ಸವವು ನಿಮ್ಮನ್ನು ಒಳ್ಳೆಯ ವಿದ್ಯಾರ್ಥಿಗಳನ್ನಾಗಿ ಬೆಳೆಯಲು ಪ್ರೇರೇಪಿಸುತ್ತದೆ. ಶರಣಬಸವ ವಿಶ್ವವಿದ್ಯಾಲಯದಲ್ಲಿ ಆರಂಭಗೊಂಡ ಜ್ಞಾನೋತ್ಸವ–2026 ಸಾಂಸ್ಕೃತಿಕ ಉತ್ಸವವು ವಿದ್ಯಾರ್ಥಿಗಳಿಗೆ ಸ್ಫೂರ್ತಿದಾಯಕವಾಗಿದ್ದು, ಸಂತೋಷ, ಸ್ನೇಹ ಮತ್ತು ಒಗ್ಗಟ್ಟನ್ನು ಹೆಚ್ಚಿಸುವಂತಹ ಈ ಕಾರ್ಯಕ್ರಮವು ಪರಸ್ಪರ ಪ್ರೀತಿ ಮತ್ತು ಸೌಹಾರ್ದತೆಯ ಪ್ರತೀಕವಾಗಿದೆ ಎಂದರು.

ಕಲೆ, ವಿಜ್ಞಾನ, ವಾಣಿಜ್ಯದಂತಹ ಯಾವುದೇ ಕ್ಷೇತ್ರದಲ್ಲಿ ಉತ್ತಮ ಉದ್ಯೋಗಗಳನ್ನು ನಿಮ್ಮದಾಗಿಸಿಕೊಳ್ಳಲು ನೀವು ಅಸಾಧಾರಣ ದೃಷ್ಟಿಯನ್ನು ಹೊಂದಿರಬೇಕು. ವಿದ್ಯಾರ್ಥಿಗಳು ನಿಮ್ಮ ಸಾಮರ್ಥ್ಯವನ್ನು ಅಧ್ಯಯನದಲ್ಲಿ ತೋರಿಸಬೇಕು. ಯಾವಾಗಲೂ ಕನಸುಗಳನ್ನು ನನಸಾಗಿಸಲು ಪ್ರಯತ್ನಪಡಬೇಕು. ಇಲ್ಲಿ ನಾವೀನ್ಯತೆ ಹಾಗೂ ಮಾರ್ಕೆಟಿಂಗ್ ಬಗ್ಗೆ ಅನೇಕ ಮಳಿಗೆಗಳನ್ನು ಇರಿಸಲಾಗಿದೆ. ಇದರಿಂದ ಅನೇಕ ವಿಷಯಗಳು ಕಲಿಯಲು ಸಾಧ್ಯವಾಗುತ್ತದೆ. ಯಾವಾಗಲೂ ವಿಶಾಲವಾಗಿ ಯೋಚಿಸಿ ಎಂದು ಪೋಲಿಸ್ ಆಯುಕ್ತರು ತಿಳಿಸಿದರು.

ನಾನು ಮತ್ತು ನನ್ನ ಕುಟುಂಬ ಎಂದಷ್ಟೇ ಹೇಳಬೇಡಿ, ಅದರಿಂದ ಹೊರಬನ್ನಿ, ನಾನು ನಿಮ್ಮನ್ನು ಜಾಗತಿಕ ನಾಯಕರಾಗಿ, ಜಾಗತಿಕ ನಾವೀನ್ಯಕಾರರಾಗಿ, ಸಂಶೋಧಕರಾಗಿ, ಶಿಕ್ಷಕರಾಗಿ, ಇಂಜಿನಿಯರ್‌ಗಳಾಗಿ ಅಥವಾ ವೈದ್ಯರನ್ನಾಗಿ ನೋಡಲು ಬಯಸುತ್ತೇನೆ ಎಂದರು. ಸಮಯವು ತುಂಬಾ ಅಮೂಲ್ಯವಾಗಿದೆ ಅದನ್ನು ವಿನಾಕಾರಣ ವ್ಯರ್ಥ ಮಾಡಬೇಡಿ ಎಂದು ವಿದ್ಯಾರ್ಥಿಗಳಿಗೆ ಶರಣಪ್ಪ ಎಸ್. ಡಿ. ಕಿವಿಮಾತನ್ನು ಹೇಳಿದರು.

ಆಯುಕ್ತರು ಮಾತನಾಡುತ್ತಾ, ದಯವಿಟ್ಟು ಸಂಚಾರಿ ನಿಯಮಗಳನ್ನು ಎಲ್ಲರೂ ಅನುಸರಿಸಿ, ಯಾವಾಗಲೂ ಹೆಲ್ಮೆಟ್ ಮತ್ತು ಸೀಟ್ ಬೆಲ್ಟ್‌ಗಳನ್ನು ತಪ್ಪದೇ ಹಾಕಿಕೊಳ್ಳಿ ಎಂದು ಉಪಸ್ಥಿತರಿದ್ದ ಎಲ್ಲಾ ಪ್ರೇಕ್ಷಕರಿಗೆ ವಿನಂತಿಸಿದರು.

ಶರಣಬಸವ ವಿಶ್ವವಿದ್ಯಾಲಯದಲ್ಲಿ ವಿದ್ಯಾರ್ಥಿಗಳ ಸಮಾಗಮ, ಸಡಗರ, ಸಂಭ್ರಮ ಮನೆಮಾಡಿತ್ತು. ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಝಗಮಗಿಸುವ ಕಾರ್ಯಕ್ರಮದಲ್ಲಿ ಮಿಂದು ಪುಳಕಿತರಾಗಿದ್ದರು. ಎಲ್ಲೆಂದರಲ್ಲಿ ಉತ್ಸವದ ಬಗ್ಗೆ ಎಲ್ಲರಲ್ಲಿ ಉತ್ಸಾಹವಿತ್ತು.

ಶರಣಬಸವೇಶ್ವರ ಸಂಸ್ಥಾನದ 9ನೇ ಮಹಾದಾಸೋಹ ಪೀಠಾಧಿಪತಿಗಳಾದ ಪೂಜ್ಯ ದೊಡ್ಡಪ್ಪ ಅಪ್ಪಾಜಿಯವರು ಜ್ಞಾನೋತ್ಸವ–2026 ಟೆಕ್ನೊ ಕಲ್ಚರಲ್ ಫೆಸ್ಟ್ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿಯವರ ಘನ ಉಪಸ್ಥಿತಿಯಲ್ಲಿ ಕಾರ್ಯಕ್ರಮ ನೆರವೇರಿತು.

ಈ ಕಾರ್ಯಕ್ರಮದಲ್ಲಿ ಸಂಘದ ಕಾರ್ಯದರ್ಶಿಗಳಾದ ಶ್ರೀ ಬಸವರಾಜ ದೇಶಮುಖ, ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿಗಳಾದ ಪ್ರೊ. ಅನಿಲಕುಮಾರ ಬಿಡವೆ, ನಿರ್ದೇಶಕ ಪ್ರೊ. ವಿ. ಡಿ. ಮೈತ್ರಿ, ಕುಲಸಚಿವ (ಮೌಲ್ಯಮಾಪನ) ಡಾ. ಎಸ್. ಎಚ್. ಹೊನ್ನಳ್ಳಿ, ಡೀನ್ ಡಾ. ಶಿವಕುಮಾರ ಜವಳಿಗಿ, ಹಣಕಾಸು ಅಧಿಕಾರಿ ಡಾ. ಕಿರಣ ಮಾಕಾ ವೇದಿಕೆ ಮೇಲಿದ್ದರು. ವಿವಿಯ ಎಲ್ಲಾ ವಿಭಾಗಗಳ ಡೀನರು, ಮುಖ್ಯಸ್ಥರು, ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಜ್ಞಾನೋತ್ಸವ–2026 ಟೆಕ್ನೊ ಕಲ್ಚರಲ್ ಫೆಸ್ಟ್ ಕಾರ್ಯಕ್ರಮದಲ್ಲಿ ಎಲ್ಲಾ ಅತಿಥಿ ಗಣ್ಯರನ್ನು ಶರಣಬಸವ ವಿಶ್ವವಿದ್ಯಾಲಯದ ಕುಲಸಚಿವರಾದ ಡಾ. ಲಕ್ಷ್ಮೀ ಪಾಟೀಲ ಮಾಕಾ ಸ್ವಾಗತಿಸಿದರು. ಪ್ರೊ. ಶೃತಿ ಹಾಗೂ ಪ್ರೊ. ಚೇತನಾ ನಿರೂಪಿಸಿದರು.

ಈ ಜ್ಞಾನೋತ್ಸವ–2026 ಟೆಕ್ನೊ ಕಲ್ಚರಲ್ ಫೆಸ್ಟ್ ಕಾರ್ಯಕ್ರಮದಲ್ಲಿ ವಿವಿಯ ವಿವಿಧ ವಿಭಾಗಗಳ ವಿದ್ಯಾರ್ಥಿಗಳು ಅನೇಕ ಮಳಿಗೆಗಳನ್ನು ಸ್ಥಾಪಿಸಿದ್ದರು. ಈ ಮಳಿಗೆಗಳನ್ನು ಶರಣಬಸವೇಶ್ವರ ಸಂಸ್ಥಾನದ 9ನೇ ಮಹಾದಾಸೋಹ ಪೀಠಾಧಿಪತಿಗಳಾದ ಪೂಜ್ಯ ದೊಡ್ಡಪ್ಪ ಅಪ್ಪಾಜಿಯವರ ಅಮೃತ ಹಸ್ತದಿಂದ ಉದ್ಘಾಟಿಸಲಾಯಿತು.

# ನಮಗಾಗಿ ಬದುಕುವದಕಿಂತ ಸಮಾಜದ ಒಳಿತಿಗಾಗಿ ಬದುಕಬೇಕು

• ಮಲ್ಲಮ್ಮ ನುಡಿ ವಾರ್ತೆಯಲಬುರ್ಗಾ

ಮೇ.15: ನಮಗಾಗಿ ಬದುಕುವದಕಿಂತ ಸಮಾಜದ ಒಳಿತುಗಾಗಿ ಬದುಕು ಬೇಕು,ಉತ್ತಮ ಅಂಕಗಳ ಜೋತೆಗೆ ತಾಯಿ ತಂದೆಯವರಿಗೆ, ಗುರು ಹಿರಿಯರಿಗೆ ಗೌರವ ಕೊಡಬೇಕು ಎಂದು ಗದಗ ಅಂತರಾಷ್ಟ್ರೀಯ ಜನಪದ ಕಲಾವಿದ ಗವಿಸಿದ್ದಯ್ಯ ಹಳ್ಳಿಕೇರಿಮಠ ಅವರು

ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜು ಯಲಬುರ್ಗಾದಲ್ಲಿ ಶುಕ್ರವಾರ ಜರುಗಿದ 2025–26ನೇ ಶೈಕ್ಷಣಿಕ ಸಾಲಿನ ಪದವಿ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಉಪನ್ಯಾಸ ನೀಡಿ ಮಾತನಾಡಿದರು . ಯಲಬುರ್ಗಾ ವಿಧಾನಸಭಾ ಕ್ಷೇತ್ರದಲ್ಲಿ ಎಲ್.ಕೆ.ಜಿ ಯಿಂದ ಪಿಜಿ ವರೆಗೂಅನೇಕ ಶೈಕ್ಷಣಿಕ ಸಂಸ್ಥೆಗಳನ್ನು ಶಾಸಕ ಬಸವರಾಜ ರಾಯರಡ್ಡಿವರು ಮುಂಜೂರುಗೋಳಿಸಿದ್ದಾರೆ,ಮತ್ತು ರಾಜ್ಯಸರ್ಕಾರ ಯುವಕರಿಗಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದು,'ಯುವ ನಿಧಿ' ಸೇರಿದಂತೆ ವಿವಿಧ ಯೋಜನೆಗಳ ಸದುಪಯೋಗ ಪಡೆಯಬೇಕು ಎಂದು ಯಲಬುರ್ಗಾ ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಸುಧೀರ ಕೊರ್ಲಹಳ್ಳಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ವಿಧ್ಯಾರ್ಥಿಗಳು ಗುರುಗಳಿಗಿಂತ ಹೆಚ್ಚು ಎತ್ತರಕ್ಕೆ ಬೆಳೆದಾಗ ಇದರಿಂದ ಗುರುಗಳಿಗೆ ಸಂತಸವಾಗುತ್ತದೆ,ಓದುವ ಹವ್ಯಾಸವನ್ನು ವಿದ್ಯಾರ್ಥಿಗಳು ಬೆಳಿಸಿಕೊಂಡಾಗ ಉನ್ನತ ಹುದ್ದೆ ಪಡೆಯಲು ಸಾದ್ಯ ಎಂದು ಆರ್.ಡಿ.ಸಿಸಿ ಬ್ಯಾಂಕ ನಿರ್ದೇಶಕ ಶೇಖರಗೌಡ ಉಳ್ಳಾಗಡ್ಡಿ ಅವರು ಮಾತನಾಡಿದರು.ಬೆಳಗಾಂವಿ

ನಿವೃತ್ತ ಉಪನಿರ್ದೇಶಕ ಎಸ್.ಡಿ. ಗಾಂಜಿ ಅವರು ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಶಿಸ್ತು, ಸಂಸ್ಕಾರ ಮತ್ತು ಸಾಮಾಜಿಕ ಜವಾಬ್ದಾರಿಗಳನ್ನು ಬೆಳೆಸಿಕೊಳ್ಳಬೇಕು , ವಿದ್ಯಾರ್ಥಿಗಳು ಜ್ಞಾನದ ಭೀಕ್ಷುಕರಾಗಬೇಕು ,ಆರ್ಥಿಕ ಭೀಕ್ಷುಕರಾಗಬಾರದು ಎಂದು ಸಲಹೆ ನೀಡಿದರು.

ಸಮಾಜ ಅಭಿವೃದ್ಧಿಯಾಗಬೇಕಾದರೆ ಶಿಕ್ಷಧಿಂದ ಮಾತ್ರ ಸಾದ್ಯ ವಿದ್ಯಾರ್ಥಿಗಳು ನಾಯಕತ್ವದ ಗುಣಗಳನ್ನು ಬೆಳೆಸಿಕೊಳ್ಳಬೇಕು ಎಂದು ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯ ಲಿಂಗರಾಜ ಪಾಟೀಲ್ ಮಾತನಾಡಿದರು.

ಕಾಲೇಜಿನ ಪ್ರಾಚಾರ್ಯ ಕೆ.ಎಚ್. ಛತ್ರದ ಅವರು ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಸಿಡಿಸಿ ಸದಸ್ಯರಾದ ಕಳಕಪ್ಪ ಕುರಿ, ಜಯಶ್ರೀ ಕಂದಕೂರು, ವಿರುಪಾಕ್ಷಯ್ಯ ಗಂಧದ, ಬಸವರಾಜ ಇಳಿಗೇರ, ಬಸವರಾಜ ಒಂಟೇಲಿ, ವಿಕಾಸ ಉಳ್ಳಾಗಡ್ಡಿ, ಕಳಕೇಶ ಸೂಡಿ, ಮಹಾಂತೇಶ ಚಲವಾದಿ ಉಪಸ್ಥಿತರಿದ್ದರು.


ಉಪನ್ಯಾಸಕರಾದ ಎ.ಬಿ. ಕೆಂಚರಡ್ಡಿ, ಡಾ. ಸುರೇಶಕುಮಾರ, ಡಾ. ನಂದಾ, ಶಂಕ್ರಯ್ಯ, ಡಾ. ಶಶಿಕುಮಾರ, ಮಂಜುಳಾ ಮಡಿವಾಳರ, ವಿನೋದ ಸಿದ್ದಣ್ಣನವರ, ಹನಿಮೇಶ, ಲಕ್ಷ್ಮೀಬಾಯಿ, ವಂಶಿಕೃಷ್ಣ, ಮಲ್ಲನಗೌಡ್ರ ಅತಿಥಿ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.ನಂತರ ವಿದ್ಯಾರ್ಥಿಗಳು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು.

# ತಿಪ್ಪೇಗುಂಡಿಯಾದ ಸರ್ಕಾರಿ ವಸತಿ ನಿಲಯ

## ಎಸ್‌ಎಫ್‌ಐ ಆಕ್ರೋಶ



• ಮಲ್ಲಮ್ಮ ನುಡಿ ವಾರ್ತೆ ಕುಕನೂರು



ತಾಲೂಕಿನ ದ್ಯಾಂಪುರದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯದಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಹಾಗೂ ಅವ್ಯವಸ್ಥೆ ಖಂಡಿಸಿ ಸ್ಟೂಡೆಂಟ್ ಫೆಡರೇಶನ್ ಆಫ್ ಇಂಡಿಯಾ (ಖಈಖ) ನೇತೃತ್ವದಲ್ಲಿ ವಿದ್ಯಾರ್ಥಿಗಳು ಶುಕ್ರವಾರ ಪ್ರತಿಭಟನೆ ನಡೆಸಿದರು.

ವಸತಿ ನಿಲಯದ ಆವರಣವು ಸರಿಯಾದ ನಿರ್ವಹಣೆ ಇಲ್ಲದೆ ತಿಪ್ಪೇಗುಂಡಿಯಂತಾಗಿದ್ದು,ವಿದ್ಯಾರ್ಥಿಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಶೌಚಾಲಯಗಳ ಅಶುಚಿತ್ವ, ಕುಡಿಯುವ ನೀರಿನ ಸಮಸ್ಯೆ, ಕೊಠಡಿಗಳ ದುಸ್ಥಿತಿ ಹಾಗೂ ಸ್ವಚ್ಛತೆಯ ಕೊರತೆಯಿಂದ ವಿದ್ಯಾರ್ಥಿಗಳು ಸಾಂಕ್ರಾಮಿಕ ರೋಗಗಳ ಭೀತಿಯಲ್ಲಿ ದಿನದೂಡುತ್ತಿರುವುದಾಗಿ ದೂರಿದರು.ಸರ್ಕಾರ ವಿದ್ಯಾರ್ಥಿಗಳ ಪೌಷ್ಟಿಕಾಂಶಕ್ಕಾಗಿ ಅನುದಾನ ಬಿಡುಗಡೆ ಮಾಡುತ್ತಿದ್ದರೂ, ವಸತಿ ನಿಲಯದಲ್ಲಿ ಗುಣಮಟ್ಟದ ಆಹಾರ ಒದಗಿಸಲಾಗುತ್ತಿಲ್ಲ. ವಿದ್ಯಾರ್ಥಿಗಳ ಆರೋಗ್ಯದೊಂದಿಗೆ ಆಡಳಿತ ಮಂಡಳಿ ಚೆಲ್ಲಾಟವಾಡುತ್ತಿದೆ ಎಂದು ಎಸ್‌ಎಫ್‌ಐ ಮುಖಂಡರು ಆರೋಪಿಸಿದರು.ಪ್ರತಿಭಟನಾ ಸ್ಥಳದಿಂದಲೇ ನಿಲಯ ಪಾಲಕರಿಗೆ ದೂರವಾಣಿ ಕರೆ ಮಾಡಿದ ಸಂಘಟನೆಯ ಪದಾಧಿಕಾರಿಗಳು, ತಕ್ಷಣ ವಸತಿ ನಿಲಯಕ್ಕೆ ಆಗಮಿಸಿ ವಿದ್ಯಾರ್ಥಿಗಳ ಅಹವಾಲು ಆಲಿಸುವಂತೆ ಒತ್ತಾಯಿಸಿದರು. ಸ್ಥಳಕ್ಕೆ ಅಧಿಕಾರಿಗಳು ಆಗಮಿಸದ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ಆಕ್ರೋಶ ವ್ಯಕ್ತಪಡಿಸಿ ಘೋಷಣೆ ಕೂಗಿದರು.ಸಮಸ್ಯೆಗಳನ್ನು ಬಗೆಹರಿಸಲು ಅಧಿಕಾರಿಗಳಿಗೆ ಎರಡು ದಿನಗಳ ಗಡುವು ನೀಡಿರುವ ಎಸ್‌ಎಫ್‌ಐ, ನಿಗದಿತ ಅವಧಿಯೊಳಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸದಿದ್ದರೆ ತಾಲೂಕು ಸಮಾಜ ಕಲ್ಯಾಣ ಇಲಾಖೆ ಕಚೇರಿ ಎದುರು ಉಗ್ರಹೋರಾಟ ಹಮ್ಮಿಕೊಳ್ಳುವುದಾಗಿ ಎಚ್ಚರಿಸಿದೆ.ಈ ಸಂದರ್ಭದಲ್ಲಿ ಸಂಘಟನೆಯ ಜಿಲ್ಲಾ ಮುಖಂಡ ಮಾರುತಿ ವಿಠಲಪುರ, ಮಹೇಶ್, ಗಣೇಶ್ ಬಡಿಗೇರ ಹಾಗೂ ನಿಲಯದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ವಾ.ಕ.ರ.ಸ.ಸಾ ಸಂಸ್ಥೆಯ ದರ್ಜೆ-2 ವೃಂದದ ಹುದ್ದೆಗೆ ದೈಹಿಕ ಅರ್ಹತೆ ಮತ್ತು ಮೂಲ ದಾಖಲಾತಿಗಳ ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆಕಾರವಾರ

ಮೇ.15–ಹುಬ್ಬಳ್ಳಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ "ದರ್ಜೆ–2 ವಿವಿಧ ವೃಂದದ ಅಧಿಕಾರಿ" ಹುದ್ದೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಹೊರಡಿಸಿದ ಅಧಿಸೂಚನೆ ಅನ್ವಯ ದೈಹಿಕ ಅರ್ಹತೆ / ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದ ಸಂಭವನೀಯ ಅಭ್ಯರ್ಥಿಗಳ cut-off percentage ವಿವರಗಳನ್ನು ಸಂಸ್ಥೆಯ ವೆಬ್‌ಸೈಟ್ ವಿಳಾಸ www.nwkrtc.karnataka.gov.in <http://www.nwkrtc.karnataka.gov.in>ನಲ್ಲಿ ಪ್ರಕಟಿಸಲಾಗಿದೆ. ಈ ಅರ್ಹತಾ ಪಟ್ಟಿಯಲ್ಲಿ ಸೇರ್ಪಡೆಗೊಂಡಿರುವ ಕೊನೆಯ ಅಭ್ಯರ್ಥಿಗಳ ಶೇಕಡಾವಾರು ಅಂಕಗಳು ಮತ್ತು ಹುಟ್ಟಿದ ದಿನಾಂಕದ ವಿವರಗಳು ಲಭ್ಯವಿರುತ್ತವೆ. ಅರ್ಹತಾ ಪಟ್ಟಿಯಲ್ಲಿ ಸೇರ್ಪಡೆಯಾಗಿರುವ ಅಭ್ಯರ್ಥಿಗಳ ದೈಹಿಕ ಅರ್ಹತೆ / ಮೂಲ ದಾಖಲಾತಿ ಪರಿಶೀಲನೆಗೆ ಹಾಜರಾಗಲು ಅನುಕೂಲವಾಗುವಂತೆ ಸಂಸ್ಥೆಯ ವೆಬ್ ಸೈಟ್ ನಲ್ಲಿ ನೊಂದಣಿ ಸಂಖ್ಯೆ / ಜನ್ಮ ದಿನಾಂಕವನ್ನು ನಮೂದಿಸಿ ಕರೆಪತ್ರವನ್ನು ಮೇ.15 ರಿಂದ ಮುದ್ರಿಸಿಕೊಂಡು ಕರೆಪತ್ರದಲ್ಲಿ ಸೂಚಿಸಲಾದ ಸ್ಥಳ, ದಿನಾಂಕ ಮತ್ತು ಸಮಯಕ್ಕೆ ಸರಿಯಾಗಿ ಸಂಬಂಧಿಸಿದ ಮೂಲ ದಾಖಲಾತಿಗಳೊಂದಿಗೆ ತಪ್ಪದೇ ಹಾಜರಾಗಲು ಸೂಚಿಸಿದೆ.ಸದರಿ ಅರ್ಹತಾಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ಅಭ್ಯರ್ಥಿಗಳು ಈ ಕುರಿತು ಮೇ.18 ಸಂಜೆ 5.30 ರೊಳಗಾಗಿ ಆನ್‌ಲೈನ್ ಮೂಲಕ ಅಥವಾ ಸಂಬಂಧಪಟ್ಟ ದಾಖಲಾತಿಗಳೊಂದಿಗೆ ಅಧ್ಯಕ್ಷರು, ಆಯ್ಕೆ ಸಮಿತಿ, ವಾಕರಸಾಸಂಸ್ಥೆ, ಗೋಕುಲ ರಸ್ತೆ, ಹುಬ್ಬಳ್ಳಿ ಇವರಿಗೆ ಖುದ್ದಾಗಿ ಲಿಖಿತ ಆಕ್ಷೇಪಣೆಗಳನ್ನು ಸಲ್ಲಿಸಬಹುದು. ನಿಗದಿತ ದಿನಾಂಕ/ಸಮಯದ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವದಿಲ್ಲವೆಂದು ಸಂಸ್ಥೆಯು ಪ್ರಕಟಣೆಯಲ್ಲಿ ತಿಳಿಸಿದೆ.

# ಮೇ 16 ರಂದು ಗ್ರಾಹಕರ ಕುಂದುಕೊರತೆ ಸಭೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.15–ಕಲಬುರಗಿ ಗ್ರಾಮೀಣ ಜೆಸ್ಕಾಂ ವಿಭಾಗೀಯ ಕಚೇರಿ–2ರ ವ್ಯಾಪ್ತಿಯಲ್ಲಿ ಬರುವ ಜೇವರ್ಗಿ, ಯಡ್ರಾಮಿ, ಚಿತ್ತಾಪೂರ, ಶಹಾಬಾದ ಹಾಗೂ ಕಾಳಗಿ ಜೆಸ್ಕಾಂ ಉಪವಿಭಾಗಗಳ ಕಚೇರಿಗಳಲ್ಲಿ ಇದೇ ಮೇ 16 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ವಿದ್ಯುತ್ ಸುರಕ್ಷತಾ ದಿನ ಹಾಗೂ ಗ್ರಾಹಕರ ಕುಂದು–ಕೊರತೆ ಸಭೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗ–2ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ. ವಿದ್ಯುತ್ ಸಂಬಂಧಿತ ಸಮಸ್ಯೆಗಳ ನಿವಾರಣೆಗಾಗಿ ಈ ಗ್ರಾಹಕರ ಕುಂದುಕೊರತೆ ಸಭೆ ಕರೆಯಲಾಗಿದ್ದು, ಮೇಲ್ಕಂಡ ದಿನದಂದು ನಡೆಯುವ ಗ್ರಾಹಕರ ಕುಂದುಕೊರತೆ ಸಭೆಯಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆಯಬೇಕೆಂದು ಅವರು ತಿಳಿಸಿದ್ದಾರೆ.

# ರಾಜ್ಯಮಟ್ಟದ ತತ್ವಪದ ವಿಮರ್ಶಾ ಲೇಖನ ಸ್ಪರ್ಧೆ: ಲೇಖನಗಳ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.15–ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರವು ರಾಜ್ಯಮಟ್ಟದ "ತತ್ವಪದ ವಿಮರ್ಶಾ ಲೇಖನ ಸ್ಪರ್ಧೆಯನ್ನು ಏರ್ಪಡಿಸಲು ಉದ್ದೇಶಿಸಿದೆ. ಇದಕ್ಕಾಗಿ ಲೇಖನಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ಐಟಿಐ ವಿವಿಧ ವೃತ್ತಿಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.15–ಕಲಬುರಗಿ ಸರ್ಕಾರಿ ಮಹಿಳಾ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಆಗಸ್ಟ್ 2026ನೇ ಶೈಕ್ಷಣಿಕ ಸಾಲಿಗಾಗಿ ಐಟಿಐ ಕೆಳಕಂಡ ವಿವಿಧ ವೃತ್ತಿಗಳಿಗೆ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಿದ್ದು, 10ನೇ ತರಗತಿಯಲ್ಲಿ ಪಾಸಾದ ಅರ್ಹ ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಸರ್ಕಾರಿ ಮಹಿಳಾ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

ಎರಡು ವರ್ಷದ ಎಲೆಕ್ಟ್ರಿಷಿಯನ್, ಎಲೆಕ್ಟ್ರಾನಿಕ್ ಮೆಕ್ಯಾನಿಕ್, ಫಿಟ್ಟರ್, ಮೆಕ್ಯಾನಿಕ ಎಲೆಕ್ಟ್ರಿಕ್ ವಹಿಕಲ್, ಅಡ್ವಾನ್ಸ್‌ಡ್ ಸಿಎನ್‌ಸಿ ಮಶಿನಿಂಗ್ ಟೆಕ್ನಿಶಿಯನ್ ಮತ್ತು ಬೇಸಿಕೆ ಡಿಸೈನರ್ ಆಂಡ್ ವರ್ಚ್ಯುವಲ್ ವೆರಿಫೈರ್ (ಫಿನಿಟ್ ಎಲೆಮೆಂಟ್ ಮೆಥೆಡ್) ವೃತ್ತಿಗಳಿಗೆ ಹಾಗೂ ಒಂದು ವರ್ಷದ ಕಂಪ್ಯೂಟರ್ ಹಾರ್ಡ್‌ವೇರ್ ಆಂಡ್ ನೆಟ್‌ವರ್ಕ್ ಮೆಂಟೆನೆನ್ಸ್, ಕೋಪಾ, ಡ್ರೆಸ್ ಮೇಕಿಂಗ್, ಇಂಡಸ್ಟ್ರಿಯಲ್ ರೋಬೋಟಿಕ್ಸ್ ಆಂಡ್ ಡಿಜಿಟಲ್ ಮ್ಯಾನುಫ್ಯಾಕ್ಚರಿಂಗ್ ಟೆಕ್ನಿಶಿಯನ್, ಆರ್ಟಿಜನ್ ಯುಸಿಂಗ್ ಅಡ್ವಾನ್ಸ್‌ಡ್ ಟೂಲ್ ಹಾಗೂ ಮ್ಯಾನುಫ್ಯಾಕ್ಚರಿಂಗ್ ಪ್ರೊಸೆಸ್ ಕಂಟ್ರೋಲ್ ಆಂಡ್ ಆಟೋಮೇಶನ್ ವೃತ್ತಿಗಳಿಗೆ ಪ್ರವೇಶ ಪಡೆಯಬಹುದಾಗಿದೆ. ವಿಶೇಷವಾಗಿ 'ಡ್ರೆಸ್ ಮೇಕಿಂಗ್' ವೃತ್ತಿಗೆ 8ನೇ ಪಾಸಾದ ಅಥವಾ 10ನೇ ಫೇಲಾದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕವು ಮೇ 15 ರಂದು ಮುಗಿದಿದ್ದು, ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸದೇ ಇರುವ ಅಭ್ಯರ್ಥಿಗಳಿಗೆ ಮೇ 16ರಿಂದ ಆಗಸ್ಟ್ 31ರವರೆಗೆ ಸಂಸ್ಥೆಯಲ್ಲಿ ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಪಿಪಿಪಿ ಸೀಟುಗಳ ಪ್ರವೇಶಕ್ಕಾಗಿ ಮಹಿಳಾ ಅಭ್ಯರ್ಥಿಗಳಿಗೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ವಾರ್ಷಿಕ ಬೋಧನಾ ಶುಲ್ಕದಲ್ಲಿ 1200 ರೂ. ರಿಯಾಯಿತಿ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಸರ್ಕಾರಿ ಮಹಿಳಾ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಕಚೇರಿ ಸಮಯದಲ್ಲಿ ದೂರವಾಣಿ ಸಂಖ್ಯೆ 08472–236753 ಅಥವಾ ಮೊಬೈಲ್ ಸಂಖ್ಯೆಗಳಾದ–9901361622, 9008439316 ಗಳಿಗೆ ಕಚೇರಿ ಸಮಯದಲ್ಲಿ ಪ್ರತಿದಿನ ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯ ಸಮಯದಲ್ಲಿ ಸಂಪರ್ಕಿಸಲು ಕೋರಲಾಗಿದೆ.

## ಆರೋಗ್ಯ ಇಲಾಖೆಯ ಇಬ್ಬರು ಅಧಿಕಾರಿ ಲೋಕಾಯುಕ್ತ ಬಲೆಗೆ



**ಯಾದಗಿರಿ:** ಲೋಕಾಯುಕ್ತ ಪೊಲೀಸರು ನಡೆಸಿದ ಭರ್ಜರಿ ಕಾರ್ಯಾಚರಣೆಯಲ್ಲಿ ಆರೋಗ್ಯ ಇಲಾಖೆಯ ಇಬ್ಬರು ಅಧಿಕಾರಿಗಳು ಲಂಚ ಸ್ವೀಕರಿಸುತ್ತಿದ್ದ ವೇಳೆ ಬಲೆಗೆ ಬಿದ್ದಿದ್ದಾರೆ. ಲ್ಯಾಬ್‌ಗೆ ಹಾಕಲಾಗಿದ್ದ ಲಾಕ್‌ನ ಕೀ ಹಸ್ತಾಂತರ ಮಾಡುವ ಸಂಬಂಧ ₹50 ಸಾವಿರ ಲಂಚಕ್ಕೆ ಬೇಡಿಕೆ ಇಟ್ಟ ಆರೋಪ ಕೇಳಿಬಂದಿದೆ. ಶ್ರೀ ಸಾಯಿ ರಾಮ್ ಡಯಾಗ್ನೋಸ್ಟಿಕ್ ಲ್ಯಾಬ್‌ನ ರಾಹುಲ್ ಸಾಬಣ್ಣ ಕೊಳ್ಳೂರು ನೀಡಿದ ದೂರಿನ ಮೇರೆಗೆ ಯಾದಗಿರಿ ಲೋಕಾಯುಕ್ತ ಪೊಲೀಸ್ ಠಾಣೆ ಅಧಿಕಾರಿಗಳು ದಾಳಿ ನಡೆಸಿದರು.

ದೂರಿನ ಪ್ರಕಾರ, ಲ್ಯಾಬ್‌ಗೆ ಹಾಕಲಾಗಿದ್ದ ಲಾಕ್‌ನ ಕೀ ಹಸ್ತಾಂತರ ಮಾಡುವುದಕ್ಕಾಗಿ ಅಧಿಕಾರಿಗಳು ಹಣದ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ. ಈ ಪ್ರಕರಣದಲ್ಲಿ ಯಾದಗಿರಿ ಜಿಲ್ಲಾ ಆರೋಗ್ಯಾಧಿಕಾರಿ ಕಚೇರಿಯ ಹಿರಿಯ ಆರೋಗ್ಯ ನಿರೀಕ್ಷಕ ಅಧಿಕಾರಿ ಸುಗುರೆಪ್ಪ ಅಲಿಯಾಸ್ ತಿಪ್ಪಣ್ಣ ಕವಲಿ ಹಾಗೂ ಬೆಟದೂರು ಆಸ್ಪತ್ರೆಯ ಲ್ಯಾಬ್ ತಂತ್ರಜ್ಞ ಸಂತೋಷ್ ಶರಣಪ್ಪಗೌಡ ಮಾಲಿಪಾಟೀಲ್ ವಿರುದ್ಧ ಪ್ರಕರಣ ದಾಖಲಾಗಿದೆ. ಲೋಕಾಯುಕ್ತ ಅಧಿಕಾರಿಗಳು ರೂಪಿಸಿದ ಉರುಳಿಯಲ್ಲಿ ಆರೋಪಿಗಳಲ್ಲಿ ಒಬ್ಬರು ಲಂಚದ ಹಣ ಸ್ವೀಕರಿಸುತ್ತಿದ್ದಾಗಲೇ ಸಿಕ್ಕಿಬಿದ್ದಿದ್ದಾರೆ ಎಂದು ತಿಳಿದುಬಂದಿದೆ. ಕಾರ್ಯಾಚರಣೆಯ ಬಳಿಕ ಇಬ್ಬರನ್ನೂ ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ. ಈ ಕುರಿತು ಯಾದಗಿರಿ ಲೋಕಾಯುಕ್ತ ಪೊಲೀಸ್ ಠಾಣೆಯಲ್ಲಿ ಕ್ರೈಂ ನಂ.006/2026 ಅಡಿಯಲ್ಲಿ ಭ್ರಷ್ಟಾಚಾರ ನಿಗ್ರಹ ಕಾಯ್ದೆಯ ಸೆಕ್ಷನ್ 7(ಎ) ಅನ್ವಯ ಪ್ರಕರಣ ದಾಖಲಾಗಿದೆ. ಪಿಐ ಸಿದ್ರಾಯ ಬಾಳೂರಗಿ ನೇತೃತ್ವದಲ್ಲಿ ನಡೆದ ಈ ಕಾರ್ಯಾಚರಣೆಗೆ ಡಿಎಸ್‌ಪಿ ಜೆ.ಹೆಚ್. ಇನಾಮದಾರ್ ಮಾರ್ಗದರ್ಶನ ನೀಡಿದ್ದು, ಎಸ್‌ಪಿ ಸಿದ್ರಾಜು ಸಿ ಅವರ ಮೇಲ್ವಿಚಾರಣೆಯಲ್ಲಿ ದಾಳಿ ಯಶಸ್ವಿಯಾಗಿ ನಡೆದಿದೆ.

## ಬೇವೂರು ಗ್ರಾಪಂಗೆ ಗಾಂಧಿ ಗ್ರಾಮ ಪುರಸ್ಕಾರ




**ಬಾಗಲಕೋಟೆ:** ತಾಲ್ಲೂಕಿನ ಬೇವೂರು ಗ್ರಾಮ ಪಂಚಾಯತಿ 2024–25 ನೆಯ ಸಾಲಿನ ತಾಲ್ಲೂಕು ಮಟ್ಟದ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಆಯ್ಕೆಯಾಗಿದೆ. ಬಾಗಲಕೋಟೆ ತಾಲ್ಲೂಕಿನ ವತಿಯಿಂದ ಬೇವೂರು ಗ್ರಾಪಂ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಆಯ್ಕೆಯಾಗಿದ್ದು, 4 ಲಕ್ಷ ರೂ.ಗಳ ನಗದು ಬಹುಮಾನ ಪಡೆಯಲಿದೆ.

ಮೇ. 19 ರಂದು ಬೆಂಗಳೂರಿನ ಮಿಲ್ಲರ್ಸ್ ರಸ್ತೆಯಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಜರುಗುವ ಸಮಾರಂಭದಲ್ಲಿ ಪುರಸ್ಕಾರ ನೀಡಲಾಗುತ್ತದೆ.

## ‘ಶಿಖಂಡಿ’ಗೆ ಭರ್ಜರಿ ಪ್ರತಿಕ್ರಿಯೆ



**ಬಳ್ಳಾರಿ:** ಶಿಖಂಡಿ ಸಿನಿಮಾ ಇಂದು ರಾಜ್ಯಾದ್ಯಂತ ಭರ್ಜರಿಯಾಗಿ ಬಿಡುಗಡೆಯಾಗಿ, ಬಳ್ಳಾರಿ ಸೇರಿದಂತೆ ವಿವಿಧ ಭಾಗಗಳಲ್ಲಿ ಚಿತ್ರಪ್ರಿಯರಿಂದ ಉತ್ತಮ ಪ್ರತಿಕ್ರಿಯೆ ಪಡೆದುಕೊಂಡಿದೆ. ಪೋಲೊ ಮೂವೀಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗಿರುವ ಈ ಬಹುಭಾಷಾ ಚಿತ್ರಕ್ಕೆ ಮೊದಲ ದಿನವೇ ಸಿನಿರಸಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದೆ.

ನಗರದ ವಿವಿಧ ಶಿವ ಚಿತ್ರ ಮಂದಿರದಲ್ಲಿ ಬಿಡುಗಡೆದ ಶಿಖಂಡಿ ಚಿತ್ರ ಪ್ರೇಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸಿನಿಮಾ ವೀಕ್ಷಿಸಿದರು. ಚಿತ್ರದ ಕಥಾಹಂದರ, ಆಕ್ಷನ್ ದೃಶ್ಯಗಳು, ಭಾವನಾತ್ಮಕ ಅಂಶಗಳು ಹಾಗೂ ತಾಂತ್ರಿಕ ಗುಣಮಟ್ಟಕ್ಕೆ ಸಿನಿಪ್ರಿಯರು ಮೆಚ್ಚುಗೆ ವ್ಯಕ್ತಪಡಿಸಿದರು. ವಿಶೇಷವಾಗಿ ಮಹಾಭಾರತದ ಶಿಖಂಡಿ ಪಾತ್ರದ ಆಧಾರಿತ ಕಥಾ ನಿರೂಪಣೆ ಪ್ರೇಕ್ಷಕರ ಗಮನ ಸೆಳೆದಿದೆ.

ಮೊದಲ ದಿನವೇ ಸಿಕ್ಕ ಸ್ಪಂದನೆ ಚಿತ್ರತಂಡದ ಆತ್ಮವಿಶ್ವಾಸ ಹೆಚ್ಚಿಸಿದೆ. ಚಿತ್ರದ ನಿರ್ಮಾಪಕ ಪೋಲೊ ಪ್ರವೀಣ್ ಕುಮಾರ್ ಅವರು ಮಾತನಾಡಿ, “ಬಳ್ಳಾರಿ ಸೇರಿದಂತೆ ವಿವಿಧ ಭಾಗಗಳಲ್ಲಿ ಚಿತ್ರಕ್ಕೆ ಉತ್ತಮ ಓಪನಿಂಗ್ ಸಿಕ್ಕಿದೆ. ಸ್ಥಳೀಯ ಕಲಾವಿದರಿಗೆ ಅವಕಾಶ ನೀಡಿದ್ದಕ್ಕೆ ಜನರು ಮೆಚ್ಚುಗೆ ಸೂಚಿಸುತ್ತಿದ್ದಾರೆ. ಪ್ರೇಕ್ಷಕರ ಪ್ರೋತ್ಸಾಹ ಮುಂದಿನ ದಿನಗಳಲ್ಲಿ ಇನ್ನಷ್ಟು ಉತ್ತಮ ಸಿನಿಮಾಗಳನ್ನು ನೀಡಲು ಪ್ರೇರಣೆ ನೀಡಲಿದೆ” ಎಂದು ಸಂತಸ ವ್ಯಕ್ತಪಡಿಸಿದರು.

ಚಿತ್ರದಲ್ಲಿ ಬಳ್ಳಾರಿಯ ಸುಮಾರು 22ಕ್ಕೂ ಹೆಚ್ಚು ಸ್ಥಳೀಯ ಕಲಾವಿದರು ಅಭಿನಯಿಸಿರುವುದು ವಿಶೇಷವಾಗಿದ್ದು, ಸ್ಥಳೀಯ ಪ್ರೇಕ್ಷಕರು ತಮ್ಮ ಭಾಗದ ಕಲಾವಿದರನ್ನು ಬೆಳ್ಳಿತೆರೆಯಲ್ಲಿ ನೋಡಿ ಮೆಚ್ಚುಗೆ ಸೂಚಿಸಿದರು. ಚಿತ್ರದ ನಾಲ್ಕು ಹಾಡುಗಳು ಹಾಗೂ ಜಗ್ಗು ಮಾಸ್ಟರ್ ಅವರ ನೃತ್ಯ ಸಂಯೋಜನೆಗೂ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಕನ್ನಡದ ಜೊತೆಗೆ ತಮಿಳು, ಚಿತ್ರ ಬಿಡುಗಡೆಯ ಹಿನ್ನೆಲೆ ಬಳ್ಳಾರಿಯಲ್ಲಿ ಚಿತ್ರಪ್ರಿಯರ ಸಂಭ್ರಮ ಮನೆಮಾಡಿದ್ದು, ಮೊದಲ ದಿನವೇ ಉತ್ತಮ ಪ್ರತಿಕ್ರಿಯೆ ಸಿಕ್ಕಿರುವುದಕ್ಕೆ ಚಿತ್ರತಂಡ ಸಂತೋಷ ವ್ಯಕ್ತಪಡಿಸಿದೆ.

# 12 ವರ್ಷಗಳಿಂದ ಒಂದೇ ಕಡೆ ಬೀಡುಬಿಟ್ಟ PDO, ಜನಾಕ್ರೋಶ!

- **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

"ಗ್ರಾಮ ಸ್ವರಾಜ್ಯ"ದ ಕನಸು ಕಾಣಬೇಕಾದ ಹಳ್ಳಿಗಳು ಇಂದು ಕೊಳಚೆಗುಂಡಿಗಳಾಗಿ ಮಾರ್ಪಟ್ಟಿವೆ. ಅಭಿವೃದ್ಧಿ ಮಾಡಬೇಕಾದ ಅಧಿಕಾರಿಗಳು ಕುಂಭಕರ್ಣ ನಿದ್ರೆಗೆ ಜಾರಿದ್ದಾರೆ. ಬಳ್ಳಾರಿ ಪಂಚಾಯತ್ ವ್ಯಾಪ್ತಿಯ ಗಡಿ ಭಾಗದ ಗ್ರಾಮವೊಂದು ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿದ್ದು, ಜನರ ಬದುಕು ರಸ್ತೆಯ ಮೇಲಿನ ಕೊಳಚೆ ನೀರಿನಂತೆ ಅಯೋಮಯವಾಗಿದೆ.

**ರಸ್ತೆಯೇ ಚರಂಡಿ, ಕೊಳಚೆಯೇ ವಿಧಿ!**

ಗ್ರಾಮದಲ್ಲಿ ಸಮರ್ಪಕ ಚರಂಡಿ ವ್ಯವಸ್ಥೆ ಇಲ್ಲದ ಕಾರಣ, ಮನೆಗಳಿಂದ ಹೊರಬರುವ ಕೊಳಚೆ ನೀರು ನೇರವಾಗಿ ರಸ್ತೆಯ ಮೇಲೆ ಹರಿಯುತ್ತಿದೆ. ಹಗಲು–ರಾತ್ರಿ ಎನ್ನದೆ ಹರಿಯುವ ಈ ಗಬ್ಬು ನಾರುವ ನೀರಿನಲ್ಲೇ ಶಾಲಾ ಮಕ್ಕಳು, ವೃದ್ಧರು ಹಾಗೂ ಗ್ರಾಮಸ್ಥರು ಓಡಾಡಬೇಕಾದ ಅನಿವಾರ್ಯತೆ ಎದುರಾಗಿದೆ. ಸಾಂಕ್ರಾಮಿಕ ರೋಗಗಳ ಭೀತಿ ಎದುರಾಗಿದ್ದರೂ ಪಂಚಾಯತಿ ಮಾತ್ರ ಕಣ್ಣು ಮುಚ್ಚಿ ಕುಳಿತಿದೆ.

**12 ವರ್ಷಗಳಿಂದ ಅಲುಗಾಡದ ಪಿಡಿಒ – ತಾಲ್ಲೂಕು ಅಧಿಕಾರಿಯ ನಿರ್ಲಕ್ಷ್ಯ!**

ಈ ಅವ್ಯವಸ್ಥೆಗೆ ಕಾರಣವೇನು ಎಂದು ಹುಡುಕುತ್ತಾ ಹೋದರೆ ಕಾಣುವುದು ಅಧಿಕಾರಿಗಳ ಸರ್ವಾಧಿಕಾರ ಧೋರಣೆ.

**PDO ಅಟ್ಟಹಾಸ:** ಇಲ್ಲಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿ (PDO) ಕಳೆದ 12 ವರ್ಷಗಳಿಂದ ಒಂದೇ ಸ್ಥಳದಲ್ಲಿ ಬೀಡುಬಿಟ್ಟಿದ್ದಾರೆ. ಇಷ್ಟೊಂದು ದೀರ್ಘಕಾಲದವರೆಗೆ ಒಂದೇ ಕಡೆ ಇರುವುದು ಹತ್ತಾರು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ.








**ಮರ್ಯಾದೆ ತೆಗೆದ ಪವನ್ ಕುಮಾರ್:** ತಾಲ್ಲೂಕು ಮಟ್ಟದ ಅಧಿಕಾರಿ ಪವನ್ ಕುಮಾರ್ ಅವರ ಕಾರ್ಯವೈಖರಿ ಇಡೀ ಇಲಾಖೆಯ ಘನತೆಗೆ ಧಕ್ಕೆ ತಂದಿದೆ ಎಂಬ ಮಾತುಗಳು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿವೆ.

**ಕರೆ ಸ್ವೀಕರಿಸದ CEO ಹ್ಯಾರಿಸ್: ಜನಪ್ರತಿನಿಧಿಗಳೇ ಎತ್ತ ನಿಮ್ಮ ಗಮನ?**

ಗ್ರಾಮಸ್ಥರು ತಮ್ಮ ಗೋಳನ್ನು ತೋಡಿಕೊಳ್ಳಲು ಜಿಲ್ಲಾ ಪಂಚಾಯತ್ ಸಿಇಒ (CEO) ಹ್ಯಾರಿಸ್ ಅವರಿಗೆ ದೂರವಾಣಿ ಕರೆ ಮಾಡಿದರೆ, ಅವರು ‘ಕ್ಯಾರೇ’ ಎನ್ನುತ್ತಿಲ್ಲ. ಕೇವಲ ಸಿಇಒ ಮಾತ್ರವಲ್ಲ, ಇಲಾಖೆಯ ಬಹುತೇಕ ಸಿಬ್ಬಂದಿ ಜನರ ಫೋನ್ ಕರೆಗಳಿಗೆ ಸ್ಪಂದಿಸುವುದನ್ನೇ ನಿಲ್ಲಿಸಿದ್ದಾರೆ. ಗಡಿ ಭಾಗದ ಗ್ರಾಮವೆಂಬ ಕಾರಣ–ಕ್ಕೆ ಈ ಮಟ್ಟದ ನಿಷ್ಕಾಳಜಿ ವಹಿಸಲಾಗುತ್ತಿದೆಯೇ? ಎಂಬುದು ಗ್ರಾಮಸ್ಥರ ನೇರ ಪ್ರಶ್ನೆ.

**ಹಣದ ಕೊರತೆಯೋ? ಇಚ್ಛಾಶಕ್ತಿಯ ಕೊರತೆಯೋ?**

ಬಳ್ಳಾರಿ ಪಂಚಾಯತಿಯಲ್ಲಿ ಮೂಲಭೂತ ಸೌಕರ್ಯ ಒದಗಿಸಲು ಹಣದ ಕೊರತೆ ಇದೆಯೇ? ಅಥವಾ ಬಂದ ಹಣ ಅಧಿಕಾರಿಗಳ ಜೇಬು ಸೇರುತ್ತಿದೆಯೇ? ಎಂಬ ಸಂಶಯ ಕಾಡುತ್ತಿದೆ. ಅಭಿವೃದ್ಧಿಯ ಹೆಸರಿನಲ್ಲಿ ಕೋಟಿ ಕೋಟಿ ಹಣ ಬಿಡುಗಡೆಯಾಗುತ್ತಿದ್ದರೂ, ಹಳ್ಳಿಯ ರಸ್ತೆಗಳು ಮಾತ್ರ ನರಕಕ್ಕೆ ದಾರಿಯಾಗಿವೆ. ಗ್ರಾಮಸ್ಥರ ಎಚ್ಚರಿಕೆ "ಇನ್ನಾದರೂ ಸಂಬಂಧಪಟ್ಟ ಉನ್ನತ ಅಧಿಕಾರಿಗಳು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಈ ಬಗ್ಗೆ ಗಮನಹರಿಸಬೇಕು. 12 ವರ್ಷಗಳಿಂದ ಜೇಡನಂತೆ ಅಂಟಿಕೊಂಡಿರುವ ಅಧಿಕಾರಿಯನ್ನು ವರ್ಗಾವಣೆ ಮಾಡಿ, ಗ್ರಾಮಕ್ಕೆ ಕನಿಷ್ಠ ಚರಂಡಿ ವ್ಯವಸ್ಥೆ ಕಲ್ಪಿಸದಿದ್ದರೆ ಮುಂದಿನ ದಿನಗಳಲ್ಲಿ ತೀವ್ರ ಸ್ವರೂಪದ ಪ್ರತಿಭಟನೆ ನಡೆಸಲಾಗುವುದು.

# ಎಂಪಿ, ಡಿಸಿ ನೇತೃತ್ವದಲ್ಲಿ ಭೂಸ್ವಾಧೀನ ಕುರಿತು ಚರ್ಚೆ

- **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ಜಿಲ್ಲೆಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ರೇಲ್ವೆ ಹಾಗೂ ರಾಷ್ಟ್ರೀಯ ಹೆದ್ದಾರಿ ಯೋಜನೆಗಳಿಗೆ ಸಂಬಂಧಿಸಿದ ಭೂಸ್ವಾಧೀನ ಪ್ರಕ್ರಿಯೆ ಕುರಿತು ಸಂಸದ ಪಿ.ಸಿ.ಗದ್ದಿಗೌಡರ ಹಾಗೂ ಜಿಲ್ಲಾಧಿಕಾರಿ ಸಂಗಪ್ಪ ಅವರ ನೇತೃತ್ವದಲ್ಲಿ ಶುಕ್ರವಾರ ಚರ್ಚೆ ನಡೆಸಲಾಯಿತು.

ಜಿಲ್ಲಾಧಿಕಾರಿಗಳ ಸಭಾಂಗಭದಲ್ಲಿ ಭೂಸ್ವಾಧೀನ ಕುರಿತು ಸಂಬಂಧಿಸಿದ ಅಧಿಕಾರಿಗಳ ಜೊತೆಗೆ ಚರ್ಚೆ ನಡೆಸಲಾಯಿತು. ರಾಷ್ಟ್ರೀಯ ಹೆದ್ದಾರಿ, ಭಾರತೀಯ ರಾಷ್ಟ್ರೀಯ ಹೆದ್ದಾರಿ ಹಾಗೂ ರೇಲ್ವೆ ಯೋಜನೆಗಳ ವ್ಯಾಪ್ತಿಗೆ ಬೇಕಾಗುವ ಭೂಮಿ ಭೂಸ್ವಾಧೀನ ಹಾಗೂ ಬಾಕಿ ಪ್ರಕರಣಗಳ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ಯೋಜನೆಗಳ ಅನುಷ್ಠಾನಕ್ಕೆ ಬೇಕಾಗುವ ಅಗತ್ಯವಿರುವ ಭೂಸ್ವಾಧೀನ ಪ್ರಕ್ರಿಯೆಯನ್ನು ತ್ವರಿತಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು.



ಯೋಜನೆ ಅನುಷ್ಠಾನದಲ್ಲಿ ಕೆಲವೊಂದು ತೊಂದರೆಗಳು ಎದುರಾಗುವುದು ಸಹಜ. ಆದರೆ ಅವಗಳನ್ನು ಪರಿಹರಿಸಿಕೊಂಡು ಕಾಮಗಾರಿ ಕೆಲಸ ಪೂರ್ಣಗೊಳಿಸುವಲ್ಲಿ ಅಧಿಕಾರಿಗಳ ಪಾತ್ರ ಮಹತ್ವವಾಗಿದೆ. ಜವಾಬ್ದಾರಿಯಿಂದ ಕೆಲಸ ನಿರ್ವಹಿಸುತ್ತಿಲ್ಲ. ಇದರಿಂದ ಯೋಜನೆಗಳ ಅನುಷ್ಠಾನದಲ್ಲಿ ಕುಂಟಿತವಾಗುತ್ತಿದೆ. ಬಾಗಲಕೋಟೆ–ಕುಡಚಿ ರೇಲ್ವೆ ಮಾರ್ಗಕ್ಕಾಗಿ ಭೂಸ್ವಾಧೀನ ಕಾರ್ಯ ಪ್ರಾರಂಭವಾಗಿ ಹಲವು ವರ್ಷಗಳು ಕಳೆದಿವೆ. ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿಲ್ಲ. ಇದಕ್ಕೆ ಕಾರಣಗಳೇನು ಎಂಬ ಬಗ್ಗೆ ಪ್ರಶ್ನೆಗಳನ್ನು ಹಾಕಲಾಯಿತು.

ಯೋಜನೆ ಅನುಷ್ಠಾದಲ್ಲಿ ವಿಳಂಬ ಏಕೆ, ನ್ಯಾಯಾಲಯ ಪ್ರಕರಣಗಳು ಇದ್ದಲ್ಲಿ ಅವು ಯಾವ ಹಂತದಲ್ಲಿವೆ ಎಂಬ ಮಾಹಿತಿಯನ್ನು ಅಧಿಕಾರಿಗಳಿಗೆ ಕೇಳಲಾಯಿತು. ಯೋಜನೆ ಅನುಷ್ಠಾನಕ್ಕೆ ಹಿಂದೇಟು ಹಾಕುತ್ತಿರುವುದು ಬೇಜವಾಬ್ದಾರಿತನ ಎದ್ದು ತೆ–ೂರುತ್ತಿದೆ. ಇದರಿಂದ ಸರಿಯಾಗಿ ಕೆಲಸ ಆಗುತ್ತಿಲ್ಲ. ನಿಮ್ಮ ವರ್ತನೆ ಬದಲಾಯಿಸಿಕೊಳ್ಳುವಂತೆ ರೇಲ್ವೆ ಇಲಾಖೆಯ ಕಾರ್ಯಪಾಲಕ ಅಭಿಯಂತರ ರಾಜು ನಾಯಕಗೆ ಸೂಚನೆ ನೀಡಲಾಯಿತು.

ರಬಕವಿ–ಬನಹಟ್ಟಿ ಭಾಗದಲ್ಲಿ 25 ಕಿ.ಮೀ ಬಗ್ಗೆ ಪ್ರಸ್ತಾವನೆ ನೀಡಿಲ್ಲ. ಲೋಕಾಪೂರದಿಂದ ದಾದನಟ್ಟಿ ವರೆಗಿನ ರೇಲ್ವೆ ಮಾರ್ಗದಲ್ಲಿ 6.6 ಕಿ.ಮೀ ಕೆಲಸ ಆಗುತ್ತಿಲ್ಲ. ಇದಕ್ಕೆ ಕಾರಣವೇನು. ದಾದನಟ್ಟಿಯಿಂದ ಯಾದವಾಡ ಮಾರ್ಗದ ಬಗ್ಗೆ ಹಾರಿಕೆ ಉತ್ತರ ಕೊಡುವುತ್ತಿರುವ ಅಧಿಕಾರಿಗಳ ಮೇಲೆ ಸಂಸದರು ಅಸಮಾಧಾನ ವ್ಯಕ್ತಪಡಿಸಿ, ವಾರದಲ್ಲಿ ಪ್ರಗತಿ ತೋರಿಸಲು ಕಟ್ಟುನಿಟ್ಟಿನ ಸೂಚನೆ ನೀಡಲಾಯಿತು. ಗದ್ದನಕೇರಿಯಿಂದ ಶಿರೂರವರೆಗಿನ ಚತುಷ್ಪಥ ರಸ್ತೆ ನಿರ್ಮಾಣ ಕಾಮಗಾರಿಯಲ್ಲಿ 2.7 ಕಿ.ಮೀ ರಸ್ತೆ ನಿರ್ಮಾಣ ಕಾಮಗಾರಿ ಮಾತ್ರ ಬಾಕಿ ಇರುತ್ತದೆ. ಇದು ಕೂಡಾ ಶಿಘ್ರದಲ್ಲಿ ಪೂರ್ಣಗೊಳಿಸಬೇಕು. ಅಲ್ಲದೇ ಪಟ್ಟದಕಲ್ಲದಿಂದ ಶಿರೂರವರೆಗಿನ ರಸ್ತೆ ನಿರ್ಮಾಣದಲ್ಲಿ ಅರಣ್ಯ ಇಲಾಖೆಯಿಂದ ವಿಳಂಬವಾಗಿದೆ ಎಂದು ಸಂಬಂಧಿಸಿದ ಅಧಿಕಾರಿಗಳು ತಿಳಿಸಿದರೆ, ಅಧಿಕಾರಿಗಳಿಗೆ ಜನರ ತೊಂದರೆ ಅರ್ಥವಾಗುತ್ತಿಲ್ಲ. ಸರಿಯಾಗಿ ಕೆಲಸ ನಿರ್ವಹಿಸುವಂತೆ ತಿಳಿಸಲಾಯಿತು. ಜಿಲ್ಲೆಯಲ್ಲಿ ಹಾದು ಹೋಗುವ ಭಾರತ ಮಾಲಾ ಪ್ರೋಜೆಕ್ಟ ಬಗ್ಗೆಯೂ ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಭೂ ದಾಖಲೆ ಇಲಾಖೆಯ ಉಪನಿರ್ದೇಶಕ ರವಿಕುಮಾರ ಎಂ, ಲೋಕೋಪಯೋಗಿ ಇಲಾಖೆಯ ಮುಖ್ಯ ಅಭಿಯಂತರ ದುರ್ಗಾದಾಸ ಸೇರಿದಂತೆ ಭಾರತೀಯ ರಾಷ್ಟ್ರೀಯ ಹೆದ್ದಾರಿ ಯೋಜನೆಯ ಪ್ರೋಜೆಕ್ಟ ಡೈರೆಕ್ಟರ, ಎಸ್‌ಎಲ್‌ಎಓ ಹಾಗೂ ಇತರರು ಇದ್ದರು.

# ಮಾಜಿ ಸದಸ್ಯ ಜೆ. ನಾಗರಾಜ್ ಅವರ 49ನೇ ಹುಟ್ಟುಹಬ್ಬ ಆಚರಣೆ

- **ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ**

ನಗರಸಭೆ ಮಾಜಿ ಉಪಾಧ್ಯಕ್ಷ 5ನೇ ವಾರ್ಡ್‌ನ ಮಾಜಿ ಸದಸ್ಯ ಜೆ. ನಾಗರಾಜ್ ಅವರ 49ನೇ ಹುಟ್ಟುಹಬ್ಬವನ್ನು ಇಂದು ಅಭಿಮಾನಿಗಳು ಅರ್ಥಪೂರ್ಣವಾಗಿ ಆಚರಿಸಿದರು. ಅವರ ಅಭಿಮಾನಿಗಳ ವತಿಯಿಂದ ಹಸಿದವರಿಗೆ ಅನ್ನಸಂತರ್ಪಣೆ ನಡೆಸಿ, ಧಾರ್ಮಿಕ ಸ್ಥಳಗಳಲ್ಲಿಯೂ ಅನ್ನ ವಿತರಿಸುವ ಸೇವಾ ಕಾರ್ಯಕ್ರಮಗಳನ್ನು ಆಯೋಜಿಸಲಾಯಿತು. 5ನೇ ವಾರ್ಡ್‌ನಲ್ಲಿ ಅಭಿಮಾನಿಗಳು, ಸ್ನೇಹಿತರು ಹಾಗೂ ವಾರ್ಡ್ ನಿವಾಸಿಗಳೊಂದಿಗೆ ಜೆ. ನಾಗರಾಜ್ ಕೇಕ್ ಕತ್ತರಿಸಿ ಹುಟ್ಟುಹಬ್ಬದ ಸಂಭ್ರಮವನ್ನು ಸರಳವಾಗಿ ಆಚರಿಸಿದರು.

ಈ ವೇಳೆ ಮಾತನಾಡಿದ ಜೆ.ನಾಗರಾಜ್, ವಾರ್ಡ್‌ನ ನಾಗರಿಕರು ನನಗೆ ಕುಟುಂಬ ಸದಸ್ಯರಂತಿದ್ದಾರೆ. ಅವರ ಒತ್ತಾಯದ ಮೇರೆಗೆ ಈ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದೇನೆ. ಹುಟ್ಟುಹಬ್ಬವನ್ನು ಆಡಂಬರದಿಂದ ಆಚರಿಸುವುದು ನನಗೆ ಇಷ್ಟವಿಲ್ಲ ಪ್ರತಿ ವರ್ಷವೂ ವಾನರ ಮತ್ತು ಶ್ವಾನಗಳಿಗೆ ಹಣ್ಣು ಸೇರಿದಂತೆ ಆಹಾರ ನೀಡುತ್ತಿದ್ದೆ. ಈ ವರ್ಷ ಹಸಿದವರಿಗೆ ಅನ್ನಸಂತರ್ಪಣೆ ಮತ್ತು ಧಾರ್ಮಿಕ ಸ್ಥಳಗಳಲ್ಲಿ ಅನ್ನ ವಿತರಣೆ ಮಾಡುವ ಕಾರ್ಯ ಕೈಗೊಂಡಿದ್ದೇವೆ. ಜೊತೆಗೆ ಅಂಗನವಾಡಿ ಮಕ್ಕಳು ಬಂದು ಶುಭಾಶಯ ಕೋರಿರುವುದು ತುಂಬಾ ಸಂತೋಷ ತಂದಿದೆ ಎಂದು ಹೇಳಿದರು.



ಇನ್ನೂ ತಮ್ಮ ನಗರಸಭೆ ಸದಸ್ಯರ ಅವಧಿ ಮುಗಿದ ನಂತರವೂ ವಾರ್ಡ್‌ನ ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತಿರುವ ಬಗ್ಗೆ ಮಾತನಾಡಿದ ಅವರು ಅಧಿಕಾರ ಇರಲಿ ಬಿಡಲಿ, ಜನರು ನೀಡಿದ ವಿಶ್ವಾಸಕ್ಕೆ ತಕ್ಕಂತೆ ಅವರ ಸಮಸ್ಯೆಗಳಿಗೆ ಸ್ಪಂದಿಸುವುದು ನನ್ನ ಗುರಿ. ವಾರ್ಡ್‌ನಲ್ಲಿ ಮೂಲಭೂತ ಸಮಸ್ಯೆಗಳು ಉಂಟಾಗದಂತೆ ಗಮನ ಹರಿಸುತ್ತಿದ್ದೇನೆ. ವಾರ್ಡ್ ಜನರು ತೋರಿಸಿದ ಪ್ರೀತಿಗೆ ನಾನು ಸದಾ ಕೃತಜ್ಞ ಎಂದು ಹೇಳಿದರು. ಈ ಸಂದರ್ಭದಲ್ಲಿ 26 ನೇ ವಾರ್ಡ್ನಿನ ಮುಖಂಡ ಸಂತೋಷ್, ಸಾಮ್ಯೂಲ್ ಸಂದೀಪ್, ಬಾಲು, ರವಿ, ಮುದ್ದು ಗಂಗಪ್ಪ, ಸುಹೇಲ್ ಇತರರು ಉಪಸ್ಥಿತರಿದ್ದರು.

# ಎಐಡಿಎಸ್‌ಒ ನೇತೃತ್ವದಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆ




- **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ನೀಟ್ ಯುಜಿ ಪ್ರಶ್ನೆಪತ್ರಿಕೆ ಸೋರಿಕೆಯ ಹಿನ್ನೆಲೆಯಲ್ಲಿ ಪರೀಕ್ಷೆಯನ್ನು ರದ್ದುಗೊಳಿಸಲಾಗಿದ್ದು, ಈ ಕೂಡಲೇ ಪ್ರಶ್ನೆ ಪತ್ರಿಕೆ ಸೋರಿ–ಕೆಗೆ ಕಾರಣರಾದವರಿಗೆ ನಿದರ್ಶನೀಯ ಶಿಕ್ಷೆ ವಿಧಿಸಬೇಕು ಹಾಗೂ ಎನ್‌ಟಿಎ (ರಾಷ್ಟ್ರೀಯ ಪರೀಕ್ಷಾ ಸಂಸ್ಥೆ) ಯನ್ನು ರದ್ದುಗೊಳಿಸಬೇಕು ಎಂದು ಆಗ್ರಹಿಸಿ ಕೊಪ್ಪಳದ ಬಸ್ ನಿಲ್ದಾಣದ ಕನಕದಾಸ ವೃತ್ತದಲ್ಲಿ ಎಐಡಿಎಸ್‌ಒ ನೇತೃತ್ವದಲ್ಲಿ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದರು

ಪ್ರತಿಭಟನೆಯನ್ನು ಉದ್ದೇಶಿಸಿ ಎಐಡಿಎಸ್‌ಒ ರಾಜ್ಯ ಮುಖಂಡರಾದ ತುಳಜರಾಮ್ ಎನ್. ಕೆ ಮಾತನಾಡಿ, "ಪದೇ ಪದೇ ಮರುಕಳಿಸುತ್ತಿರುವ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಕೇವಲ ಒಂದು ಪರೀಕ್ಷಾ ಸಂಸ್ಥೆಯ ವೈಫಲ್ಯವಲ್ಲ; ಇದು ಲಕ್ಷಾಂತರ ಪ್ರಾಮಾಣಿಕ ವಿದ್ಯಾರ್ಥಿಗಳ ಬೆವರು ಮತ್ತು ಕನಸುಗಳ ಮೇಲೆ ಎಸಗುತ್ತಿರುವ ಘೋರ ದೌರ್ಜನ್ಯವಾಗಿದೆ. ಕೇವಲ ಮೂರು ವರ್ಷಗಳಲ್ಲಿ ಎರಡನೇ ಬಾರಿಗೆ ವೈದ್ಯಕೀಯ ಶಿಕ್ಷಣದ ಕನಸು ಹೊತ್ತವರ ಆಶೋತ್ತರಗಳನ್ನು ಅತಿ ಹೆಚ್ಚು ಹಣ ನೀಡುವವರಿಗೆ ಹರಾಜು ಹಾಕಲಾಗಿದೆ. ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯು "ಕೋಚಿಂಗ್ ಮಾಫಿಯಾ"ದ ಕೈಗೊಂಬೆಯಂತೆ

ವರ್ತಿಸುತ್ತಿರುವುದು ಇಡೀ ವ್ಯವಸ್ಥೆಯ ಹದಗೆಟ್ಟ ಸ್ಥಿತಿಯನ್ನು ತೋರಿಸುತ್ತಿದೆ. ಈ ವ್ಯವಸ್ಥೆಯು ‘ವಿದ್ಯಾರ್ಥಿಗಳಲ್ಲಿ ತೀವ್ರ ಆತಂಕ ಮತ್ತು ಹತಾಶೆಯನ್ನು ಮೂಡಿಸಿದೆ. ಕೇವಲ ಲಾಭಕ್ಕಾಗಿ ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯನ್ನು ವ್ಯವಸ್ಥಿತವಾಗಿ ನಾಶಪಡಿಸುತ್ತಿರುವುದು ಖಂಡನೀಯ" ಕೆಲವರ ಸಂಸ್ಥೆಯು (ಎನ್‌ಟಿಎ) ’ಕೋಚಿಂಗ್ ಮಾಫಿಯಾ’ದ ಕೈಗೊಂಬೆಯಂತೆ ಎಂದರು. “ನಮ್ಮ ವಿದ್ಯಾರ್ಥಿಗಳ ಭವಿಷ್ಯದ ಅಡಿಪಾಯವನ್ನೇ ಭ್ರಷ್ಟಾಚಾರ ಮತ್ತು ಆಡಳಿತಾತ್ಮಕ ನಿರ್ಲಕ್ಷ್ಯ–ಕ್ಕೆ ಬಲಿ ನೀಡಲಾಗುತ್ತಿದೆ. ಶಿಕ್ಷಣ ವ್ಯವಸ್ಥೆಯನ್ನು ಮಾರುಕಟ್ಟೆಯನ್ನಾಗಿ ಮಾಡಿಕೊಂಡಿರುವವರಿಂದ ಇಂತಹ ಸಮಸ್ಯೆಗಳು ಪದೇ ಪದೇ ಹಲವು ಕೇಂದ್ರೀಕೃತ ಪರೀಕ್ಷೆಗಳಲ್ಲಿ ಮರುಕಳಿಸುತ್ತಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪಾರದರ್ಶಕವಾಗಿ ಮತ್ತು ಸುರಕ್ಷಿತವಾಗಿ ಪರೀಕ್ಷೆಗಳನ್ನು ನಡೆಸುವಲ್ಲಿ ಪದೇ ಪದೇ ವಿಫಲವಾಗಿ ದೇಶದ ನಂಬಿಕೆಯನ್ನು ಕಳೆದುಕೊಂಡಿರುವ ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯನ್ನು ಸಂಪೂರ್ಣವಾಗಿ ರದ್ದುಗೊಳಿಸಬೇಕು. ಪ್ರಶ್ನೆ ಪತ್ರಿಕೆ ಸೋರಿಕೆ–ಯ ಹಿಂದೆ ಇರುವ ವ್ಯಕ್ತಿಗಳು ಮತ್ತು ಮಾಫಿಯಾ’ವನ್ನು ಪತ್ತೆಹಚ್ಚಲು ಉನ್ನತ ಮಟ್ಟದ ಸ್ವತಂತ್ರ ನ್ಯಾಯಾಂಗ ತನಿಖೆಯಾಗಬೇಕು ಹಾಗೂ ತಪ್ಪಿತಸ್ಥರಿಗೆ ನಿದರ್ಶನೀಯ ಶಿಕ್ಷೆಯಾಗಬೇಕು. ಪ್ರವೇಶ ಪರೀಕ್ಷಾ ಪದ್ಧತಿಯನ್ನು ಅಮೂಲಾಗ್ರವಾಗಿ ಬದಲಿಸಿ, ಅದು ಸಾಮಾನ್ಯರಿಗೂ ಲಭ್ಯವಿರುವಂತೆ, ಪಾರದರ್ಶಕವಾಗಿ ಮತ್ತು ಖಾಸಗಿ ವಾಣಿಜ್ಯ ಹಿತಾಸಕ್ತಿಗಳಿಂದ ಮುಕ್ತವಾಗಿರುವಂತೆ ನೋಡಿಕೊಳ್ಳಬೇಕು. ಅನ್ಯಾಯದ ವಿರುದ್ಧ ಹೋರಾಡಲು ಪ್ರತಿಯೊಬ್ಬ ವಿದ್ಯಾರ್ಥಿ ಮತ್ತು ಶಿಕ್ಷಣ ಪ್ರೇಮಿ ಸಮುದಾಯ ಮುಂದೆ ಬರಬೇಕು" ಎಂದು ಕರೆ ನೀಡಿದರು. ಪ್ರತಿಭಟನೆಯಲ್ಲಿ ಎಐಡಿಎಸ್‌ಓ ಜಿಲ್ಲಾ ಸಂಘಟನಾಕಾರರಾದ ಪ್ರದೀಪ್, ಶಾರದ, ಪೋಷಕರಾದ ಸಿದ್ದಲಿಂಗರೆಡ್ಡಿ, ಶರಣು ಗಡ್ಡಿ, ವಿದ್ಯಾರ್ಥಿಗಳಾದ ಅಭಿಷೇಕ್, ಪಲ್ಲವಿ, ಪ್ರತಿಭಾ, ಸ್ಫೂರ್ತಿ, ಸ್ನೇಹ ಸೇರಿದಂತೆ ನೂರಾರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಪ್ರಶಸ್ತಿ ಹಾಗೂ ಶಿಷ್ಯವೇತನ ಬಿಡುಗಡೆ ಮಾಡಲು ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಹೊರನಾಡು ಕನ್ನಡಿಗರಿಗೆ ಒಳನಾಡಿನ ಅಭ್ಯರ್ಥಿಗಳ ಮಾದರಿಯಲ್ಲಿ ಸೌಲಭ್ಯ ಕಲ್ಪಿಸಬೇಕು ಹಾಗೂ ಗಡಿನಾಡು ಹಾಗೂ ಹೊರನಾಡು ಕನ್ನಡಿಗರ ಜ್ವಲಂತ ಸಮಸ್ಯೆಗಳ ಬಗ್ಗೆ ಕ್ರಮಕೈಗೊಳ್ಳಬೇಕು, ಕನ್ನಡ ಅಭೀವೃದ್ಧಿ ಪ್ರಾಧಿಕಾರದ ಯೋಜನೆಯಾದ ಗಡಿನಾಡು ಕನ್ನಡ ವಿದ್ಯಾರ್ಥಿಗಳ "ಕನ್ನಡ ಮಾಧ್ಯಮ ಪ್ರಶಸ್ತಿ" ಹಾಗೂ ಶಿಷ್ಯವೇತನ ಬಿಡುಗಡೆ ಮಾಡಲು ಹೊರನಾಡು ಕನ್ನಡಿಗರ ಹೊರಾಟ ಸಮಿತಿ ಅಧ್ಯಕ್ಷ ಧರ್ಮೇಂದ್ರ ಪೂಜಾರಿ ಬಗ್ದೂರಿ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮನವಿ ಸಲ್ಲಿಸುವ ಮೂಲಕ ಒತ್ತಾಯಿಸಿದ್ದಾರೆ.

ಪ್ರತಿಭಾವಂತರಿಗೆ ಆರ್ಥಿಕವಾಗಿ ಪ್ರಯೋಜನೆಯಾಗಿರುವ ಯೋಜನೆ ಕನ್ನಡ ಅಭಿವೃದ್ದಿ ಪ್ರಾಧಿಕಾರದ ಅಧ್ಯಕ್ಷ ಪ್ರೋ ಪುರುಷೋತ್ತಮ ಬಿಳಿಮಲೆಯವರ ಇಚ್ಛಾಶಕ್ತಿ ಕೊರತೆ ಮತ್ತು ನಿರ್ಲಕ್ಷದಿಂದ ಈ ಯೋಜನೆಯನ್ನು ನಿಲ್ಲಿಸಿದ್ದಾರೆ.

ದೇಶದಲ್ಲಿ ಭಾಷಾವಾರು ಪ್ರಾಂತ ರಚನೆಯಾದ ನಂತರ ಅನೇಕ ಗಡಿ ರಾಜ್ಯಗಳಲ್ಲಿ ಅನೇಕ ಕನ್ನಡಿಗರು ತಮ್ಮ ಉಪಜೀವನಕ್ಕಾಗಿ ಆಂಧ್ರಪ್ರದೇಶ, ತೆಲಂಗಾಣ, ಮಹಾರಾಷ್ಟ್ರ, ಕೇರಳ, ತಮಿಳನಾಡು, ಗೋವಾ ಹೀಗೆ ಅನೇಕ ರಾಜ್ಯಗಳಲ್ಲಿ ಕನ್ನಡಿಗರು ವಾಸಿಸುತ್ತಿರುವುದು ತಮ್ಮ ಗಮನದಲ್ಲಿದು. ಕನ್ನಡ ಅಭೀವೃದ್ಧಿ ಪ್ರಾಧಿಕಾರದ ಯೋಜನೆಯಾದ ಗಡಿನಾಡು ಕನ್ನಡ ವಿದ್ಯಾರ್ಥಿಗಳ ಮಾಧ್ಯಮ ಪ್ರಶಸ್ತಿ ಹಾಗೂ ಶಿಷ್ಯವೇತನ ಬಿಡುಗಡೆ ಮಾಡಲು ಒತ್ತಾಯ



2011–12ರಲ್ಲಿ ಆರಂಭವಾದ ಯೋಜನೆ 2022–23ರಿಂದ ಕನ್ನಡ ಅಭಿವೃದ್ಧಿ ಪ್ರಾಧಿಕಾರ ರದ್ದು ಮಾಡಿದೆ ಸರ್ಕಾರ ಈ ಯೋಜನೆಯನ್ನು ಶೀಘ್ರವೇ ಆರಂಭ ಮಾಡಿ ಶಿಷ್ಯ ವೇತನ ನೀಡಿದರೆ ಬಡಕುಟುಂಬದ ಮಕ್ಕಳಿಗೆ ಹೆಚ್ಚಿನ ವಿದ್ಯಾಭ್ಯಾಷ್ಯಕ್ಕೆ ಅನುಕೂಲವಾಗಲಿದೆ. ಗಡಿ ಭಾಗದಲ್ಲಿ ಮಕ್ಕಳು ಕನ್ನಡ ಮಾಧ್ಯಮಕ್ಕೆ ಒಲವು ತೊರಲು ಈ ಯೋಜನೆ ಎಷ್ಟೋಂದು ಪರಿಣಾಮಕಾರಿಯಾಗಿದೆ. ದಯವಿಟ್ಟು ಈ ಕನ್ನಡ ಮಾಧ್ಯಮ ಪ್ರಶಸ್ತಿಯನ್ನು ಶೀಘ್ರವೇ ಆರಂಭಿಸಬೇಕಾಗಿ ಮನವಿ. ಹೀಗಾಗಿ ನಮ್ಮ ಹೊರ ನಾಡು ಕನ್ನಡಿಗರ ಪರವಾಗಿ ತೆಲಂಗಾಣ ರಾಜ್ಯದ ಗಡಿ ಭಾಗವಾದ ಸಂಗಾ–ರೆಡ್ಡಿ ಜಿಲ್ಲೆಯ ನಾರಾಯಣಖೇಡ ತಾಲೂಕಿನ ಅನೇಕ ಗ್ರಾಮಗಳಲ್ಲಿ ಕನ್ನಡ ಮಾಧ್ಯಮ ಶಾಲೆ ಇರುವ ಕಾರಾಮುಂಗಿ, ಶಿಖರಖಾನ, ಗಡಿಗಾವ, ಔಧತಪೂರ, ಎಸಗಿ, ಶಾಹಾಪುರ, ಮೋರಗಿ, ಗೊಂದೆಗಾಂವ, ರತ್ನಾಪೂರ ಗ್ರಾಮಗಳಲ್ಲಿ ಒಟ್ಟು 485 ಜನ ವಿದ್ಯಾರ್ಥಿಗಳು ಕನ್ನಡ ಮಾಧ್ಯಮದಲ್ಲಿ ಓದುತ್ತಿರುವುದನ್ನು ತಮ್ಮ ಜಿಲ್ಲಾಡಳಿತವತಿಯಿಂದ ಬೆಳಗಾವ, ರಾಯಚೂರ ಜಿಲ್ಲಾಡಳಿತ ಮಾದರಿಯಲ್ಲಿಯೇ ತಾವು ತಮ್ಮ ಜಿಲ್ಲೆಯಿಂದ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಬೇಕಾಗಿ ವಿನಂತಿ. ನಮ್ಮ ಸಮಸ್ಯೆಗಳನ್ನು ಸರ್ಕಾರದ ದೃಷ್ಟಿಗೆ ತಂದು ಶಾಶ್ವತ ಪರಿಹಾರಕ್ಕೆ ತಾವು ಪ್ರಯತ್ನಿಸಬೇಕಾಗಿ ಎಲ್ಲಾ ಹೊರನಾಡು ಕನ್ನಡಿಗರ ಪರವಾಗಿ ಧರ್ಮೇಂದ್ರ ಪೂಜಾರಿ ಬಗ್ದೂರಿ ಮನವಿ ಮಾಡಿದ್ದಾರೆ.

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಹೊರನಾಡಿನಲ್ಲಿ ಬದುಕು ಕಟ್ಟಿಕೊಂಡು ಜೀವಿಸುತ್ತಿರುವ ಎಲ್ಲಾ ಕನ್ನಡಿಗರಿಗೆ ಕರ್ನಾಟಕ ಸರ್ಕಾರದಿಂದ ಮೂಲ ಸೌಕರ್ಯ ಕಲ್ಪಿಸುವ ಕುರಿತು ತಮ್ಮ ಗಮನಕ್ಕೆ ತರುತ್ತಿರುವೆ. ಅನೇಕ ಸಮಸ್ಯೆಗಳನ್ನು ಹೊರನಾಡಿನ ಕನ್ನಡಿಗರು ಅನುಭವಿಸುತ್ತಿದ್ದಾರೆ ಈ ನಿಟ್ಟಿನಲ್ಲಿ ನಮ್ಮ ಕರ್ನಾಟಕ ಘನ ಸರ್ಕಾರವು ಕಾಳಜಿವಹಿಸಿ ತೆಲಂಗಾಣ, ಆಂಧ್ರಪ್ರದೇಶ, ಮಹಾರಾಷ್ಟ್ರ, ಕೇರಳ, ಗೋವಾ, ತಮಿಳನಾಡು ಹೀಗೆ ಹೊರ ರಾಜ್ಯದಲ್ಲಿ ಬದುಕುತ್ತಿರುವ ಪಾಲಕರ ಮಕ್ಕಳಿಗೆ ಕನ್ನಡ ಮಾಧ್ಯಮ ಓದುತ್ತಿರುವ ವಿದ್ಯಾರ್ಥಿಗಳಿಗೆ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ ಹೀಗಾಗಿ ಎಲ್ಲಾ ಕನ್ನಡ ಮಕ್ಕಳಿಗೆ ಕನ್ನಡ ಮಾಧ್ಯಮದಲ್ಲಿ ಶಿಕ್ಷಣ ಒದಗಿಸುವ ಮೂಲ ವ್ಯವಸ್ಥೆಯನ್ನು ತಾವು ಮಾಡಿಕೊಡಬೇಕಾಗಿ ವಿನಂತಿ. ಸರ್ಕಾರವು ಆಚರಣೆಗೆ ತಂದಿರುವ ಅನೇಕ ಅನುಷ್ಠಾನ ಸಮಿತಿಯ ವರದಿಗಳನ್ನು ಶೀಘ್ರವೇ ಜಾರಿಗೆ ತರಬೇಕು ಎಂದು ಧರ್ಮೇಂದ್ರ ಪೂಜಾರಿ ಬಗ್ದೂರಿ ಆಗ್ರಹಿಸಿದ್ದಾರೆ.

- ಡಾ. ಸರೋಜಿನಿ ಮಹಿಷಿ ಪರಿಷ್ಕೃತ ವರದಿ 2017,
- ಪ್ರೋ. ಬರಗೂರು ರಾಮಚಂದ್ರಪ್ಪರವರ ಗಡಿನಾಡು ಅಧ್ಯಯನ ವರದಿ,
- ಶ್ರೀ ವಾಟಾಳ ನಾಗರಾಜ ಅವರ ಏಕಸದಸ್ಯ ಗಡಿ ಕನ್ನಡಿಗರ ಸಮಸ್ಯೆಗಳ ಅಧ್ಯಯನದ ಮಧ್ಯಂತರ ವರದಿ.
- ರಾಜ್ಯ ಸಾಂಸ್ಕೃತಿಕ ನೀತಿ –ಶ್ರೀ ಹೆಚ. ಕೆ. ಪಾಟೀಲ ಸಚಿವ ಸಂಪುಟ ಉಪಸಮಿತಿ ವರದಿ.
- ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸೂಚನೆಯ ಮೆರೆಗೆ ಸಿದ್ದವಾದ ಗಡಿ ಪ್ರಾಧಿಕಾರದ ವರದಿಗಳು ಪ್ರಮುಖವಾಗಿವೆ.
- ಉಸ್ಮಾನಿಯಾ ವಿಶ್ವವಿದ್ಯಾಲಯದಲ್ಲಿ ಕನ್ನಡ ವಿಭಾಗ ಇದೆ ಅದನ್ನು ಉಳಿಸಿಕೊಳ್ಳುವ ಜವಾಬ್ದಾರಿ.
- 6 ರಾಜ್ಯಗಳಲ್ಲಿ ಕರ್ನಾಟಕ ಸರ್ಕಾರದಿಂದ ಕನ್ನಡ ಭವನ ನಿರ್ಮಾಣ ಮಾಡಲು ಅನುಮೋದನೆಗೆ ಗೆಜೇಟ್ ಮಾಡಿಸಲು ಒತ್ತಾಯಿಸಬೇಕು.
- ಆರು ರಾಜ್ಯಗಳಿಂದ ಒಬ್ಬರಂತೆ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರಕ್ಕೆ ನಾಮ ನಿರ್ದೇಶಕ ಸದಸ್ಯರನ್ನು ನೇಮಿಸಲು ಕ್ರಮಕೈಗೊಳ್ಳುವಂತೆ ಶಿಫಾರಸ್ಸು ಮಾಡಬೇಕು.

ಹೊರರಾಜ್ಯಗಳಲ್ಲಿ ಕನ್ನಡ ಮಾಧ್ಯಮದಲ್ಲಿ 1ರಿಂದ 10ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ಕನ್ನಡ ವಿದ್ಯಾರ್ಥಿಗಳ ಸಂಖ್ಯೆ ಗಣನೀಯವಾಗಿದೆ. ಕನ್ನಡ ಅಭೀವೃದ್ಧಿ ಪ್ರಾಧಿಕಾರದ ಯೋಜನೆಯಾದ ಗಡಿನಾಡು ಕನ್ನಡ ವಿದ್ಯಾರ್ಥಿಗಳ ಮಾಧ್ಯಮ ಪ್ರಶಸ್ತಿ ಹಾಗೂ ಶಿಷ್ಯವೇತನ ಬಿಡುಗಡೆ ಮಾಡಲು ಒತ್ತಾಯ 2011–12ರಲ್ಲಿ ಆರಂಭವಾದ ಯೋಜನೆ 2022–23ರಿಂದ ಕನ್ನಡ ಅಭಿವೃದ್ಧಿ ಪ್ರಾಧಿಕಾರ ರದ್ದು ಮಾಡಿದೆ ಸರ್ಕಾರ ಈ ಯೋಜನೆಯನ್ನು ಶೀಘ್ರವೇ ಆರಂಭ ಮಾಡಿ ಶಿಷ್ಯ ವೇತನ ನೀಡಿದರೆ ಬಡಕುಟುಂಬದ ಮಕ್ಕಳಿಗೆ ಹೆಚ್ಚಿನ ವಿದ್ಯಾಭ್ಯಾಷ್ಯಕ್ಕೆ ಅನುಕೂಲವಾಗಲಿದೆ. ಗಡಿ ಭಾಗದಲ್ಲಿ ಮಕ್ಕಳು ಕನ್ನಡ ಮಾಧ್ಯಮಕ್ಕೆ ಒಲವು ತೊರಲು ಈ ಯೋಜನೆ ಎಷ್ಟೋಂದು ಪರಿಣಾಮಕಾರಿಯಾಗಿದೆ. ಈ ಕನ್ನಡ ಮಾಧ್ಯಮ ಪ್ರಶಸ್ತಿಯನ್ನು ಶೀಘ್ರವೇ ಆರಂಭಿಸಬೇಕಾಗಿ ಮನವಿ. ವಿಶೇಷವಾಗಿ ತೆಲಂಗಾಣ ರಾಜ್ಯದ ಹೈದರಾಬಾದ ಮತ್ತು ಮೆದಕ ಜಿಲ್ಲೆಯ ಕಾರಾಮುಗಿ, ಕೃಷ್ಣಾ, ಆಂಧ್ರಪ್ರದೇಶದ ಅನಂತಪುರ, ರಾಯದುರ್ಗ, ಮಹಬೂಬ್‌ನಗರ ಹಾಗೂ ತಮಿಳುನಾಡಿನ ಹೊಸೂರು, ಕೃಷ್ಣಗಿರಿ, ತಾಳವಾಡಿ, ನೀಲಗಿರಿ ಮತ್ತು ಗೋವಾ ಮಹಾರಾಷ್ಟ್ರದ ಸಾಂಗ್ಲಿ ಜಿಲ್ಲೆಯ ಜತ್ತ, ಸೊಲ್ಲಾಪುರ ಜಿಲ್ಲೆಯ ಅಕ್ಕಲಕೋಟ, ಮಂಗಳವೇಡ, ದಕ್ಷಿಣ ಸೊಲ್ಲಾಪುರ, ಉಮರ್ಗಾ, ಕೊಲ್ಲಾಪುರ ಜಿಲ್ಲೆ, ಕೇರಳದ ಕಾಸರಗೋಡು ಮತ್ತು ಮಂಜೇಶ್ವರ, ರಾಜ್ಯಗಳಲ್ಲಿ ಕನ್ನಡ ಮಾಧ್ಯಮ ಶಾಲೆಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿವೆ. ಅವರಿಗೆ ಪ್ರೋತ್ಸಾಹದಾಯಕವಾಗಿ ಸರ್ಕಾರ ಕ್ರಮಕೈಗೊಳ್ಳಬೇಕು ಎಂದು ಪತ್ರದಲ್ಲಿ ಧರ್ಮೇಂದ್ರ ಪೂಜಾರಿ ಬಗ್ದೂರಿ ಒತ್ತಾಯಿಸಿದ್ದಾರೆ.

## ವೈಜ್ಞಾನಿಕ ಸಮ್ಮೇಳನಕ್ಕೆ ಖಾಸಮಠದ ಶ್ರೀಗಳ ಪ್ರಯಾಣ



**ಗುರುಮಠಕಲ್:** ಕರ್ನಾಟಕ ರಾಜ್ಯ ಸಂಶೋಧನಾ ಪರಿಷತ್ತಿನ ಅಧ್ಯಕ್ಷ ಹುಲಿಕಲ್ ನಟರಾಜ್ ಅವರ ನೇತೃತ್ವದಲ್ಲಿ ವಿಯೆಟ್ನಾಂ ದೇಶದಲ್ಲಿ ನಡೆಯಲಿರುವ ಅಂತಾರಾಷ್ಟ್ರೀಯ ವೈಜ್ಞಾನಿಕ ಸಮ್ಮೇಳನದಲ್ಲಿ ಗುರುಮಠಕಲ್ ಖಾಸಮಠದ ಶಾಂತವೀರ ಗುರು ಮುರುಘ ರಾಜೇಂದ್ರ ಶ್ರೀಗಳನ್ನು ಒಳಗೊಂಡಂತೆ ಇಬ್ಬರು ಶ್ರೀಗಳು ಹಾಗೂ ಸುಮಾರು 70 ಜನ ಗಣ್ಯರು ಭಾಗವಹಿಸಲಿದ್ದಾರೆ.


ಮೇ 17ರಿಂದ ಮೇ 23ರವರೆಗೆ ನಡೆಯಲಿರುವ ಈ ಸಮ್ಮೇಳನದಲ್ಲಿ ವಿಜ್ಞಾನ, ಸಂಶೋಧನೆ, ಸಂಸ್ಕೃತಿ ಹಾಗೂ ಸಮಾಜಮುಖಿ ಚಿಂತನೆಗಳ ಕುರಿತು ಚರ್ಚೆಗಳು ನಡೆಯಲಿವೆ.

ಈ ಕುರಿತು ಮಾತನಾಡಿದ ಶ್ರೀಗಳು, ಅಂತರರಾಷ್ಟ್ರೀಯ ಮಟ್ಟದ ಸಮ್ಮೇಳನದಲ್ಲಿ ಭಾಗವಹಿಸುವುದು ಹೆಮ್ಮೆಯ ಸಂಗತಿ. ವಿದೇಶದಲ್ಲಿ ಕನ್ನಡ ಭಾಷೆ, ಕನ್ನಡ ಸಂಸ್ಕೃತಿ ಹಾಗೂ ಬಸವ ತತ್ವಗಳನ್ನು ಪರಿಚಯಿಸಲು ಇದು ಉತ್ತಮ ಅವಕಾಶವಾಗಿದೆ ಎಂದು ಹೇಳಿದರು.

ಶ್ರೀಗಳ ಅಂತಾರಾಷ್ಟ್ರೀಯ ಪ್ರವಾಸ ಕುರಿತು ಮಾತನಾಡಿದ ಭಕ್ತರು, ಇದು ಗುರುಮಠಕಲ್ ಪಟ್ಟಣಕ್ಕೆ ಹೆಮ್ಮೆಯ ವಿಷಯವಾಗಿದೆ. ವಿದೇಶದಲ್ಲಿ ಗುರುಮಠಕಲ್ ಖಾಸಮಠದ ಪರಂಪರೆ ಹಾಗೂ ಕನ್ನಡ ಸಂಸ್ಕೃತಿಯ ಪ್ರತಿನಿಧಿತ್ವ ನಡೆಯುತ್ತಿರುವುದು ಸಂತಸದ ಸಂಗತಿ ಎಂದು ಅಭಿಪ್ರಾಯಪಟ್ಟರು.

ಖಾಸಮಠದ ಆವರಣದಲ್ಲಿ ಶುಕ್ರವಾರ ಆಯೋಜಿಸಿದ್ದ ಶ್ರೀಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಗುರುಮಠಕಲ್ ಪಟ್ಟಣದ ನೂರಾರು ಗಣ್ಯರು, ಶ್ರೀಮಠದ ಭಕ್ತರು ಹಾಗೂ ಅಭಿಮಾನಿಗಳು ಭಾಗವಹಿಸಿ ಶ್ರೀಗಳ ವಿದೇಶ ಪ್ರಯಾಣ ಯಶಸ್ವಿಯಾಗಲೆಂದು ಶುಭ ಹಾರೈಸಿದರು.

## ಭಕ್ತರ ಬೃಂದಾವನ ಹಾರಕೂಡ ಮಠ



**ಬಸವಕಲ್ಯಾಣ:** ಹಾರಕೂಡ ಮಠ ಎಲ್ಲ ಸಮುದಾಯದ ಭಕ್ತರು ಧರ್ಮಾಧ್ಯಾತ್ಮಿಕವಾಗಿ, ಶೈಕ್ಷಣಿಕವಾಗಿ ಅರಳಲು ಪೂರಕ ವಾತಾವರಣ ಕಲ್ಪಿಸಿಕೊಡುವ ಭಕ್ತರ ಬೃಂದಾವನವಾಗಿದೆ ಎಂದು ಬೆಂಗಳೂರಿನ ಚಿಂತಕರು, ಕವಿಗಳಾದ ಡಾ. ರಾಜಶೇಖರ ಮಠಪತಿ ರವರು ನುಡಿದರು. ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಡಾ. ಚನ್ನವೀರ ಶಿವಾಚಾರ್ಯರ ಪಾವನ ಸಾನಿಧ್ಯದಲ್ಲಿ ನಿವೃತ್ತ ಶಿಕ್ಷಕ, ಸಾಹಿತಿ ಬಸವರಾಜ ಐನೋಳಿ ಚಿಂಚೋಳಿ ಇವರ ಅಭಿನಂದನಾ ಗ್ರಂಥ ಮೃದುವಚನ ಲೋಕಾರ್ಪಣೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಡಾ. ಮಠಪತಿ ರವರು ಸಮಾಜದ ಎಲ್ಲಾ ಆಯಾಮಗಳಲ್ಲಿ ಸಾತ್ವಿಕ ಪರಿವರ್ತನೆ ಬಯಸುವ ಡಾ. ಚನ್ನವೀರ ಶಿವಾಚಾರ್ಯರು, ಇಡಿ ಸಮಾಜದ ಉನ್ನತಿಗೆ ವಿಶೇಷವಾಗಿ ಶಿಕ್ಷಣ ಕ್ಷೇತ್ರಕ್ಕೆ ಅನುಪಮ ಕೊಡುಗೆ ನೀಡುತ್ತಿರುವುದು ಈ ಭಾಗದ ಜನತೆಯ ಭಾಗ್ಯ.

ಪ್ರಾಥಮಿಕ ಶಾಲಾ ಶಿಕ್ಷಕನಾಗಿ ಸಾರ್ಥಕ ಸೇವೆ ಸಲ್ಲಿಸಿ ನಿವೃತ್ತಿಯಾದ ಬಸವರಾಜ ಐನೋಳಿ ರವರ ಕುರಿತಾಗಿ ಅಭಿನಂದನಾ ಗ್ರಂಥ ಮೃದುವಚನ ತಮ್ಮ ಮಠದಿಂದ ಪ್ರಕಟಿಸಿ ಲೋಕಾರ್ಪಣೆ ಮಾಡುತ್ತಿರುವುದು, ಪೂಜ್ಯರು ಇಡಿ ಶಿಕ್ಷಕ ಸಮುದಾಯದ ಮೇಲೆ ಇಟ್ಟಿರುವ ಅಪಾರ ಪ್ರೀತಿ ಮತ್ತು ಗೌರವಕ್ಕೆ ದೊಡ್ಡ ನಿದರ್ಶನವಾಗಿದೆ ಎಂದು ನುಡಿದ ಅವರು ಸೇವೆ ಹಿರಿದಾದಷ್ಟು ಬದುಕು ಸಾರ್ಥಕವಾಗುತ್ತದೆ ಮತ್ತು ಓದಿನಿಂದ ಸಂತ್ರಪ್ತಿ ಲಭಿಸುತ್ತದೆ ಎಂದು ಹೇಳಿದರು.

ಈ ಕೃತಿಯ ಪ್ರಧಾನ ಸಂಪಾದಕರಾದ ಸಾಹಿತಿ ಡಾ. ಗವಿಸಿದ್ದಪ್ಪ ಪಾಟೀಲ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಅಭಿವಂದಿತರಾದ ಬಸವರಾಜ ಐನೋಳಿ ಅವರು ಪೂಜ್ಯರಿಗೆ ಕೃತಜ್ಞತೆ ನುಡಿ ಸಮರ್ಪಿಸಿದರು. ಸಮಾರಂಭದ ಅಧ್ಯಕ್ಷತೆ ಮಲ್ಲಿನಾಥ ಹಿರೇಮಠ ಹಾರಕೂಡ ವಹಿಸಿದ್ದರು. ಬಿಕೆ ಹಿರೇಮಠ, ಸುಭಾಷಚಂದ್ರ ನಾಗರಾಳೆ, ಮೇಘರಾಜ ನಾಗರಾಳೆ, ಸಿದ್ರಾಮಪ್ಪ ಗುದಗೆ, ವಿಜಯಕುಮಾರ ಸಂಗೋಳಗೆ ಅತಿಥಿಗಳಾಗಿ ಭಾಗವಹಿಸಿದ್ದರು. ಕಾರ್ತಿಕ ಸ್ವಾಮಿ, ರೇವಣಸಿದ್ಧಯ್ಯ ಸ್ವಾಮಿ ಮತ್ತು ಶರಣಪ್ಪ ಜಮಾದಾರ ಸಂಗೀತ ಸೇವೆ ಸಲ್ಲಿಸಿದರು. ಕುಮಾರಿ ವಿದ್ಯಾಶ್ರೀ ಕಲ್ಲೂರ ಭಾರತ ನಾಟ್ಯ ಪ್ರದರ್ಶನ ಮಾಡಿದರು. ಸಮಾರಂಭದಲ್ಲಿ ಐನೋಳಿ ದಂಪತಿಗಳಿಗೆ ಹಾರಕೂಡ ಶ್ರೀಗಳು, ಚಿನ್ನದ ಉಂಗುರವನ್ನಿಟ್ಟು ಸತ್ಕರಿಸಿ ಆಶೀರ್ವಾದಿಸಿದರು. ಅಂಬರಾಯ ಉಗಾಜಿ ನಿರೂಪಿಸಿದರು.

## ಯುದ್ಧದ ಕಾರ್ಮೋಡದ ನಡುವೆ ಜಗತ್ತಿಗೆ ನಮ್ಮ ದೇಶವೇ ಮಾರ್ಗದರ್ಶಕ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಜಗತ್ತಿನ ಮೇಲೆ ಇಂದು ಯುದ್ಧದ ಕಾರ್ಮೋಡಗಳು ಕವಿದಿವೆ. ಇಂತಹ ಅಶಾಂತಿಯ ವಾತಾವರಣದಲ್ಲಿ ಶಾಂತಿ ಮತ್ತು ಸಹಬಾಳ್ವೆಯ ಮಂತ್ರ ಬೋಧಿಸುತ್ತಿರುವ ಭಾರತವು ಇಡೀ ಜಗತ್ತಿಗೆ ದಾರಿದೀಪವಾಗಿ ಹೊರಹೊಮ್ಮುತ್ತಿದೆ" ಎಂದು ಡೋಣಗಾಂವ (ಎಂ) ಗ್ರಾಮದ ಡಾ. ಶಂಭುಲಿಂಗ ಶ್ರೀಗಳು ಅಭಿಪ್ರಾಯಪಟ್ಟರು.

ತಾಲೂಕಿನ ಡೋಣಗಾಂವ (ಎಂ) ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದ್ದ ಹನುಮಾನ ಮಂದಿರದ ಕಳಸಾರೋಹಣ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡುತ್ತಿದ್ದರು.

**ಧಾರ್ಮಿಕ ಸಂಸ್ಕಾರವೇ ದೇಶದ ಅಡಿಪಾಯ**

ನಮ್ಮ ದೇಶದ ಸಂಸ್ಕೃತಿಯ ಬಗ್ಗೆ ಮಾತನಾಡಿದ ಡಾ. ಶಂಭುಲಿಂಗ ಶ್ರೀಗಳು, "ನಮ್ಮ ದೇಶದ ಮಣ್ಣಿನಲ್ಲಿ ಹುಟ್ಟಿ ಹೋದ ಮಹಾನ್ ಶರಣರು, ಧಾರ್ಮಿಕ



ಚಿಂತಕರು ಮತ್ತು ಸಮಾಜ ಸುಧಾರಕರು ನೀಡಿದ ಕೊಡುಗೆ ಅಪಾರವಾದುದು. ಅವರ ತತ್ವಗಳು ನಮ್ಮನ್ನು ಇಂದಿಗೂ ಮುನ್ನಡೆಸುತ್ತಿವೆ" ಎಂದರು.

ಕಾರ್ಯಕ್ರಮದ ಘನ ನೇತೃತ್ವ ವಹಿಸಿದ್ದ ಡಾ. ಶಾಂತವೀರ ಶ್ರೀಗಳು ಆಶೀರ್ವಚನ ನೀಡಿ, "ದೇವರು ಎಲ್ಲೋ ಹೊರಗಿಲ್ಲ, ಪ್ರತಿ ಮನುಷ್ಯನ ಆತ್ಮದಲ್ಲಿ ಅಡಗಿದ್ದಾನೆ. ಮನುಷ್ಯ ಮೊದಲು ಪರಸ್ಪರ ಪ್ರೀತಿಯಿಂದ ಬದುಕುವುದನ್ನು ಕಲಿಯಬೇಕು. ಜೀವನದಲ್ಲಿ ಸತ್ಕರ್ಮಗಳನ್ನು ಮಾಡುವುದೇ ನಿಜವಾದ ಭಕ್ತಿ" ಎಂದು ಮಾರ್ಮಿಕವಾಗಿ ನುಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಸಾಯೀಗಾಂವ ಶ್ರೀಗಳು ಮಾತನಾಡಿ, "ದೇವನೊಬ್ಬ ನಾಮ ಹಲವು ಎಂಬ ಸತ್ಯವನ್ನು ನಾವು ಅರಿಯಬೇಕು. ಇಂದಿನ ಒತ್ತಡದ ಜೀವನಶೈಲಿಯಲ್ಲಿ ಮನಸ್ಸಿನ ಶಾಂತಿಗಾಗಿ ದೇವರ ನಾಮಸ್ಮರಣೆ ಅತ್ಯಗತ್ಯ" ಎಂದು ತಿಳಿಸಿದರು.

**ಸಂಭ್ರಮದ ಮೆರವಣಿಗೆ ಮತ್ತು ಧಾರ್ಮಿಕ ವಿಧಿಗಳು**

ಗ್ರಾಮದ ವಿವಿಧ ಬಡಾವಣೆಗಳ ಮೂಲಕ ಮಂಗಳವಾದ್ಯಗಳೊಂದಿಗೆ ದೇವರ ಕಳಸದ ಭವ್ಯ ಮೆರವಣಿಗೆ ನಡೆಯಿತು. ಬಳಿಕ ವಿಧ್ಯುಕ್ತವಾಗಿ ಕಳಸಾರೋಹಣ ನೆರವೇರಿಸಲಾಯಿತು. ಗ್ರಾಮದ ನವಯುವಕರು ಜಾನಪದ ಹಾಡುಗಳಿಗೆ ಹೆಜ್ಜೆ ಹಾಕಿ ಕುಣಿದು ಕುಪ್ಪಳಿಸಿದ್ದು ನೋಡುಗರ ಗಮನ ಸೆಳೆಯಿತು.

**ಗೌರವ ಸಮರ್ಪಣೆ:** ಕಾರ್ಯಕ್ರಮಕ್ಕೆ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಮಹಿಳೆಯರಿಗೆ ಭಕ್ತಿಯ ಸಂಕೇತವಾಗಿ ಕಾಣಿಕೆ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ಹೊಂಡಾಳೆ, ಸಿದ್ದು ಹೂಗಾರ್, ಹಾವಗಿ ಬಳ್ತೆ, ವೈಜೀನಾಥ ಹೊಂಡಾಳೆ, ಬಬನ ಪಾಟೀಲ್ ಸೇರಿದಂತೆ ಭಜನಾ ಮಂಡಳಿಯ ಸದಸ್ಯರು ಹಾಗೂ ಗ್ರಾಮದ ಸಮಸ್ತ ಸದ್ಭಕ್ತರು ಉಪಸ್ಥಿತರಿದ್ದರು. ಭಕ್ತಿ ಮತ್ತು ಸಂಭ್ರಮದ ವಾತಾವರಣದಲ್ಲಿ ಕಾರ್ಯಕ್ರಮ ಯಶಸ್ವಿಯಾಗಿ ಸಂಪನ್ನಗೊಂಡಿತು.

## ಮೇಲ್ಚಾವಣಿ ಕುಸಿದು ನಾಲ್ವರ ಸಾವು; ಉಸ್ತುವಾರಿ ಸಚಿವ ಭೇಟಿ, ಪರಿಹಾರ ಘೋಷಣೆ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಆಲಮೇಲ ತಾಲೂಕಿನ ಮೊರಟಗಿ ಗ್ರಾಮದಲ್ಲಿ ಮನೆಯ ಮೇಲ್ಚಾವಣಿ ಕುಸಿದು ಸಾವಿಗೀಡಾದವರ ನಾಲ್ಕು ಜನರು ಸಾವಿಗೀಡಾದ ಘಟನಾ ಸ್ಥಳಕ್ಕೆ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಅವರು ಇಂದು ಶುಕ್ರವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಉಪಸ್ಥಿತರಿದ್ದ ಜಿಲ್ಲಾಧಿಕಾರಿ ಡಾ. ಆನಂದ ಕೆ., ಎಸ್ಪಿ ಲಕ್ಷ್ಮಣ ನಿಂಬರಗಿ ಹಾಗೂ ಜಿ. ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಿಷಿ ಆನಂದ ಅವರು ಸಚಿವರಿಗೆ ಘಟನೆಯ ಬಗ್ಗೆ ಸಂಪೂರ್ಣ ಮಾಹಿತಿ ನೀಡಿದರು.

ಈ ಅವಘಡದಲ್ಲಿ ದಂಪತಿಯಾದ ಗುರುನಾಥ ಬಡಿಗೇರ(35), ಜ್ಯೋತಿ ಬಡಿಗೇರ(28) ಮತ್ತು ಅವರ ಮಕ್ಕಳಾದ ಕಾಳಮ್ಮ ಬಡಿಗೇರ(13) ಹಾಗೂ ಕೀರ್ತಿ ಬಡಿಗೇರ(9) ಸಾವಿಗೀಡಾಗಿದ್ದಾರೆ.



ಗುರುನಾಥ ಬಡಿಗೇರ ತಾಯಿ ಶಾಂತಾಬಾಯಿ ಮತ್ತು ಮಗ ವೀರೇಶ(10) ಮತ್ತೊಂದು ಮನೆಯಲ್ಲಿ ಮಲಗಿದ್ದರಿಂದ ಅಪಾಯದಿಂದ ಪಾರಾಗಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

**ಕುಟುಂಬ ಸದಸ್ಯರಿಗೆ ಸಾಂತ್ವನ, ಪರಿಹಾರ ಘೋಷಣೆ**

ಬಳಿಕ ಬಡಿಗೇರ ಗುರುನಾಥ ಬಡಿಗೇರ ತಾಯಿ ಶಾಂತಾಬಾಯಿ ಮತ್ತು ಪುತ್ರ ವೀರೇಶ ಹಾಗೂ ಕುಟುಂಬ ಸದಸ್ಯರನ್ನು ಭೇಟಿ ಮಾಡಿದ ಸಚಿವರು ಸಾಂತ್ವನ ಹೇಳಿದರು.

ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಸಚಿವರು, ಈ ದುರ್ಘಟನೆ ನಡೆಯಬಾರದಿತ್ತು. ಗುರುನಾಥ ಬಡಿಗೇರ ದಂಪತಿ ತಮ್ಮ ಮನೆಯ ದುರಸ್ಥಿ ಹಿನ್ನೆಲೆ ಬಾಡಿಗೆ ಮನೆಯಲ್ಲಿ ವಾಸವಾಗಿದ್ದರು. ಇಂದು ತಮ್ಮ ಮನೆಗೆ ಮರಳುವವರಿದ್ದರು. ಆದರೆ ವಿಧಿಯಾಟಕ್ಕೆ ಬಲಿಯಾಗಿದ್ದಾರೆ. ಸಾವಿಗೀಡಾದ ನಾಲ್ಕು ಜನರ ಕುಟುಂಬಕ್ಕೆ ತಲಾ ರೂ. 5 ಲಕ್ಷದಂತೆ ಒಟ್ಟು ರೂ. 20 ಲಕ್ಷ ಪರಿಹಾರ ನೀಡಲಾಗುವುದು ಮತ್ತು ಬದುಕುಳಿದಿರುವ ಬಾಲಕ ವೀರೇಶ ಬಡಿಗೇರ ವಿದ್ಯಾಭ್ಯಾಸಕ್ಕೆ ನೆರವಾಗಲಿದೆ. ಪರಿಹಾರದ ಹಣವನ್ನು ಬಾಲಕನ ಹೆಸರಿನಲ್ಲಿ ಬ್ಯಾಂಕಿನಲ್ಲಿ ಠೇವಣಿ ಇಡಲಾಗುವುದು. ಸಾವಿಗೀಡಾದವರ ಶವಪರೀಕ್ಷೆ ಮೊರಟಗಿಯಲ್ಲಿಯೇ ನಡೆಯಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಿಂದಗಿ ಶಾಸಕ ಅಶೋಕ ಮನಗೂಳಿ, ಮಾಜಿ ಶಾಸಕ ರಮೇಶ ಭೂಸನೂರ, ಜಿ. ಪಂ. ಮಾಜಿ ಸದಸ್ಯ ನರಸಿಂಗಸಾ ತಿವಾರಿ, ಮುಖಂಡ ಅಶೋಕ ವಾರದ, ಜಿಲ್ಲಾ ಆರೋಗ್ಯಾಧಿಕಾರಿ ಸಂಪತಕುಮಾರ ಗುಣಾರಿ, ಕಂದಾಯ, ಆರೋಗ್ಯ, ಜಿ. ಪಂ ಪೊಲೀಸ್, ಅಗ್ನಿಶಾಮಕ ದಳ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಅಶಾಶ್ವತದ ನೆರಳಲ್ಲಿ ನಿಂತು ಶಾಶ್ವತದ ನೆಲೆಗಾಣುವುದು ಹೇಗೆ..!?



ತತ್ತ–ಭಾವಾರ್ಥ
● ಬಸವರಾಜ ಶರಣರು ಬೋರಗಿ
ತಾತ್ವಿಕ ಚಿಂತಕರು

**ಕಗ್ಗ:**

**ಕಟ್ಟಿಗೆಯ ಹೊರೆಮೇಲೆ**
**ಕಟ್ಟಿ ಗೂಡನು ಹಕ್ಕಿ ತಾ–**
**ನಿಟ್ಟ ಮರಿಮೊಟ್ಟೆಗಳುಳಿದು ಬಾಳುವವೆ !? ।**
**ಇಟ್ಟ ಹೊರೆ ಬಿಚ್ಚಲದು**
**ಕೆಟ್ಟೋಯಿತು ಬಾಳು**
**ಕಟ್ಟಕಡೆಯ ಸತ್ಯವಿದು–ಮಂದ ಮನುಜ ॥**

**ಕಟ್ಟಿಗೆಯ ಹೊರೆ, ಹಕ್ಕಿಯ ಗೂಡು, ಮನುಷ್ಯನ ಅಶಾಶ್ವತ ಬದುಕು...**

ಮಾನವ ಬದುಕಿನ ಬಗೆಗೆ ಕಗ್ಗ ನೀಡಿರುವ ಚಿಂತನೆಗಳು ಸರಳ ದೃಶ್ಯಗಳಲ್ಲಿ ಆಳವಾದ ತತ್ವಶಾಸ್ತ್ರವನ್ನು ಮಡಚಿಟ್ಟಿವೆ. ಈ ಕಗ್ಗದಲ್ಲೂ ಅದೇ ಶೈಲಿ ಕಾಣಿಸುತ್ತದೆ.

**ಕಟ್ಟಿಗೆಯ ಹೊರೆ ಇದು.. ಅಶಾಶ್ವತ ವೇದಿಕೆ**

'ಕಟ್ಟಿಗೆಯ ಹೊರೆ' ಎಂದರೆ ಅರಣ್ಯದಿಂದ ಒಯ್ಯಲು ಕಟ್ಟಿದ ಕಟ್ಟಿಗೆಯ ಬಣವೆ. ಇದನ್ನು ತಾತ್ವಿಕವಾಗಿ ನೋಡಿದರೆ ಮನುಷ್ಯ ತನ್ನ ಬದುಕನ್ನು ನಿರ್ಮಿಸಿಕೊಳ್ಳುವ ವೇದಿಕೆ, ಅವಲಂಬನೆಗಳು, ಆಧಾರಗಳು, ಪರಿಸ್ಥಿತಿಗಳು ಇವೆಲ್ಲವೂ ತಾತ್ಕಾಲಿಕ



ಕಟ್ಟಡಗಳು.

**ಕಟ್ಟಿಗೆಯು ಶಾಶ್ವತವಾದ ಮರದಂತೆ ಬೇರುಬಿಟ್ಟು ನಿಂತಿಲ್ಲ;** ಅದು ಕ್ಷಣಿಕವಾಗಿ ಸಾಗಿಸುವಿಕೆಗಾಗಿ ಕಟ್ಟಿರುವ ಹೊರೆ. ಹಾಗೆಯೇ ವ್ಯಕ್ತಿಯ ಬದುಕಿನ ಆಧಾರಗಳು ಕೂಡ ನಾಳೆಗೆ ನಿಲ್ಲುವುದಿಲ್ಲ ಯಾವಾಗ ಭಾಗ್ಯ, ಸಂಪತ್ತು ಬದಲಾಗುತ್ತವೆ, ಯಾವಾಗ ಆರೋಗ್ಯ ಜಾರುತ್ತದೆ, ಯಾವಾಗ ಸಂಬಂಧಗಳು ಬದಲಾಗುತ್ತವೆ ಎಂಬುದೇ ಗೊತ್ತಾಗುವುದಿಲ್ಲ.

**ಹಕ್ಕಿಯ ಗೂಡು ಇದು ಮೋಹ ಮತ್ತು ಭ್ರಮೆ**

ಈ ಕಟ್ಟಿಗೆಯ ಮೇಲೆ ಹಕ್ಕಿಯೊಂದು ಗೂಡು ಕಟ್ಟುತ್ತದೆ. ಅದರ ದೃಷ್ಟಿಯಲ್ಲಿ "ಈ ಗೂಡು ನನ್ನದು, ಈ ಮೊಟ್ಟೆಗಳು ನನ್ನ ಭವಿಷ್ಯ, ಈ ಮರಿಗಳು ನನ್ನ ವಂಶ, ನಾನು ಇಲ್ಲಿ ಸುಖವಾಗಿ ಜೀವಿಸುವೆ" ಎಂದುಕೊಳ್ಳುತ್ತದೆ. ಅದಕ್ಕೆ ಅಲ್ಲಿ ಒಂದು ಶಾಶ್ವತತೆಯ ಭ್ರಮೆ ಕಾಣಿಸುತ್ತದೆ. ಇದು ಮನುಷ್ಯನ ಮನೋಭಾವನೆಯಂತೆಯೇ. ಮನುಷ್ಯನು ಸಹ ತನ್ನ ಮನೆ, ಹಣ, ವೃತ್ತಿ, ಗೌರವ, ಕುಟುಂಬ ಇವುಗಳನ್ನು ಕಟ್ಟುತ್ತಾನೆ ಮತ್ತು ಅವುಗಳಲ್ಲಿ ಶಾಶ್ವತತೆ ಹುಡುಕುತ್ತಾನೆ.

ಆದರೆ ಮನುಷ್ಯ ಗಮನಿಸದ ಒಂದು ಸತ್ಯ ಇದೆ,

ಅವನು ಕಟ್ಟುವ ಜಗತ್ತು, ಕಟ್ಟಿಗೆಯ ಹೊರೆ ಇದ್ದಂತೆ ಪರಾಧೀನ.

**ಹೊರೆ ಬಿಚ್ಚುವ ಕ್ಷಣ ಇದು ಸತ್ಯದ ಉದ್ಘಾಟನೆ**

ಯಾವಾಗ ಆ ಕಟ್ಟಿಗೆಯ ಕಟ್ಟನ್ನು ಬಿಚ್ಚಲಾಗುತ್ತದೆಯೊ ಆಗ ಕಟ್ಟಿಗೆಗಳು ಕೆಳಗೆ ಬಿದ್ದು ಚಲ್ಲಾಪಿಲ್ಲಿಯಾಗುತ್ತವೆ.

ಹಕ್ಕಿಯ ಗೂಡು ಒಡೆದುಹೋಗುತ್ತದೆ, ಮೊಟ್ಟೆಗಳು ನಾಶವಾಗುತ್ತವೆ, ಅದರ 'ಶಾಶ್ವತ ಜೀವನ' ಕ್ಷಣದಲ್ಲಿ ಕೊನೆಗೊಳ್ಳುತ್ತದೆ.

ಇದು ನಮಗೆ ಹೇಳುವ ಗಾಢ ತಾತ್ವಿಕ ಬಿಂದು.

ಅಶಾಶ್ವತವನ್ನು ಶಾಶ್ವತವೆಂದು ಭ್ರಮಿಸುವುದು ಬದುಕಿನ ದೊಡ್ಡ ಮೋಹ.

ಮನುಷ್ಯನ ಬದುಕು ಸಹ ಅದೇ ರೀತಿಯದು.

ಒಂದು ಅನಾಹುತ, ಒಂದು ದುರಂತ, ಒಂದು ಅನಾರೋಗ್ಯ, ಒಂದು ಆರ್ಥಿಕ ಬದಲಾವಣೆ, ಒಂದು ಆಘಾತ ಇವುಗಳಲ್ಲಿ ಯಾವುದಾದರೂ ಒಂದು ಘಟನೆ ಕಟ್ಟಿಗೆಯ ಕಟ್ಟು ಬಿಚ್ಚುವುದಕ್ಕೆ ಸಮನಾಗಿವೆ.

ನಮ್ಮ 'ಗೂಡುಗಳು' ಅಹಂಕಾರ, ದೇಹಾಭಿಮಾನ, ಸಂಪತ್ತು, ಪದವಿ, ಕುಟುಂಬ ಇವೆಲ್ಲವೂ ನಾಶವಾಗುವಂತಿವೆ. ಕಗ್ಗ ಹೇಳುವ ಕಟ್ಟಕಡೆಯ ಸತ್ಯವೇನಂದರೆ, ಮನುಷ್ಯನ ಬದುಕು ಶಾಶ್ವತವಲ್ಲ, ಅಶಾಶ್ವತ. ಹಕ್ಕಿಯ ಗೂಡಿನಂತೆಯೇ ಮನುಷ್ಯನ ಗೃಹ, ಕಟ್ಟಿಗೆಯ ಹೊರೆ ಹಾಗೆ ಜೀವದ ವೇದಿಕೆ, ಮೊಟ್ಟೆಯ ಹಾಗೆ ಆಸೆಗಳ ಕುರುಹುಗಳು, ಮರಿಯ ಹಾಗೆ ಭವಿಷ್ಯದ ಕನಸುಗಳು.

ಒಂದು ಸಣ್ಣ ಬದಲಾವಣೆಯಿಂದಲೇ ಯಾವುದೂ ಬಾಕಿ ಉಳಿಯುವುದಿಲ್ಲ. ಈ ಕಗ್ಗ ಮನುಷ್ಯನಿಗೆ ಹೇಳುವುದು ಮೋಹದಲ್ಲಿ ಸಿಲುಕಬೇಡ, ನಿತ್ಯವಲ್ಲದುದರಲ್ಲಿ ಶಾಶ್ವತತೆಯನ್ನು ಹುಡುಕಬೇಡ, ಬದುಕಿನ ಸತ್ಯವನ್ನು ಅರಿತುಬಾಳು. ಇದೇ ಈ ಕಗ್ಗದ ತಾತ್ವಿಕ ಆಳ, ಜೀವನದ ನಿಜ, ಮತ್ತು ಮಾನವೀಯ ಬೋಧನೆಯಾಗಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)